Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕನ್ನಡ ದಿನಪತ್ರಿಕೆಗಳ ತುಣುಕು

## 25-11-2020



# ಪರಿವಿಡಿ

1. ಪ್ರಜಾ ವಾಣಿ
2. ಕನ್ನಡ ಪ್ರಭ
3. ವಿಜಯ ಕರ್ನಾಟಕ
4. ವಿಜಯ ವಾಣಿ
5. ವಿಶ್ವ ವಾಣಿ
6. ಉದಯ ವಾಣಿ
7. ಸಂಯುಕ್ರ ಕರ್ನಾಟಕ
8. ಹೊಸ ದಿಗಂತ
9. ವಾರ್ತಾ ಭಾರತಿ
10. ಜಯಕಿರಣ
11. ಸಂಜೆ ವಾಣಿ
12. ಈ ಸಂಜೆ

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 25-11-2020 |
| --- | --- |
| Page No | 1 |

## ಕೋವಿಡ್ –19: ಲಸಿಕೆ ವಿತರಣೆಗೆ 29 ಸಾವಿರ ಕೇಂದ್ರಗಳು

# ಲಸಿಕೆ ವಿತರಣೆಗೆ ಸಿದ್ಧತೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ದೇಶದಾದ್ಯಂತ ಕೋವಿಡ್ ಲಸಿಕೆ ವಿತರಣೆಗೆ ಸಿದ್ಧತೆ ನಡೆಸಲು ಪ್ರಧಾನಿ ನರೇಂದ್ರ ಮೋದಿ ಸೂಚಿಸಿರುವ ಬೆನ್ನಲ್ಲೇ, ರಾಜ್ಯ ಸರ್ಕಾರ ಕೂಡ ಲಸಿಕೆ ವಿತರಣೆಗಾಗಿ ಸುಮಾರು 29,451 ಕೇಂದ್ರಗಳನ್ನು ಸಿದ್ಧಪಡಿಸಿರುವುದಾಗಿ ತಿಳಿಸಿದೆ.

ಪ್ರಧಾನಿ ಮೋದಿ ಮಂಗಳವಾರ ನಡೆಸಿದ ವರ್ಚುವಲ್ ಸಭೆಯ ಬಳಿಕ ಗೃಹ ಸಚಿವ ಬಸವರಾಜ ಬೊಮ್ಮಾಯಿ ಮತ್ತು ಆರೋಗ್ಯ ಸಚಿವ ಡಾ.ಕೆ.ಸುಧಾಕರ್ ಅವರು ರಾಜ್ಯದಲ್ಲಿ ನಡೆಸಿರುವ ಸಿದ್ಧತೆಗಳ ಕುರಿತು ವಿವರ ನೀಡಿದರು.

‘ಕೋವಿಡ್ ಲಸಿಕೆ ವಿತರಣೆಗೆ ರಾಜ್ಯ ಸರ್ಕಾರಗಳು ಸಜ್ಜಾಗಬೇಕು. ಚುನಾವಣೆ ಸಂದರ್ಭದಲ್ಲಿ ಬೂತ್‌ಗಳನ್ನು ತಯಾರಿ ಮಾಡಿಕೊಳ್ಳುವಂತೆ, ಲಸಿಕೆ ವಿತರಣೆ ಕಾರ್ಯಕ್ಕೆ ಸಂಬಂಧಿಸಿದಂತೆ ಕೇಂದ್ರಗಳನ್ನು ಸಿದ್ಧಪಡಿಸಿಕೊಳ್ಳಬೇಕು’ ಎಂದು ಪ್ರಧಾನಮಂತ್ರಿ ಸಲಹೆ ನೀಡಿದರು ಎಂದು ಬಸವರಾಜ ಬೊಮ್ಮಾಯಿ ಸುದ್ದಿಗಾರರಿಗೆ ತಿಳಿಸಿದರು.

‘ರಾಜ್ಯ ಮಟ್ಟದಲ್ಲಿ ತಕ್ಷಣವೇ ಸಂಚಾಲನ ಸಮಿತಿ, ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿ ಕಾರ್ಯಪಡೆಗಳನ್ನು ರಚಿಸಬೇಕು. ಬ್ಲಾಕ್ ಮಟ್ಟದಲ್ಲೂ ವ್ಯವಸ್ಥೆ ಮಾಡಬೇಕು. ಆರೋಗ್ಯ ಕಾರ್ಯಕರ್ತರು ಮತ್ತು ಸ್ವಯಂ ಸೇವಕರಿಗೆ ಈ ಸಂಬಂಧ ತರಬೇತಿ ನೀಡಬೇಕು. ಸಾರ್ವಜನಿಕರಿಗೆ ಈ ಬಗ್ಗೆ ಅರಿವು ಮೂಡಿಸುವ ಕಾರ್ಯವೂ ಆಗಬೇಕು. 2 ರಿಂದ 3 ಡೋಸ್ ಲಸಿಕೆ ನೀಡಬೇಕಾಗಬಹುದು. ಪ್ರತಿಯೊಬ್ಬ ವ್ಯಕ್ತಿಗೂ ನೀಡುವ ಲಸಿಕೆಯ ಮಾಹಿತಿಯನ್ನು ಡಿಜಿಟಲ್ ವೇದಿಕೆಯಲ್ಲಿ ಸಂಗ್ರಹಿಸಿ ಇಡಲಾಗುವುದು ಎಂದೂ ಹೇಳಿದ್ದಾರೆ’ ಎಂದರು.

‘ಕೋವಿಡ್‌ನಿಂದ ಸಾವಿಗೀಡಾಗುವವರ ಸಂಖ್ಯೆ ಶೇ 1 ಕ್ಕಿಂತಲೂ ಕಡಿಮೆ ಇರಬೇಕು ಮತ್ತು ಪಾಸಿಟಿವ್ ಸಂಖ್ಯೆ ಶೇ 5 ಮೀರಬಾರದು. ಇದಕ್ಕಾಗಿ ಹೆಚ್ಚಿನ ಸಂಖ್ಯೆಯಲ್ಲಿ ಪರೀಕ್ಷೆಗಳನ್ನು ಮಾಡಬೇಕು. ಈ ನಿಟ್ಟಿನಲ್ಲಿ ಕರ್ನಾಟಕ ಸೇರಿ ಕೆಲವು ರಾಜ್ಯಗಳು ಉತ್ತಮವಾಗಿ ಕಾರ್ಯನಿರ್ವಹಿಸಿವೆ’ ಎಂದರು.

4ನೇ ಪುಟ ನೋಡಿ

### ‘2,855 ಶೀತಲೀಕರಣ ಕೇಂದ್ರ’

ರಾಜ್ಯದಲ್ಲಿ ಲಸಿಕೆ ಸಂಗ್ರಹ ಮತ್ತು ವಿತರಣೆಗಾಗಿ 2,855 ಶೀತಲೀಕರಣ ಕೇಂದ್ರಗಳು ಲಭ್ಯವಿದೆ ಎಂದು ಡಾ.ಸುಧಾಕರ್ ತಿಳಿಸಿದರು.



ಸಾರ್ವಜನಿಕರಿಗೆ ಲಸಿಕೆ ಶೀಘ್ರ ವಿತರಿಸಲು ಸಾಧ್ಯವಾಗುವಂತೆ, ಹೊಸದಾಗಿ ಬೆಂಗಳೂರು ನಗರ, ಶಿವಮೊಗ್ಗ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಪ್ರಾದೇಶಿಕ ಲಸಿಕೆ ಸಂಗ್ರಹ ಕೇಂದ್ರಗಳನ್ನು ಆರಂಭಿಸಲು ಪ್ರಸ್ತಾಪಿಸಲಾಗಿದೆ. ಈ ಕೇಂದ್ರಗಳಿಗೆ ವಾಕ್ ಇನ್ ಕೂಲರ್, ವಾಕ್ ಇನ್ ಫ್ರೀಜರ್ ನೀಡುವ ಪ್ರಸ್ತಾವವೂ ಇದೆ ಎಂದು ಅವರು ಹೇಳಿದರು.

ರಾಜ್ಯದಲ್ಲಿ 10 ವಾಕ್ ಇನ್ ಕೂಲರ್ ಮತ್ತು 4 ವಾಕ್ ಇನ್ ಫ್ರೀಜರ್‌ಗಳು ಇವೆ. ಕೇಂದ್ರ ಆರೋಗ್ಯ ಸಚಿವಾಲಯ 3 ವಾಕ್ ಇನ್ ಕೂಲರ್, 2 ವಾಕ್ ಇನ್ ಫ್ರೀಜರ್ ನೀಡಲಿದೆ. ಇದಕ್ಕಾಗಿ ಸಿವಿಲ್ ಕಾಮಗಾರಿ ಆರಂಭವಾಗಿದೆ. ಕೋಲ್ಡ್ ಸ್ಟೋರೇಜ್ ಮತ್ತು ಸಂಗ್ರಹಕ್ಕೆ ಸಂಬಂಧಿಸಿದಂತೆ, ಡೋಸ್‌ಗಳು ಮತ್ತಿತರ ಮಾಹಿತಿ ಅಗತ್ಯವಿದೆ. ಈ ಮಾಹಿತಿಯನ್ನು ಶೀಘ್ರ ಒದಗಿಸುವಂತೆ ಕೇಂದ್ರ ಆರೋಗ್ಯ ಸಚಿವಾಲಯಕ್ಕೆ ಕೋರಲಾಗಿದೆ. ಲಸಿಕೆ ಕಾರ್ಯಕ್ರಮಕ್ಕೆ ಅಗತ್ಯವಿರುವ ಡ್ರೈ ಸ್ಟೋರೇಜ್ ಬಗ್ಗೆಯೂ ನಿರ್ಧಾರ ಕೈಗೊಳ್ಳಬೇಕಿದೆ ಎಂದು ತಿಳಿಸಿದರು.

### ಅಡ್ಡಪರಿಣಾಮದ ವದಂತಿ: ಪ್ರಧಾನಿ ಎಚ್ಚರಿಕೆ

ನವದೆಹಲಿ (ಪಿಟಿಐ): ಲಸಿಕೆಯಿಂದ ಅಡ್ಡಪರಿಣಾಮಗಳು ಉಂಟಾಗುತ್ತವೆ ಎಂಬ ವದಂತಿ ಹರಡಬಹುದು. ಜನರಲ್ಲಿ ಜಾಗೃತಿ ಮೂಡಿಸುವ ಮೂಲಕ ಇಂತಹ ವದಂತಿಗಳನ್ನು ತಡೆಯಬೇಕು ಎಂದು ಪ್ರಧಾನಿ ಹೇಳಿದ್ದಾರೆ.



‘ಕೋವಿಡ್ ಲಸಿಕೆಯು ಜನವರಿ ಬಳಿಕ ಯಾವಾಗ ಬೇಕಿದ್ದರೂ ದೊರೆಯಬಹುದು. ಹಾಗಾಗಿ, ಲಸಿಕೆ ವಿತರಣೆಗೆ ಸಜ್ಜಾಗಿ ಎಂದು ರಾಜ್ಯಗಳಿಗೆ ಸೂಚಿಸಲಾಗಿದೆ’ ಎಂದು ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಹೇಳಿದ್ದಾರೆ. ಪ್ರಧಾನಿ ಜತೆಗಿನ ವಿಡಿಯೊ ಸಂವಾದದಲ್ಲಿ ಭಾಗವಹಿಸಿದ ಬಳಿಕ ಅವರು ಮಾತನಾಡಿದರು.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 25-11-2020 |
| --- | --- |
| Page No | 3/4 |

### ಗೊಟ್ಟಿಗೆರೆ ವಾರ್ಡ್ ಸ್ಥಿತಿಗತಿ ಕುರಿತು ಬೆಂಗಳೂರು ನವನಿರ್ಮಾಣ ಪಕ್ಷದ ವರದಿ

# ₹86 ಕೋಟಿ ಖರ್ಚಾದರೂ ಬದಲಾಗದ ಚಿತ್ರಣ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಗೊಟ್ಟಿಗೆರೆ ವಾರ್ಡ್‌ನಲ್ಲಿ ಕಳೆದ ಐದು ವರ್ಷಗಳಲ್ಲಿ ₹86 ಕೋಟಿ ಮೊತ್ತದ ಕಾಮಗಾರಿ ನಿರ್ವಹಿಸಲಾಗಿದೆ. ಆದರೆ, ವಾಸ್ತವದಲ್ಲಿ ಯಾವುದೇ ರಸ್ತೆಯೂ ಅಭಿವೃದ್ಧಿ ಕಂಡಿಲ್ಲ...!

ಬೆಂಗಳೂರು ನವನಿರ್ಮಾಣ ಪಕ್ಷ (ಬಿಎನ್‌ಪಿ) ಈ ವಾರ್ಡ್ ಚಿತ್ರಣದ ಕುರಿತು ಸಾರ್ವಜನಿಕರ ಅಭಿಪ್ರಾಯ ಸಂಗ್ರಹಿಸಿ ವರದಿ ಸಿದ್ಧಪಡಿಸಿದೆ.

'ಬಿಎನ್‌ಪಿಯಿಂದ ಸಾರ್ವಜನಿಕರ ಅನುಕೂಲಕ್ಕಾಗಿ ಪೋರ್ಟಲ್ ಅಭಿವೃದ್ಧಿಪಡಿಸಿದ್ದು, ಬಿಬಿಎಂಪಿಯಿಂದ ಮಾಹಿತಿ ಪಡೆದು ಇಲ್ಲಿ ಪ್ರಕಟಿಸಲಾಗುತ್ತಿದೆ.

ಅದರ ಪ್ರಕಾರ, ಗೊಟ್ಟಿಗೆರೆ ವಾರ್ಡ್‌ನಲ್ಲಿ ₹172 ಕೋಟಿ ಮೊತ್ತದ 405 ಕಾಮಗಾರಿಗಳಿಗೆ ಮಂಜೂರಾತಿ ದೊರೆತಿದ್ದು, ಅದರಲ್ಲಿ 203 ಕಾಮಗಾರಿಗಳು ಮುಕ್ತಾಯಗೊಂಡಿವೆ. ₹86 ಕೋಟಿ ಖರ್ಚಾಗಿದೆ' ಎಂದು ಬಿಎನ್‌ಪಿ ಪ್ರಧಾನ ಕಾರ್ಯದರ್ಶಿ ಶ್ರೀಕಾಂತ್ ನರಸಿಂಹನ್ ಹೇಳಿದರು.

'ಇಲ್ಲಿನ ಸೌತ್ ಅವೆನ್ಯೂ ಲೇಔಟ್‌ನಲ್ಲಿ ನಿವಾಸಿಗಳು ಕಾಮಗಾರಿ ಪಟ್ಟಿ ನೋಡಿ ಆಘಾತಗೊಂಡಿದ್ದಾರೆ. 5 ವರ್ಷಗಳ ಹಿಂದೆ ಇದ್ದ ರೀತಿಯಲ್ಲೇ ರಸ್ತೆಗಳಿವೆ. ಕೊಳಚೆ ನೀರು ರಸ್ತೆಯಲ್ಲೇ ಉಕ್ಕಿ ಹರಿದರೂ ಕೇಳುವವರಿಲ್ಲ ಎಂದು ಜನ ಹೇಳುತ್ತಿದ್ದಾರೆ. ಹಾಗಿದ್ದರೆ ಬಿಬಿಎಂಪಿ ಖರ್ಚು ಮಾಡಿರುವ ಹಣ ಎಲ್ಲಿ ಹೋಯಿತು' ಎಂದು ಶ್ರೀಕಾಂತ್ ಪ್ರಶ್ನಿಸಿದರು.

'ಈ ವಾರ್ಡ್‌ನಲ್ಲಿ ಕೈಗೊಂಡಿರುವ ಶೇ 80ರಷ್ಟು ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ನಡೆಸದೆ ಕೆಆರ್‌ಐಡಿಎಲ್‌ಗೆ ವಹಿಸಲಾಗಿದೆ. ಬೆಂಗಳೂರಿನ 4ಜಿ ಹಗರಣ ಇದಾಗಿದ್ದು, ನಗರದಲ್ಲಿನ ಮೂಲಸೌಕರ್ಯಗಳ ಕರುಣಾಜನಕ ಸ್ಥಿತಿಗೆ ಇದೇ ಕಾರಣ' ಎಂದು ದೂರಿದರು.

'₹172 ಕೋಟಿ ಮೊತ್ತದ 405 ಕಾಮಗಾರಿಗಳಿಗೆ ಯಾವ ಆಧಾರದಲ್ಲಿ ಅನುಮೋದನೆ ನೀಡಲಾಗಿದೆ, ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಸಂದರ್ಭದಲ್ಲಿ ಸ್ಥಳೀಯ ನಾಗರಿಕರನ್ನು ಒಳಗೊಳ್ಳದೆ ಇರುವುದು ಏಕೆ, ಇಷ್ಟು ಹಣ ಖರ್ಚು ಮಾಡಿದರೂ ರಸ್ತೆಗಳ ಸ್ಥಿತಿ ಬದಲಾಗಿಲ್ಲ ಎಂದರೆ ಹಣ ಏನಾಯಿತು ಎಂಬುದು ನಮ್ಮ ಪ್ರಶ್ನೆ' ಎಂದು ಅವರು ಹೇಳಿದರು.

'ಯಾವುದೇ ಕಾಮಗಾರಿಗೂ ಅನುದಾನ ಇಲ್ಲ ಎಂದು ವಾರ್ಡ್ ಪ್ರತಿನಿಧಿಸುವ ಪಾಲಿಕೆ ಸದಸ್ಯರು ಹೇಳುತ್ತಾರೆ. ಬಿಬಿಎಂಪಿ ಮಾಹಿತಿ ಪ್ರಕಾರ ಇಷ್ಟೊಂದು ಮೊತ್ತ ಖರ್ಚಾಗಿದೆ. ಜನ ಯಾವುದನ್ನು ನಂಬಬೇಕು' ಎಂದು ಪ್ರಶ್ನಿಸಿದರು.

ಈ ಕುರಿತು ಪ್ರತಿಕ್ರಿಯಿಸಿರುವ ಪಾಲಿಕೆಯ ಮಾಜಿ ಸದಸ್ಯೆ ಲಲಿತಾ ಟಿ. ನಾರಾಯಣ, 'ನಮ್ಮ ವಾರ್ಡ್‌ನಲ್ಲಿ ಬನ್ನೇರುಘಟ್ಟ ಮುಖ್ಯ ರಸ್ತೆ ಹಾದು ಹೋಗುತ್ತದೆ. ಮುಖ್ಯ ರಸ್ತೆಗಳ ಕಾಮಗಾರಿಗಳೂ ನಮ್ಮ ವಾರ್ಡ್ ವ್ಯಾಪ್ತಿಯ ಮಾಹಿತಿಯಲ್ಲಿ ಒಳಗೊಂಡಿರುತ್ತವೆ. ಸಣ್ಣ ಪುಟ್ಟ ವಾರ್ಡ್ ರಸ್ತೆಗಳಿಗೆ ದೊರೆತ ಅನುದಾನದಲ್ಲಿ ಕಾಮಗಾರಿಗಳನ್ನು ನಿರ್ವಹಿಸಲಾಗಿದೆ' ಎಂದರು.



ಗೊಟ್ಟಿಗೆರೆ ವಾರ್ಡ್‌ನ ಸೌತ್ ಅವೆನ್ಯೂ ಲೇಔಟ್‌ನಲ್ಲಿ ರಸ್ತೆಯ ಸ್ಥಿತಿ

### ಬಿಬಿಎಂಪಿ ವೆಬ್‌ಸೈಟ್ ಹೇಳುವುದೇನು?

ಬಿಬಿಎಂಪಿ ಹೊಸದಾಗಿ ಅಭಿವೃದ್ಧಿಪಡಿಸಿರುವ ವೆಬ್‌ಸೈಟ್‌ನಲ್ಲೂ ವಾರ್ಡ್‌ವಾರು ಕಾಮಗಾರಿಗಳ ಮಾಹಿತಿ ಲಭ್ಯವಾಗುತ್ತಿದೆ.

ಅದರ ಪ್ರಕಾರ ಗೊಟ್ಟಿಗೆರೆ ವಾರ್ಡ್ ವ್ಯಾಪ್ತಿಯ 233 ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದು, ₹80.20 ಕೋಟಿ ಖರ್ಚು ಮಾಡಲಾಗುತ್ತಿದೆ.

---

### ಬಡಾವಣೆಯ ಒಂಬತ್ತು ಬ್ಲಾಕ್‌ಗಳಲ್ಲೂ ತಲಾ ಒಂದು ಎಸ್‌ಟಿಪಿ ನಿರ್ಮಿಸಲು ಮುಂದಾಗಿರುವ ಪ್ರಾಧಿಕಾರ

# ಸ್ಥಳೀಯರ ವಿರೋಧ– ಎಸ್‌ಟಿಪಿ ಜಾಗ ಬದಲು?

• ಪ್ರವೀಣ್ ಕುಮಾರ್ ಪಿ.ವಿ.

ಬೆಂಗಳೂರು: ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು (ಬಿಡಿಎ) ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ಸ್ಥಾಪಿಸಲು ಉದ್ದೇಶಿಸಿದ್ದ ಕೆಲವು ತ್ಯಾಜ್ಯ ನೀರು ಶುದ್ಧೀಕರಣ ಘಟಕಗಳನ್ನು (ಎಸ್‌ಟಿಪಿ) ಹಿಂದೆ ಗುರುತಿಸಿದ ಜಾಗಗಳ ಬದಲು ಬೇರೆ ಕಡೆ ನಿರ್ಮಿಸಲು ಮುಂದಾಗಿದೆ.

ಸ್ಥಳೀಯರ ವಿರೋಧಕ್ಕೆ ಮಣಿದು ಬೇರೆ ಕಡೆ ಎಸ್‌ಟಿಪಿಗಳನ್ನು ನಿರ್ಮಿಸಿದ್ದೇ ಆದರೆ, ಈಗಾಗಲೇ ಹಂಚಿಕೆಯಾದ ಕೆಲವು ನಿವೇಶನಗಳಿಗೆ ಬದಲಿ ನಿವೇಶನಗಳನ್ನು ನೀಡಬೇಕಾಗಿ ಬರಬಹುದು. ಇದು ಇನ್ನಷ್ಟು ಗೊಂದಲ ಸೃಷ್ಟಿಸಬಹುದು ಎಂಬ ಆತಂಕವನ್ನು ಈ ಬಡಾವಣೆಯ ನಿವೇಶನದಾರರು ತೋಡಿಕೊಂಡಿದ್ದಾರೆ.

ಪ್ರಜಾವಾಣಿ ವಿಶೇಷ

ಪ್ರಾಧಿಕಾರವು ಬಡಾವಣೆಯ ಒಂಬತ್ತು ಬ್ಲಾಕ್‌ಗಳಲ್ಲೂ ತಲಾ ಒಂದು ಎಸ್‌ಟಿಪಿ ನಿರ್ಮಿಸುತ್ತಿದೆ. 1, 2, 3, 4 ಹಾಗೂ 8ನೇ ಬ್ಲಾಕ್‌ಗಳಲ್ಲಿ ಎಸ್‌ಟಿಪಿ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದ್ದು, ಶೇ 30ರಷ್ಟು ಕಾಮಗಾರಿಯೂ ಪೂರ್ಣಗೊಂಡಿದೆ. ಆದರೆ, 5, 6, 7 ಹಾಗೂ 9ನೇ ಬ್ಲಾಕ್‌ಗಳಲ್ಲಿ ಎಸ್‌ಟಿಪಿ ನಿರ್ಮಾಣದ ಕೆಲಸ ಇನ್ನೂ ಆರಂಭವಾಗಿಲ್ಲ.

'ಎಸ್‌ಟಿಪಿಗೆ ಗುರುತಿಸಿದ ಪ್ರದೇಶಗಳು ಜನವಸತಿಗೆ ಸಮೀಪದಲ್ಲಿವೆ. ಎಸ್‌ಟಿಪಿ ಸರಿಯಾಗಿ ನಿರ್ವಹಣೆ ಮಾಡದಿದ್ದರೆ, ಅವುಗಳು ದುರ್ನಾತ ಬೀರುವ ಅಪಾಯವಿದೆ. ಹಾಗಾಗಿ ಇವುಗಳನ್ನು ಜನವಸತಿ ಇರುವ ಕಡೆ ಸ್ಥಾಪಿಸಬಾರದು' ಎಂದು ಒತ್ತಾಯಿಸಿ ಸ್ಥಳೀಯರು ಇತ್ತೀಚೆಗೆ ಪ್ರತಿಭಟನೆ ನಡೆಸಿದ್ದರು. ರಾಜಕೀಯ ಮುಖಂಡರ ಮೂಲಕವೂ ಬಿಡಿಎ ಮೇಲೆ ಒತ್ತಡ ಹೇರಿದ್ದರು. ಹಾಗಾಗಿ ನಾಲ್ಕು ಬ್ಲಾಕ್‌ಗಳಲ್ಲಿ ಈ ಹಿಂದೆ ಗುರುತಿಸಿದ್ದ ಸ್ಥಳದ ಬದಲು ಬೇರೆ ಕಡೆ ಎಸ್‌ಟಿಪಿ ನಿರ್ಮಿಸಲು ಬಿಡಿಎ ಚಿಂತನೆ ನಡೆಸುತ್ತಿದೆ. ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರವು (ರೇರಾ) ಈ ಬಡಾವಣೆ ಅಭಿವೃದ್ಧಿ ಕುರಿತ ಅರ್ಜಿಯನ್ನು ಇತ್ತೀಚೆಗೆ ವಿಚಾರಣೆ ನಡೆಸಿದ ವೇಳೆ ಬಿಡಿಎ ಎಂಜಿನಿಯರಿಂಗ್ ಸದಸ್ಯ ಡಾ.ಶಾಂತರಾಜಣ್ಣ ಅವರು ಈ ಬಗ್ಗೆ ಮಾಹಿತಿ ನೀಡಿದ್ದರು.

'ಎಸ್‌ಟಿಪಿಯನ್ನು ಬೇರೆ ಕಡೆ ನಿರ್ಮಿಸಿ ಎಂದು ಸ್ಥಳೀಯರು ಪ್ರತಿಭಟನೆ ನಡೆಸುತ್ತಿದ್ದಾರೆ. ಕೆಲವು ಕಡೆ ಸಮಸ್ಯೆ ಇಲ್ಲ. ಕೆಲವು ಕಡೆ ಈಗಾಗಲೇ ಗುರುತಿಸಿದ ಜಾಗದ ಬದಲು ಬೇರೆ ಕಡೆ ಎಸ್‌ಟಿಪಿ ನಿರ್ಮಿಸುವ ಚಿಂತನೆ ಇದೆ' ಎಂದು ಶಾಂತರಾಜಣ್ಣ 'ಪ್ರಜಾವಾಣಿ'ಗೆ ತಿಳಿಸಿದರು.

ಈ ಪ್ರಸ್ತಾವ ಬಡಾವಣೆಯ ನಿವೇಶನದಾರರಲ್ಲಿ ಆತಂಕ ಸೃಷ್ಟಿಸಿದೆ.

'ಎಸ್‌ಟಿಪಿಯ ಸ್ಥಳ ಬದಲಾವಣೆ ಬಗ್ಗೆ ನಮ್ಮ ತಕರಾರು ಇಲ್ಲ. ಆದರೆ, ಸ್ಥಳ ಬದಲಾವಣೆ ಮಾಡುವಾಗ ಈಗಾಗಲೇ ಹಂಚಿಕೆ ಮಾಡಿರುವ ನಿವೇಶನಗಳನ್ನು ಎಸ್‌ಟಿಪಿಗಾಗಿ ಬಳಸಿಕೊಳ್ಳಬೇಕಾಗುತ್ತದೆ. ಆ ನಿವೇಶನದಾರರಿಗೆ ಬದಲಿ ನಿವೇಶನ ಹಂಚಿಕೆ ಮಾಡಬೇಕಾಗುತ್ತದೆ. ಇದು ಭವಿಷ್ಯದಲ್ಲಿ ಇನ್ನಷ್ಟು ಗೊಂದಲ ಸೃಷ್ಟಿಸಲಿದೆ' ಎಂದು ಬಡಾವಣೆಯ ನಿವೇಶನದಾರರ ಮುಕ್ತ ವೇದಿಕೆಯ ಎ.ಎಸ್.ಸೂರ್ಯಕಿರಣ್ ಆತಂಕ ತೋಡಿಕೊಂಡರು.

'ಬಡಾವಣೆಯ ನೀಲನಕ್ಷೆ ರಚಿಸುವಾಗ ನೈಸರ್ಗಿಕ ಇಳಿಜಾರನ್ನು ಗುರುತಿಸಿ ಇದ್ದುದರಲ್ಲಿ ಅತ್ಯಂತ ಸೂಕ್ತವಾದ ಸ್ಥಳವನ್ನು ಎಸ್‌ಟಿಪಿಗೆ ನಿರ್ಮಿಸಲು ಗೊತ್ತುಪಡಿಸಲಾಗಿರುತ್ತದೆ. ಇನ್ನು ಅಷ್ಟು ಸೂಕ್ತ ಸ್ಥಳ ಹುಡುಕುವುದು ಕಷ್ಟ. ಸ್ಥಳ ಬದಲಾವಣೆಯ ಕಸರತ್ತಿನ ಬದಲು ಎಸ್‌ಟಿಪಿಯಿಂದ ದುರ್ವಾಸನೆ ಹೊರಹೊಮ್ಮದ ರೀತಿಯ ತಂತ್ರಜ್ಞಾನ ಬಳಸಿ, ಸ್ಥಳೀಯರ ಮನವೊಲಿಕೆ ಮಾಡುವುದು ಸೂಕ್ತ' ಎಂದರು.

'ನಾವು ಅತ್ಯಾಧುನಿಕ ಮೆಂಬ್ರೇನ್ ಬಯೊರಿಯಾಕ್ಟರ್ (ಎಂಬಿಆರ್) ತಂತ್ರಜ್ಞಾನ ಬಳಸಿ ಎಸ್‌ಟಿಪಿ ನಿರ್ಮಿಸುತ್ತಿದ್ದೇವೆ. ಇದರಲ್ಲಿ ಸಂಸ್ಕರಣೆಗೆ ಒಳಗಾಗುವ ತ್ಯಾಜ್ಯ ನೀರು ಕುಡಿಯುವ ನೀರಿನಷ್ಟೇ ಶುದ್ಧವಾಗಲಿದೆ. ಇದನ್ನು ಸ್ಥಳೀಯ ನಿವಾಸಿಗಳಿಗೆ ಮನವರಿಕೆ ಮಾಡಿಕೊಡುವ ಪ್ರಯತ್ನ ಮಾಡಿದ್ದೇವೆ. ಆದರೂ ಸ್ಥಳೀಯರು ಒಪ್ಪುತ್ತಿಲ್ಲ' ಎಂದು ಶಾಂತರಾಜಣ್ಣ ತಿಳಿಸಿದರು.



ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ 2ನೇ ಬ್ಲಾಕ್‌ನ ಐ ಸೆಕ್ಟರ್‌ನಲ್ಲಿ ನಿರ್ಮಾಣವಾಗುತ್ತಿರುವ ಎಸ್‌ಟಿಪಿ

### ಏನಿದು ಎಂಬಿಆರ್ ತಂತ್ರಜ್ಞಾನ?

ಎಂಬಿಆರ್ ತಂತ್ರಜ್ಞಾನದಲ್ಲಿ ತ್ಯಾಜ್ಯ ನೀರನ್ನು ಜೈವಿಕ ಸಂಸ್ಕರಣೆಗೆ ಒಳಪಡಿಸುವುದರ ಜೊತೆಗೆ ಸೂಕ್ಷ್ಮಪರದೆಗಳ ಮೂಲಕ ಸೋಸುವಿಕೆಗೂ (ಮೈಕ್ರೊಫಿಲ್ಟ್ರೇಷನ್) ಒಳಪಡಿಸಲಾಗುತ್ತದೆ. ತ್ಯಾಜ್ಯ ನೀರಿನಲ್ಲಿರುವ ರಾಡಿಯ ಅಂಶವು ಚೆನ್ನಾಗಿ ಬೇರ್ಪಡುತ್ತದೆ. ನಗರಗಳ ತ್ಯಾಜ್ಯನೀರು ಹಾಗೂ ಕೈಗಾರಿಕೆಗಳ ತ್ಯಾಜ್ಯ ನೀರಿನ ಸಂಸ್ಕರಣೆಗೆ ಈ ತಂತ್ರಜ್ಞಾನವನ್ನು ವ್ಯಾಪಕವಾಗಿ ಬಳಸಲಾಗುತ್ತದೆ.

### 'ಎಸ್‌ಟಿಪಿ ಪಕ್ಕ ಕಿರು ಅರಣ್ಯ ಬೆಳೆಸಿ'

'ಬಡಾವಣೆಯ ಐದು ಬ್ಲಾಕ್‌ಗಳಲ್ಲಿ ನಿರ್ಮಾಣವಾಗುತ್ತಿರುವ ಎಸ್‌ಟಿಪಿಗಳ ಆಸುಪಾಸಿನಲ್ಲಿ ಸಾಕಷ್ಟು ಮೀಸಲು ಪ್ರದೇಶವನ್ನು ಉಳಿಸಿಕೊಂಡಿಲ್ಲ. ಎಸ್‌ಟಿಪಿ ಪಕ್ಕ 30 ಅಡಿ ಅಗಲದ ರಸ್ತೆಗೆ ಜಾಗ ಬಿಟ್ಟು, ಅದರ ಪಕ್ಕದಲ್ಲೇ ನಿವೇಶನ ಹಂಚಿಕೆ ಮಾಡಲಾಗಿದೆ. ಅದರ ಬದಲು ಎಲ್ಲ ಎಸ್‌ಟಿಪಿಗಳ ಬಳಿಯೂ ಕಿರು ಅರಣ್ಯದ ಪಟ್ಟಿಯನ್ನು ಬೆಳೆಸಬೇಕು. ಭವಿಷ್ಯದಲ್ಲಿ ಎಸ್‌ಟಿಪಿಯಿಂದ ಅಲ್ಪ ಪ್ರಮಾಣದಲ್ಲಿ ದುರ್ವಾಸನೆ ಬಂದರೂ, ಅದರ ಪಕ್ಕ ಕಿರು ಅರಣ್ಯವಿದ್ದರೆ, ಅದರಿಂದ ಆಸುಪಾಸಿನಲ್ಲಿ ನೆಲೆಸಿರುವ ಜನರಿಗೆ ಸಮಸ್ಯೆಯಾಗುವುದಿಲ್ಲ' ಎಂದು ಸೂರ್ಯಕಿರಣ್ ಸಲಹೆ ನೀಡಿದರು.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 25-11-2020 |
| --- | --- |
| Page No | 4 |


# ವೃಷಭಾವತಿ ತಿರುವು ಯೋಜನೆ ಕಾಮಗಾರಿಗೆ ತಡೆ

ಬೆಂಗಳೂರು: ವೃಷಭಾವತಿ ನದಿ ತಿರುವು ಯೋಜನೆಯ ಎಲ್ಲಾ ಕಾಮಗಾರಿಗಳಿಗೆ ಹೈಕೋರ್ಟ್ ಮಧ್ಯಂತರ ತಡೆ ನೀಡಿದೆ.

ಬೆಂಗಳೂರು ಎನ್ವಿರಾನ್‌ಮೆಂಟ್ ಟ್ರಸ್ಟ್ ಹಾಗೂ ಇತರರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕಾ ನೇತೃತ್ವದ ವಿಭಾಗೀಯ ಪೀಠ, ರಾಷ್ಟ್ರೀಯ ಪರಿಸರ ಎಂಜಿನಿಯರಿಂಗ್ ಸಂಶೋಧನಾ ಸಂಸ್ಥೆಯ(ನೀರಿ) ತಜ್ಞರ ಅಭಿಪ್ರಾಯ ಪಡೆಯಲು ಕಾವೇರಿ ನೀರಾವರಿ ನಿಗಮ ಮತ್ತು ರಾಜ್ಯ ಸರ್ಕಾರ ಸಿದ್ಧವಿದೆಯೇ ಎಂಬುದರ ಕುರಿತು ವಿವರಣೆ ನೀಡುವಂತೆ ಸೂಚಿಸಿದೆ.



'ಯಾವುದೇ ವೈಜ್ಞಾನಿಕ ಅಧ್ಯಯನ ಇಲ್ಲದೆ ಈ ಯೋಜನೆಗೆ 2018ರ ನವೆಂಬರ್ 23ರಲ್ಲಿ ಸರ್ಕಾರ ₹110 ಕೋಟಿ ಅನುದಾನ ಬಿಡುಗಡೆ ಮಾಡಿದೆ. ಈ ಯೋಜನೆಯಿಂದ ಕೆರೆಯ ವ್ಯಾಪ್ತಿ ಕುಗ್ಗಲಿದೆ. ಅಲ್ಲದೇ ವೃಷಭಾವತಿ ನದಿಯನ್ನು ಇನ್ನಷ್ಟು ಕಲುಷಿತಗೊಳಿಸಲಿದೆ. ಕೆರೆ ನಂಬಿಕೊಂಡಿರುವ ನೀರಾವರಿ ಪ್ರದೇಶದ ರೈತರು ತೊಂದರೆಗೆ ಸಿಲುಕಲಿದ್ದಾರೆ' ಎಂದು ಅರ್ಜಿದಾರರು ದೂರಿದ್ದಾರೆ.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 25-11-2020 |
|---|---|
| Page No | 3B |

### ಅರಿಶಿನ ಗಣೇಶ, ಹಸಿರು ಪಟಾಕಿ ಫಲಪ್ರದ • ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅಧ್ಯಯನ

# ಹಬ್ಬಗಳ ಸಂದರ್ಭದಲ್ಲಿ ಮಾಲಿನ್ಯಕ್ಕೆ ಅಂಕುಶ!

• ವರುಣ ಹೆಗಡೆ

ಪ್ರಜಾವಾಣಿ ವಿಶೇಷ

ಬೆಂಗಳೂರು: ಗಣೇಶ ಹಬ್ಬದ ಅವಧಿಯಲ್ಲಿ ಅರಿಶಿನ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಹಾಗೂ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಹಸಿರು ಪಟಾಕಿಗಳಿಗೆ ಮಾತ್ರ ಅವಕಾಶ ನೀಡಿದ ಪರಿಣಾಮ ಈ ಬಾರಿ ಹಬ್ಬಗಳ ಸಂದರ್ಭದಲ್ಲಿ ಜಲ ಹಾಗೂ ವಾಯು ಮಾಲಿನ್ಯ ನಿಯಂತ್ರಣಕ್ಕೆ ಬಂದಿದೆ ಎಂಬುದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ನಡೆಸಿದ ಅಧ್ಯಯನದಿಂದ ದೃಢಪಟ್ಟಿದೆ.

ಕೋವಿಡ್ ಕಾರಣ ರಾಜ್ಯ ಸರ್ಕಾರವು ಈ ಬಾರಿ ಸಾರ್ವಜನಿಕ ಗಣೇಶೋತ್ಸವಕ್ಕೆ ನಿರ್ಬಂಧ ವಿಧಿಸಿ, ಜನರು ಒಂದೆಡೆ ಗುಂಪಾಗಿ ಸೇರುವಂತಿಲ್ಲ ಎಂದು ಸೂಚಿಸಿತ್ತು. ಇದರಿಂದಾಗಿ ಪಿಒಪಿ ಗಣೇಶ ಮೂರ್ತಿಗಳು ಮಾರುಕಟ್ಟೆಯಲ್ಲಿ ಕಾಣಿಸಿಕೊಂಡಿಲ್ಲ. ಹೀಗಾಗಿ ಮಣ್ಣಿನ ಮೂರ್ತಿಗಳನ್ನು ಪ್ರತಿಷ್ಠಾಪಿಸಲಾಗಿತ್ತು. ಇನ್ನೊಂದೆಡೆ, ಮಂಡಳಿಯು ಅರಿಶಿನ ಗಣೇಶ ಅಭಿಯಾನ ಹಮ್ಮಿಕೊಂಡಿತ್ತು. ದೀಪಾವಳಿ ಹಬ್ಬದ ಸಂದರ್ಭದಲ್ಲಿ ಸರ್ಕಾರವು ಹಸಿರು ಪಟಾಕಿ ಬಳಸುವಂತೆ ಸೂಚಿಸಿ, ಮಾರ್ಗಸೂಚಿಯನ್ನು ಹೊರಡಿಸಿತ್ತು.

'ಕಳೆದ ಕೆಲ ವರ್ಷಗಳಿಗೆ ಹೋಲಿಕೆ ಮಾಡಿದರೆ ಈ ಬಾರಿ ಅತ್ಯಂತ ಕಡಿಮೆ ಪ್ರಮಾಣದಲ್ಲಿ ಜಲ, ವಾಯು ಹಾಗೂ ಶಬ್ದ ಮಾಲಿನ್ಯವಾಗಿದೆ. ಸಾಮಾನ್ಯ ದಿನಗಳಿಗೆ ಹೋಲಿಕೆ ಮಾಡಿದಲ್ಲಿ ಅಂತಹ ವ್ಯತ್ಯಾಸ ಕಂಡುಬಂದಿಲ್ಲ. ನೀರಿನ ಗುಣಮಟ್ಟದ ಮಾನದಂಡದಲ್ಲಿ ನಿಯಂತ್ರಿತ ತ್ಯಾಜ್ಯ ನಿರ್ವಹಣೆಗೆ ಬಳಸುವ ನೀರಿನ ಗುಣಮಟ್ಟವು (ಇ) ಕಳೆದ ವರ್ಷ ಗಣೇಶ ಮೂರ್ತಿಗಳ ವಿಸರ್ಜನೆಗೂ ಮುನ್ನ ಶೇ 91ರಷ್ಟಿತ್ತು. ವಿಸರ್ಜನೆ ಮಾಡಿದ ಬಳಿಕ ಶೇ 100ಕ್ಕೆ ಏರಿಕೆಯಾಗಿತ್ತು. ಆದರೆ, ಈ ಬಾರಿ ಹಬ್ಬಕ್ಕೂ ಮುನ್ನ ಶೇ 6ರಷ್ಟಿದ್ದ ಈ ಗುಣಮಟ್ಟ, ಶೇ 5ಕ್ಕೆ ಇಳಿಕೆಯಾಗಿದೆ' ಎಂದು ವರದಿಯಲ್ಲಿ ತಿಳಿಸಲಾಗಿದೆ.

**ದೀಪಾವಳಿಯಲ್ಲೂ ಇಳಿಕೆ:** ಅರಿಶಿನದಲ್ಲಿನ ಬಹುಮುಖ ಗುಣಗಳು ನೀರನ್ನು ಶುದ್ಧಗೊಳಿಸಲು ಸಹಕಾರಿಯಾಗಿದೆ. ಇದರಿಂದಾಗಿ ಗಣೇಶ ಹಬ್ಬದ ಸಂದರ್ಭದಲ್ಲಿ ಕೆರೆಯ ನೀರು ಮಾಲಿನ್ಯಗೊಳ್ಳದಂತೆ ತಡೆಯುವ ಪ್ರಯತ್ನ ಯಶಸ್ವಿಯಾಗಿದೆ. ದೀಪಾವಳಿ ವೇಳೆ ಹೆಚ್ಚುತ್ತಿದ್ದ ವಾಯುಮಾಲಿನ್ಯ ಕೂಡ ನಿಯಂತ್ರಣಕ್ಕೆ ಬಂದಿದೆ. ಕಳೆದ ವರ್ಷ ಹಬ್ಬದ ದಿನದಂದು ಗಾಳಿಯ ಗುಣಮಟ್ಟದ ಸೂಚ್ಯಂಕ 67 ರಷ್ಟಿತ್ತು. ಈ ಬಾರಿ ಅದು 43ಕ್ಕೆ ಇಳಿಕೆಯಾಗಿದೆ ಎಂದು ಉಲ್ಲೇಖಿಸಲಾಗಿದೆ.

'ಹಬ್ಬಗಳ ವೇಳೆ ಉಂಟಾಗುತ್ತಿದ್ದ ಜಲ ಹಾಗೂ ವಾಯು ಮಾಲಿನ್ಯ ನಿಯಂತ್ರಣ ಮಾಡಲಾಗಿದೆ. ಪಿಒಪಿ ಗಣೇಶ ವಿಗ್ರಹಗಳಿಗೆ ಬಳಸುತ್ತಿದ್ದ ರಾಸಾಯನಿಕ ಮಿಶ್ರಿತ ಬಣ್ಣಗಳು ಕೆರೆಗಳ ನೀರನ್ನು ಮಲಿನ ಮಾಡುತ್ತಿದ್ದವು. ವಿಷಕಾರಿ ತ್ಯಾಜ್ಯವು ಜಲಚರಗಳಿಗೆ ಅಪಾಯವನ್ನೊಡ್ಡುತ್ತಿದ್ದವು. ನೀರಿನ ಮಾಲಿನ್ಯವು ಮಾನವನ ಆರೋಗ್ಯದ ಮೇಲೆ ಕೂಡ ಪ್ರತಿಕೂಲ ಪರಿಣಾಮ ಉಂಟುಮಾಡುತ್ತಿದ್ದವು. ಪರಿಸರಸ್ನೇಹಿ ಗಣೇಶ ಹಬ್ಬದ ಆಚರಣೆಯು ಈ ಬಾರಿ ಅರ್ಥ ಪಡೆದುಕೊಂಡಿದೆ. ಹಸಿರು ಪಟಾಕಿಗಳ ಮಾರಾಟಕ್ಕೆ ಮಾತ್ರ ಅವಕಾಶ ನೀಡಿದ ಪರಿಣಾಮ ವಾಯು ಮಾಲಿನ್ಯವೂ ನಿಯಂತ್ರಣಕ್ಕೆ ಬಂದಿದೆ' ಎಂದು ಮಂಡಳಿ ಸದಸ್ಯ ಕಾರ್ಯದರ್ಶಿ ಶ್ರೀನಿವಾಸಲು ತಿಳಿಸಿದರು.

### ಗಾಳಿಯ ಗುಣಮಟ್ಟ 'ಉತ್ತಮ'

ದೀಪಾವಳಿ ವೇಳೆ ನಗರದ ಗಾಳಿಯ ಗುಣಮಟ್ಟದ ಸೂಚ್ಯಂಕವು (ಎಕ್ಯೂಐ) 'ಉತ್ತಮ' ಹಂತ ಕಾಯ್ದುಕೊಂಡಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ. ಎಕ್ಯೂಐ ನ.14ರಂದು 48, ನ.15ರಂದು 58 ಹಾಗೂ ನ.16ರಂದು 42ರಷ್ಟಿತ್ತು. ಈ ಮೂರು ದಿನಗಳ ಅವಧಿಯಲ್ಲಿ ಗಾಳಿಯ ಗುಣಮಟ್ಟ ಸೂಚ್ಯಂಕವು ಸರಾಸರಿ 49.33ರಷ್ಟಿತ್ತು. ಈ ಪ್ರಮಾಣವು ದೆಹಲಿಯಲ್ಲಿ 356.66, ಕೊಲ್ಕತ್ತಾದಲ್ಲಿ 172, ಮುಂಬೈನಲ್ಲಿ 140.66, ಹೈದರಾಬಾದ್‌ನಲ್ಲಿ 98 ಹಾಗೂ ಚೆನ್ನೈನಲ್ಲಿ 65ರಷ್ಟಿತ್ತು.

**ದೀಪಾವಳಿ ಸಂದರ್ಭದಲ್ಲಿ ವಾಯುಮಾಲಿನ್ಯ ಇಳಿಕೆ**

| ಪ್ರದೇಶ | ಎಕ್ಯೂಐ 2019 | ಎಕ್ಯೂಐ 2020 |
|---|---|---|
| ನಗರ ರೈಲು ನಿಲ್ದಾಣ | 111 | 76.76 |
| ಹೆಬ್ಬಾಳ | 85 | 39.33 |
| ಜಯನಗರ | 71 | 63.67 |
| ಕವಿಕಾ ಲೇಔಟ್ | 90 | 44 |
| ನಿಮ್ಹಾನ್ಸ್ | 76 | 61.67 |
| ಸೆಂಟ್ರಲ್ ಸಿಲ್ಕ್ ಬೋರ್ಡ್ | 69 | 61 |
| ಎಸ್.ಜಿ.ಹಳ್ಳಿ | 111 | 76.76 |

**ಗಾಳಿಯ ಗುಣಮಟ್ಟದ ಸೂಚ್ಯಂಕ (ಎಕ್ಯೂಐ)**

| | |
|---|---|
| 00-50 | ಉತ್ತಮ |
| 51-100 | ಸಮಾಧಾನಕರ |
| 101-200 | ಮಧ್ಯಮ |
| 201-300 | ಕಳಪೆ |
| 301-400 | ತುಂಬಾ ಕಳಪೆ |
| 401 ಮೇಲ್ಪಟ್ಟು | ತೀವ್ರ |

# ರಾಂಪುರ ಕೆರೆಯಲ್ಲಿ ಮತ್ತೆ ಕಸದ ರಾಶಿ

ಪ್ರಜಾವಾಣಿ ವಾರ್ತೆ

ಮಹದೇವಪುರ: ಕ್ಷೇತ್ರದ ಬಿದರಹಳ್ಳಿ ಹೋಬಳಿಯ ರಾಂಪುರ ಕೆರೆ ದಂಡೆಗೆ ಇತ್ತೀಚಿನ ದಿನಗಳಲ್ಲಿ ಬಿಬಿಎಂಪಿ ಲಾರಿಗಳು ಕಸವನ್ನು ಸುರಿದು ಹೋಗುತ್ತಿವೆ. ಇದರಿಂದಾಗಿ ಕಸದ ರಾಶಿ ಕೆರೆಯ ತುಂಬಾ ತುಂಬಿಕೊಂಡಿದೆ.

'ಕಸದ ರಾಶಿ ತುಂಬಿರುವುದರಿಂದ ನಾಯಿಗಳು ಬೀಡು ಬಿಟ್ಟಿವೆ. ಕಸದ ದುರ್ವಾಸನೆಯೊಂದಿಗೆ ನಾಯಿಗಳ ಕಾಟ ಅತಿಯಾಗಿದೆ' ಎಂದು ಸ್ಥಳೀಯ ನಿವಾಸಿ ಶಾಂತಮ್ಮ ದೂರಿದರು.

'ಈ ಬಗ್ಗೆ ಸಂಬಂಧಪಟ್ಟವರಿಗೆ ಅನೇಕ ಸಲ ಮನವಿ ಮಾಡಿಕೊಂಡರೂ ಯಾವುದೇ ಪ್ರಯೋಜನವಾಗಿಲ್ಲ. ಕಸದ ರಾಶಿ ಹೆಚ್ಚುತ್ತಲೇ ಇದೆ' ಎಂದರು.

'ಜಲಕಾಯವನ್ನು ಅಭಿವೃದ್ಧಿಪಡಿಸುವುದಾಗಿ ಸ್ಥಳೀಯ ಶಾಸಕರು ಕಳೆದ ವರ್ಷ ಗುದ್ದಲಿ ಪೂಜೆ ನೆರವೇರಿಸಿದ್ದರು. ಆದರೆ, ಇದುವರೆಗೂ ಯಾವುದೇ ಅಭಿವೃದ್ಧಿ ಕಾರ್ಯ ಆರಂಭಗೊಂಡಿಲ್ಲ' ಎಂದು ಸ್ಥಳೀಯರು ದೂರಿದರು.



ರಾಂಪುರ ಕೆರೆ ದಂಡೆಯಲ್ಲಿ ರಾಶಿ ಬಿದ್ದಿರುವ ಕಸ

'ಕಸ ಸುರಿಯುತ್ತಿರುವ ಬಗ್ಗೆ ಸ್ಥಳೀಯರು ದೂರು ನೀಡಿದ್ದು, ಈ ಬಗ್ಗೆ ಪರಿಶೀಲನೆ ನಡೆಸುತ್ತೇವೆ. ಸದ್ಯ ಬಿಬಿಎಂಪಿ ಲಾರಿಗಳು ಕೆರೆ ಬಳಿಗೆ ಬರದಂತೆ ಕ್ರಮ ಕೈಗೊಳ್ಳಲಾಗುತ್ತಿದೆ' ಎಂದು ದೊಡ್ಡಗುಬ್ಬಿ ಪಂಚಾಯಿತಿ ಕಾರ್ಯದರ್ಶಿ ರಾಜೇಂದ್ರಬಾಬು 'ಪ್ರಜಾವಾಣಿ'ಗೆ ತಿಳಿಸಿದರು.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 25-11-2020 |
| --- | --- |
| Page No | 3 |


# ಶೌಚಾಲಯ ಗಲಾಟೆ; ವ್ಯವಸ್ಥಾಪಕನಿಗೆ ಹಲ್ಲೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಶೌಚಾಲಯಕ್ಕೆ ಹೋಗಲು ಬಿಡಲಿಲ್ಲವೆಂಬ ಕಾರಣಕ್ಕೆ 'ಕಾಫಿ ಡೇ' ವ್ಯವಸ್ಥಾಪಕ ನವೀನ್‌ಕುಮಾರ್ ಎಂಬುವರ ಮೇಲೆ ಹಲ್ಲೆ ಮಾಡಲಾಗಿದ್ದು, ಈ ಸಂಬಂಧ ಆರೋಪಿ ಕಿರಣ್‌ಕುಮಾರ್ ಎಂಬುವರನ್ನು ಪೊಲೀಸರು ಬಂಧಿಸಿದ್ದಾರೆ.

'ಹಲ್ಲೆಗೀಡಾಗಿರುವ ನವೀನ್ ಕುಮಾರ್ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಆರೋಗ್ಯ ಸ್ಥಿತಿ ಚಿಂತಾಜನಕವಾಗಿದ್ದು, ಅವರ ಹೇಳಿಕೆ ಆಧರಿಸಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ' ಎಂದು ರಾಮಮೂರ್ತಿನಗರ ಠಾಣೆ ಪೊಲೀಸರು ಹೇಳಿದರು.

'ಖಾಸಗಿ ಕಂಪನಿ ನೌಕರ ಕಿರಣ್‌ಕುಮಾರ್, ಸೋಮವಾರ ರಾತ್ರಿ ಕಸ್ತೂರಿನಗರದ 'ಕಾಫಿ ಡೇ' ಒಳಗೆ ಹೋಗಿ ಶೌಚಾಲಯದತ್ತ ತೆರಳುತ್ತಿದ್ದರು. ಅವರನ್ನು ತಡೆದಿದ್ದ ನವೀನ್‌ಕುಮಾರ್, 'ಇದು ಸಾರ್ವಜನಿಕರ ಶೌಚಾಲಯವಲ್ಲ. ನಮ್ಮ ಗ್ರಾಹಕರಿಗಷ್ಟೇ ಇಲ್ಲಿ ಪ್ರವೇಶವಿದೆ. ನಿಮಗೆ ಪ್ರವೇಶವಿಲ್ಲ. ದಯವಿಟ್ಟು ಹೊರಟು ಹೋಗಿ' ಎಂದಿದ್ದರು.

'ಶೌಚಾಲಯದ ವಿಷಯಕ್ಕೆ ಇಬ್ಬರ ನಡುವೆ ಗಲಾಟೆ ಆರಂಭವಾಗಿ ಪರಿಸ್ಥಿತಿ ವಿಕೋಪಕ್ಕೆ ಹೋಗಿತ್ತು. ಅದೇ ಸಂದರ್ಭದಲ್ಲಿ ಆರೋಪಿ ಕಿರಣ್‌ಕುಮಾರ್, ತನ್ನ ಬಳಿಯ ಚೂಪಾದ ಆಯುಧದಿಂದ ನವೀನ್‌ಕುಮಾರ್ ಮೇಲೆ ಹಲ್ಲೆ ಮಾಡಿದ್ದರು. ಸಹಾಯಕ್ಕೆ ಬಂದ ಕೆಲಸಗಾರರು, ನವೀನ್‌ಕುಮಾರ್ ಅವರನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ. ಸ್ಥಳಕ್ಕೆ ಹೋದ ಹೊಯ್ಸಳ ಗಸ್ತು ವಾಹನದ ಸಿಬ್ಬಂದಿ ಆರೋಪಿಯನ್ನು ವಶಕ್ಕೆ ಪಡೆದಿದ್ದರು' ಎಂದೂ ಪೊಲೀಸರು ತಿಳಿಸಿದರು.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 25-11-2020 |
| --- | --- |
| Page No | 3B |

**ಬಿಎಲ್‌ಒಗಳಿಗೆ ಕುಮಾರ ನಾಯಕ್ ಸೂಚನೆ**

# ಜನಸಂಖ್ಯೆ– ಮತದಾರರ ಸಂಖ್ಯೆ ತಾಳೆ ಮಾಡಿ

ಪ್ರಜಾವಾಣಿ ವಾರ್ತೆ

**ಮುಖ್ಯಾಂಶಗಳು**

- ಮತದಾರರ ಸಂಖ್ಯೆ ಹೆಚ್ಚಳಕ್ಕೆ ಬಿಬಿಎಂಪಿ ಕಸರತ್ತು
- ಎನ್‌ಜಿಒ ಹಾಗೂ ಆರ್‌ಡಬ್ಲ್ಯುಎಗಳ ನೆರವು ಪಡೆಯುತ್ತಿರುವ ಪಾಲಿಕೆ
- ಕಸ ಸಂಗ್ರಹಿಸುವ ವಾಹನಗಳಲ್ಲಿ ಧ್ವನಿವರ್ಧಕದ ಮೂಲಕ ಜಾಗೃತಿ

ಬೆಂಗಳೂರು: 'ಮತಗಟ್ಟೆ ಹಂತದ ಅಧಿಕಾರಿಗಳು (ಬಿಎಲ್‌ಒ) ಮತಗಟ್ಟೆ ವ್ಯಾಪ್ತಿಯ ಜನಸಂಖ್ಯೆ ಎಷ್ಟಿದೆ ಹಾಗೂ ಮತದಾರರ ಪಟ್ಟಿಯಲ್ಲಿ ಎಷ್ಟು ಮಂದಿ ಇದ್ದಾರೆ ಎಂಬುದನ್ನು ತಾಳೆ ಮಾಡಿ ಮತದಾರರ ಪಟ್ಟಿಗೆ ಸೇರ್ಪಡೆಯಾಗದೇ ಇರುವವರನ್ನು ಸೇರಿಸಬೇಕು' ಎಂದು ಮತದಾರರ ಪಟ್ಟಿ ಪರಿಷ್ಕರಣಾ ಪ್ರಕ್ರಿಯೆಯ ವೀಕ್ಷಕ (ರೋಲ್ ಅಬ್ಸರ್ವರ್) ಜಿ.ಕುಮಾರ ನಾಯಕ್ ನಿರ್ದೇಶನ ನೀಡಿದರು.

ಬಿಬಿಎಂಪಿ (ಕೇಂದ್ರ) ವ್ಯಾಪ್ತಿಯ ಮತದಾರರ ಪಟ್ಟಿಯ 'ವಿಶೇಷ ಪರಿಷ್ಕರಣೆ-2021'ರ ಕುರಿತು ಅವರು ಅಧಿಕಾರಿಗಳು ಹಾಗೂ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಮುಖಂಡರ ಜೊತೆ ಮಂಗಳವಾರ ಸಭೆ ನಡೆಸಿದರು.

ಬಿಬಿಎಂಪಿಯ (ಕೇಂದ್ರ) ಜಿಲ್ಲಾ ಹೆಚ್ಚುವರಿ ಚುನಾವಣಾಧಿಕಾರಿ ಜೆ. ಮಂಜುನಾಥ್, 'ಆಯಾ ವಿಧಾನಸಭಾ ಕ್ಷೇತ್ರದ ಮತದಾರರು– ಜನಸಂಖ್ಯೆ ಅನುಪಾತಕ್ಕೆ ಅನುಗುಣವಾಗಿ ಮತದಾರರ ಸಂಖ್ಯೆ ಹೆಚ್ಚಿಸಲು ಸತತ ನಾಲ್ಕು ಭಾನುವಾರ ಮತದಾರರ ನೋಂದಣಿಗೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಈ ವೇಳೆ ಅಧಿಕಾರಿಗಳು ಮನೆ ಮನೆಗೆ ತೆರಳಿ ತಿಳಿವಳಿಕೆ ಮೂಡಿಸಲಿದ್ದಾರೆ. 2021ರ ಜ.1ಕ್ಕೆ 18 ವರ್ಷ ತುಂಬಲಿರುವವರಿಗೆ ನಮೂನೆ-6 ಪಡೆದು ಭಾವಚಿತ್ರದೊಂದಿಗೆ ಶಾಲಾ ಟಿ.ಸಿ., ಅಂಕಪಟ್ಟಿ, ಆಧಾರ್ ಕಾರ್ಡ್, ಪಡಿತರ ಚೀಟಿಗಳ ಪ್ರತಿಗಳನ್ನು ನೀಡಿ ಮತದಾರರ ಪಟ್ಟಿಗೆ ಸೇರ್ಪಡೆಯಾಗಲು ಅವಕಾಶ ಕಲ್ಪಿಸಲಾಗಿದೆ' ಎಂದರು.



ಮತದಾರರ ಪಟ್ಟಿ ಪರಿಷ್ಕರಣೆ ವಿಶೇಷ ಅಭಿಯಾನ 2021ರ ಕುರಿತು ಮಂಗಳವಾರ ನಡೆದ ಸಭೆಯಲ್ಲಿ ಜಿ.ಕುಮಾರ ನಾಯಕ್ ಮಾತನಾಡಿದರು. ಜೆ.ಮಂಜುನಾಥ್ ಮತ್ತು ಇತರ ಅಧಿಕಾರಿಗಳು ಇದ್ದಾರೆ.

'ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಸಂಖ್ಯೆ ಹೆಚ್ಚಳ ಮಾಡಲು ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳು ಹಾಗೂ ಸರ್ಕಾರೇತರ ಸಂಘಟನೆಗಳ ನೆರವು ಪಡೆದಿದ್ದೇವೆ. ಆಟೊದಲ್ಲಿ ಧ್ವನಿವರ್ಧಕಗಳ ಮೂಲಕ ಮತದಾರರ ಪಟ್ಟಿ ಪರಿಷ್ಕರಣೆ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಮನೆಗಳಿಗೆ ಹಾಗೂ ಪಿ.ಜಿಗಳಿಗೆ ಭೇಟಿ ನೀಡಿ 18 ವರ್ಷ ತುಂಬಿದವರು ಮತದಾರರ ಪಟ್ಟಿಗೆ ಹೆಸರು ಸೇರಿಸುವಂತೆ ತಿಳಿವಳಿಕೆ ಮೂಡಿಸಲಾಗುತ್ತಿದೆ' ಎಂದು ಅಧಿಕಾರಿಯೊಬ್ಬರು ತಿಳಿಸಿದರು.

'ಮನೆ ಮನೆಯಿಂದ ಕಸ ಸಂಗ್ರಹಿಸುವ ಆಟೊಗಳಲ್ಲಿ ಧ್ವನಿವರ್ಧಕಗಳ ಮೂಲಕ ಮತದಾರರ ಪಟ್ಟಿ ಪರಿಷ್ಕರಣೆ ಬಗ್ಗೆ ಮಾಹಿತಿ ನೀಡಬೇಕು' ಎಂದು ರೋಲ್ ಅಬ್ಸರ್ವರ್ ನಿರ್ದೇಶನ ನೀಡಿದರು.

ರಾಜರಾಜೇಶ್ವರಿನಗರ, ಶಿವಾಜಿ ನಗರ, ಶಾಂತಿನಗರ, ಗಾಂಧಿನಗರ, ರಾಜಾಜಿನಗರ, ಚಾಮರಾಜಪೇಟೆ ಮತ್ತು ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರಗಳು ಬಿಬಿಎಂಪಿ ಕೇಂದ್ರ ವ್ಯಾಪ್ತಿಯಲ್ಲಿವೆ.

# ಲಸಿಕೆ ವಿತರಣೆಗೆ ಸಿದ್ಧತೆ

**ಒಂದನೇ ಪುಟದಿಂದ...**

'ಉಳಿದ ರಾಜ್ಯಗಳು, ಅದನ್ನು ಅನುಕರಿಸಬೇಕು. ಲಸಿಕೆ ನೀಡಿದರೂ ಕೂಡ ಚಿಕಿತ್ಸೆ ಮುಂದುವರಿಯುತ್ತದೆ. ದೇಶದಲ್ಲಿ ಎರಡನೇ ಅಲೆ ಆರಂಭವಾಗಿರುವುದರಿಂದ ಜನ ಮೈಮರೆಯಬಾರದೆಂಬ ಎಚ್ಚರಿಕೆ ನೀಡಿದ್ದಾರೆ' ಎಂದು ಬೊಮ್ಮಾಯಿ ವಿವರ ನೀಡಿದರು.

**ವ್ಯಾಕ್ಸಿನೇಟರ್ ಸಿಬ್ಬಂದಿ:** 'ಕೇಂದ್ರ ಸರ್ಕಾರದ ಸೂಚನೆಯಂತೆ ರಾಜ್ಯದಲ್ಲಿ ಲಸಿಕೆ ವಿತರಣೆಗಾಗಿ ಕೋವಿಡ್ ಕಾರ್ಯಪಡೆ ರಚನೆ ಮಾಡಲಾಗಿದೆ. ಅಲ್ಲದೆ, ಲಸಿಕೆ ಸಂಗ್ರಹ ಹಾಗೂ ವಿತರಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಲಸಿಕೆ ವಿತರಣೆ ಕೇಂದ್ರಗಳಲ್ಲಿ ಲಸಿಕೆ ವಿತರಿಸಲು 10,008 ವ್ಯಾಕ್ಸಿನೇಟರ್ ಸಿಬ್ಬಂದಿ ಗುರುತಿಸಲಾಗಿದೆ' ಎಂದು ಡಾ. ಸುಧಾಕರ್ ಹೇಳಿದರು.

'ಸರ್ಕಾರಿ ಆರೋಗ್ಯ ಕೇಂದ್ರಗಳ ಸಿಬ್ಬಂದಿ, ಆರೋಗ್ಯ ಕಾರ್ಯಕರ್ತರ ಕುರಿತು ಮಾಹಿತಿ ದಾಖಲಿಸಲಾಗಿದೆ. ಶೇ 80 ರಷ್ಟು ಖಾಸಗಿ ಆಸ್ಪತ್ರೆಗಳು ಮಾಹಿತಿ ನೀಡಿವೆ. ಉಳಿದ ಶೇ 20ರಷ್ಟು ಆಸ್ಪತ್ರೆಗಳು ವಾರದೊಳಗೆ ಮಾಹಿತಿ ನೀಡಲಿವೆ' ಎಂದರು.

'ಕೇಂದ್ರ ಸರ್ಕಾರ ಈಗಾಗಲೇ ಡೀಪ್ ಫ್ರೀಜರ್ ಹಾಗೂ ರೆಫ್ರಿಜರೇಟರ್‌ಗಳನ್ನು ಮಂಜೂರು ಮಾಡಿದೆ. ಹೆಚ್ಚುವರಿ ಅಗತ್ಯಗಳ ಕುರಿತು ಕೇಂದ್ರ ಸರ್ಕಾರಕ್ಕೆ ಮಾಹಿತಿ ನೀಡಲಾಗಿದೆ. ಪಶು ಸಂಗೋಪನೆ ಇಲಾಖೆಯಲ್ಲಿ ಲಭ್ಯವಿರುವ ಕೋಲ್ಡ್ ಸ್ಟೋರೇಜ್ ಸೌಲಭ್ಯಗಳ ಬಗ್ಗೆಯೂ ಮಾಹಿತಿ ಪಡೆಯಲಾಗಿದೆ. ಕಾರ್ಪೋರೇಟ್ ಖಾಸಗಿ ಆಸ್ಪತ್ರೆಗಳ ಕೋಲ್ಡ್ ಸ್ಟೋರೇಜ್ ಬಗ್ಗೆಯೂ ಮಾಹಿತಿ ಪಡೆಯಲಾಗಿದೆ' ಎಂದೂ ಅವರು ವಿವರಿಸಿದರು.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 25-11-2020 |
|---|---|
| Page No | 6 |

# ಬಂದ್ ಕರೆ: ಕೋವಿಡ್ ನಿಯಮ ಉಲ್ಲಂಘಿಸದಂತೆ ನಿರ್ದೇಶನ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಕೋವಿಡ್‌–19 ನಿಯಮಗಳನ್ನು ಪಾಲಿಸುವಂತೆ ನಿರ್ದೇಶನ ನೀಡಲು ಕೋರಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಗೆ ರಾಜಕೀಯ ಪಕ್ಷಗಳನ್ನು ಪ್ರತಿವಾದಿಗಳನ್ನಾಗಿ ಹೈಕೋರ್ಟ್ ಸೇರ್ಪಡೆ ಮಾಡಿದೆ.

ಡಿ.5ರಂದು ಕರೆ ನೀಡಿರುವ ಬಂದ್ ವೇಳೆ ಕೈಗೊಳ್ಳುವ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಪ್ರತಿಕ್ರಿಯೆ ಸಲ್ಲಿಸುವಂತೆ ಕನ್ನಡ ಚಳವಳಿ ವಾಟಾಳ್ ಪಕ್ಷಕ್ಕೆ ನಿರ್ದೇಶನ ನೀಡಿದೆ.

ರಾಜಕೀಯ ಪಕ್ಷಗಳ ರ‍್ಯಾಲಿ ಸಂದರ್ಭದಲ್ಲಿ ಮಾಸ್ಕ್ ಧರಿಸುವ ಮತ್ತು ಅಂತರ ಕಾಪಾಡುವ ಬಗ್ಗೆ ನಿರ್ದೇಶನ ನೀಡುವಂತೆ ಕೋರಿದ್ದ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕಾ ನೇತೃತ್ವದ ವಿಭಾಗೀಯ ಪೀಠ ಈ ನಿರ್ದೇಶನ ನೀಡಿತು.

ಬಿಜೆಪಿ, ಕಾಂಗ್ರೆಸ್, ಸಿಪಿಐ(ಎಂ), ಜೆಡಿಎಸ್, ಕನ್ನಡ ಚಳವಳಿ ವಾಟಾಳ್ ಪಕ್ಷಗಳನ್ನು ಪ್ರತಿವಾದಿಗಳನ್ನು ಮಾಡಿರುವ ಪೀಠ, ‘ಈ ಹಿಂದೆ ನಡೆದಿರುವ ರ‍್ಯಾಲಿಗಳಲ್ಲಿ ಕೋವಿಡ್ ನಿಯಮಗಳನ್ನು ಉಲ್ಲಂಘಿಸಲಾಗಿದೆ. ಅವರ ವಿರುದ್ಧ ರಾಜ್ಯ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ. ಕೆಲವು ಸಂದರ್ಭಗಳಲ್ಲಿ ಅಧಿಕಾರಿಗಳು ತಡವಾಗಿ ಕ್ರಮ ಕೈಗೊಂಡಿದ್ದಾರೆ’ ಎಂದು ಅಭಿಪ್ರಾಯಪಟ್ಟಿತು.

‘ಮಾಸ್ಕ್ ಧರಿಸುವುದು ಮತ್ತು ಅಂತರ ಕಾಪಾಡುವ ನಿಯಮಗಳನ್ನು ಅನುಷ್ಠಾನಗೊಳಿಸುವುದು ರಾಜಕೀಯ ಪಕ್ಷಗಳ ಪ್ರಮುಖ ಜವಾಬ್ದಾರಿ. ಪಕ್ಷದ ಕಾರ್ಯಕರ್ತರಿಗೆ ಸೂಚನೆಗಳನ್ನು ನೀಡಲು ಪಕ್ಷಗಳು ಸಿದ್ಧ ಇವೆಯೇ ಎಂಬುದರ ಕುರಿತು ಪ್ರತಿಕ್ರಿಯೆ ಸಲ್ಲಿಸಬೇಕು’ ಎಂದು ಪ್ರತಿವಾದಿಗಳಿಗೆ ಪೀಠ ಸೂಚನೆ ನೀಡಿತು.

‘ಕನ್ನಡ ಚಳವಳಿ ವಾಟಾಳ್ ಪಕ್ಷ ಡಿ.5ರಂದು ರಾಜ್ಯ ಬಂದ್‌ಗೆ ಕರೆ ನೀಡಿದೆ. ಈ ಸಂದರ್ಭದಲ್ಲಿ ನಿಯಮ ಉಲ್ಲಂಘನೆಯಾಗುವ ಸಾಧ್ಯತೆ ಇದೆ’ ಎಂದು ಅರ್ಜಿದಾರರು ದೂರಿದರು.

ಕನ್ನಡಪ್ರಭ

| Date | 25-11-2020 |
| --- | --- |
| Page No | 1 |

# ಲಸಿಕೆ ವಿತರಣೆಗೆ ರಾಜ್ಯದಲ್ಲಿ 29500 ಕೇಂದ್ರ: ಸುಧಾಕರ್

## ಕೇಂದ್ರದ ಸೂಚನೆಯಂತೆ ಸಿದ್ಧತೆ
## 10 ಸಾವಿರ ಸಿಬ್ಬಂದಿ ನಿಯೋಜನೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೇಂದ್ರ ಸರ್ಕಾರದ ಸೂಚನೆಯಂತೆ ರಾಜ್ಯದಲ್ಲಿ ಕೋವಿಡ್ ಲಸಿಕೆ ವಿತರಣೆಗೆ



ಎಲ್ಲಾ ಸಿದ್ಧತೆ ಮಾಡಿಕೊಂಡಿದ್ದು, ಒಟ್ಟು 29,451 ಲಸಿಕೆ ವಿತರಣಾ ಕೇಂದ್ರಗಳನ್ನು ಗುರುತಿಸಲಾಗಿದೆ ಎಂದು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ.

'ಕೋವಿಡ್ ಕಾರ್ಯಪಡೆ ಸಭೆ ನಡೆಸಿ ಲಸಿಕೆ ವಿತರಣೆ ಸಂಬಂಧ ಚರ್ಚೆ ನಡೆಸಲಾಗಿದೆ. ಲಸಿಕೆ ಸಂಗ್ರಹ ಮತ್ತು ವಿತರಣೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ರಾಜ್ಯಾದ್ಯಂತ 29,451 ಲಸಿಕೆ ವಿತರಣೆ ಕೇಂದ್ರಗಳನ್ನು ಗುರುತಿಸಲಾಗಿದೆ. ಲಸಿಕೆ ವಿತರಣೆ ಮಾಡಲು 10,008 ವಾಕ್ಸಿನೇಟರ್ ಸಿಬ್ಬಂದಿಗಳನ್ನು ಗುರುತಿಸಲಾಗಿದೆ' ಎಂದು ಹೇಳಿದ್ದಾರೆ. 'ಸರ್ಕಾರಿ ಆರೋಗ್ಯ ಕೇಂದ್ರಗಳ ಸಿಬ್ಬಂದಿ, ಆರೋಗ್ಯ ಕಾರ್ಯಕರ್ತರ ಬಗೆಗಿನ ಮಾಹಿತಿಯನ್ನು ದಾಖಲಿಸಲಾಗಿದೆ. ಶೇ.80ರಷ್ಟು ಖಾಸಗಿ ಆಸ್ಪತ್ರೆಗಳು ಮಾಹಿತಿ ಒದಗಿಸಿವೆ. ಇನ್ನೂ ಶೇ.20ರಷ್ಟು ಆಸ್ಪತ್ರೆಗಳು ವಾರದೊಳಗೆ ಮಾಹಿತಿ ನೀಡಲಿವೆ.

» 14

ಕನ್ನಡಪ್ರಭ

| Date | 25-11-2020 |
| --- | --- |
| Page No | 4 |



# ವಿಜಯನಗರ ಪೈಪ್‌ಲೈನ್ ರಸ್ತೆ ಫುಟ್‌ಪಾತ್ ತೆರವು

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಪೊಲೀಸರಿಗೆ ಕ್ಯಾರೆ ಎನ್ನದೆ, ವಿಜಯನಗರ ಪೈಪ್‌ಲೈನ್ ರಸ್ತೆಯ ಪಾದಚಾರಿ ಮಾರ್ಗಗಳಲ್ಲಿ ಬೈಕ್ ನಿಲ್ಲಿಸುತ್ತಿದವರ ವಿರುದ್ಧ ಮಂಗಳವಾರ ಸಂಚಾರ ಠಾಣೆ ಪೊಲೀಸರು ವಿಶೇಷ ಕಾರ್ಯಾಚರಣೆ ನಡೆಸಿದ್ದಾರೆ.

ಮಾಗಡಿ ರಸ್ತೆ ಮತ್ತು ವಿಜಯನಗರ ಸಂಚಾರ ಠಾಣೆ ಪೊಲೀಸರು ಅನಧಿಕೃತವಾಗಿ ನಿಲ್ಲಿಸಿಕೊಂಡಿದ್ದ ವಾಹನಗಳನ್ನು ತೆರವುಗೊಳಿಸಿ ಅಂಗಡಿ ಮಾಲೀಕರಿಗೆ ಎಚ್ಚರಿಕೆ ನೀಡಿದ್ದಾರೆ. ವಿಜಯನಗರ ಪೈಪ್‌ಲೈನ್ ರಸ್ತೆಯಲ್ಲಿ 30ಕ್ಕೂ ಹೆಚ್ಚು ಸೆಕೆಂಡ್ಸ್ ದ್ವಿಚಕ್ರ ವಾಹನಗಳನ್ನು ಮಾರಾಟ ಮಾಡುವ ಮಳಿಗೆಗಳು ಹಾಗೂ ಅಂಗಡಿಗಳು ಇವೆ. ಈ ಮಳಿಗೆಗಳ ಮಾಲೀಕರು ಪಾದಚಾರಿ ಮಾರ್ಗಗಳಲ್ಲಿ ಬೈಕ್ ಹಾಗೂ ಮಾರಾಟದ ವಸ್ತುಗಳನ್ನು ಇಡುತ್ತಿದ್ದರು. ಇದರಿಂದ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗಿತ್ತು. ಮಾಗಡಿ ರಸ್ತೆ ಸಂಚಾರ ಠಾಣೆ ಇನ್‌ಸ್ಪೆಕ್ಟರ್ ಪಿ.ಎಸ್.ಆನಂದ್ ಹಾಗೂ ವಿಜಯನಗರ ಠಾಣೆ ಪೊಲೀಸರು ಜಂಟಿಯಾಗಿ ಕಾರ್ಯಾಚರಣೆ ನಡೆಸಿ ವಾಹನಗಳನ್ನು ತೆರವುಗೊಳಿಸಿದ್ದಾರೆ.

ಕನ್ನಡಪ್ರಭ

| Date | 25-11-2020 |
| --- | --- |
| Page No | 5 |


# 23 ಲಕ್ಷ ಕೋವಿಡ್ ಲಸಿಕೆ ಸಂಗ್ರಹಕ್ಕೆ ವ್ಯವಸ್ಥೆ

**ನಗರದಲ್ಲಿ ಏಕಕಾಲಕ್ಕೆ ವ್ಯಾಕ್ಸಿನ್ ಸಂಗ್ರಹಿಸಿ ಇಡಲು 47 ಐಸ್‌ಲೆಂಡ್ ರೆಫ್ರಿಜರೇಟರ್ ಸಿದ್ಧ: ಪಾಲಿಕೆ ಆಯುಕ್ತ ಮಂಜುನಾಥ್ ಪ್ರಸಾದ್**

**ಪ್ರಾಥಮಿಕ ಆರೋಗ್ಯ ಕೇಂದ್ರ, ದಾಸಪ್ಪ ಆಸ್ಪತ್ರೆಯಲ್ಲಿ ವ್ಯವಸ್ಥೆ | ಮೊದಲ ಹಂತದಲ್ಲಿ 95000 ಕೊರೋನಾ ವಾರಿಯರ್ಸ್‌ಗೆ ವ್ಯಾಕ್ಸಿನ್**

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಏಕಕಾಲಕ್ಕೆ ಒಟ್ಟೊಬ್ಬರಿ 23 ಲಕ್ಷ ಕೋವಿಡ್ ವ್ಯಾಕ್ಸಿನ್ ಸಂಗ್ರಹಕ್ಕೆ ವ್ಯವಸ್ಥೆ ಇದ್ದು, ಮೊದಲ ಹಂತದಲ್ಲಿ 95 ಸಾವಿರ ಕೋವಿಡ್ ವಾರಿಯರ್‌ಗಳಿಗೆ ವ್ಯಾಕ್ಸಿನ್ ಹಾಕಲಾಗುವುದು ಎಂದು ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್ ತಿಳಿಸಿದ್ದಾರೆ.

ಈ ಕುರಿತು 'ಕನ್ನಡಪ್ರಭ'ಕ್ಕೆ ಪ್ರತಿಕ್ರಿಯೆ ನೀಡಿದ ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್, ಕೋವಿಡ್ ವ್ಯಾಕ್ಸಿನ್ ಸಂಗ್ರಹಿಸುವುದಕ್ಕೆ ಐಸ್‌ಲೆಂಡ್ ರೆಫ್ರಿಜರೇಟರ್ ಅವಶ್ಯಕತೆ ಇದೆ. ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ತಲಾ 50 ಸಾವಿರ ವ್ಯಾಕ್ಸಿನ್ ಸಂಗ್ರಹಿಸುವ ಸಾಮರ್ಥ್ಯವಿರುವ 40 ಹಾಗೂ ದಾಸಪ್ಪ ಆಸ್ಪತ್ರೆಯಲ್ಲಿ ನಾಲ್ಕು ಐಸ್‌ಲೆಂಡ್ ರೆಫ್ರಿಜರೇಟರ್‌ಗಳಿವೆ. ಜತೆಗೆ, ದಾಸಪ್ಪ ಆಸ್ಪತ್ರೆಯಲ್ಲಿ 30 ಸಾವಿರ ವ್ಯಾಕ್ಸಿನ್ ಸಂಗ್ರಹಿಸುವ 3 ಐಸ್‌ಲೆಂಡ್ ರೆಫ್ರಿಜರೇಟರ್‌ಗಳಿವೆ. ಒಟ್ಟು ನಗರದಲ್ಲಿ ಏಕಕಾಲಕ್ಕೆ 23 ಲಕ್ಷ ವ್ಯಾಕ್ಸಿನ್ ಸಂಗ್ರಹಿಸಿಟ್ಟುಕೊಳ್ಳಬಹುದಾಗಿದೆ ಎಂದರು.

ಇನ್ನು ವ್ಯಾಕ್ಸಿನ್ ಹಾಕುವುದಕ್ಕೆ ಬಿಬಿಎಂಪಿ ಬಳಿ 500 ಸ್ಟಾಫ್ ನರ್ಸ್‌ಗಳಿದ್ದಾರೆ. ಪಲ್ಸ್ ಪೋಲಿಯೋ ಅಭಿಯಾನಕ್ಕೆ ಆರೋಗ್ಯ ಸಿಬ್ಬಂದಿ ಸೇರಿದಂತೆ ಒಟ್ಟು ಒಂದು ಸಾವಿರ ಸಿಬ್ಬಂದಿಯಿದ್ದಾರೆ. 2017ರಲ್ಲಿ ಇದೇ ಸಿಬ್ಬಂದಿ ಬಳಸಿಕೊಂಡು ದಡಾರ ರೋಗಕ್ಕೆ ನಗರದ 23 ಲಕ್ಷ ಮಂದಿಗೆ ವ್ಯಾಕ್ಸಿನ್ ಹಾಕಲಾಗಿತ್ತು ಎಂದರು.

ಕೇಂದ್ರ ಸರ್ಕಾರದ ಸೂಚನೆಯಂತೆ ಮೊದಲ ಹಂತದಲ್ಲಿ ನಗರದ 95,011 ಕೊರೋನಾ ವಾರಿಯರ್‌ಗಳಿಗೆ ಕೋವಿಡ್ ವ್ಯಾಕ್ಸಿನ್ ಹಾಕಲು ಪಟ್ಟಿ ಸಿದ್ಧಪಡಿಸಲಾಗಿದೆ. ಈ ಪೈಕಿ 15,072 ಸರ್ಕಾರಿ ಆರೋಗ್ಯ ಅಧಿಕಾರಿ ಸಿಬ್ಬಂದಿ, 2,884, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತರು, 12,400 ಖಾಸಗಿ ಆರೋಗ್ಯ ಅಧಿಕಾರಿ ಮತ್ತು ಸಿಬ್ಬಂದಿ, 64,655 ಖಾಸಗಿ ಪ್ಯಾರಾ ಮೆಡಿಕಲ್ ಮತ್ತು ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳಿದ್ದಾರೆ. ನ.30ರಂದು ರಾಜ್ಯ ಸರ್ಕಾರದ ಮೂಲಕ ಕೇಂದ್ರಕ್ಕೆ ಕೊರೋನಾ ವಾರಿಯರ್ ಪಟ್ಟಿಯನ್ನು ಸಲ್ಲಿಸಲಾಗುವುದು ಎಂದು ಮಾಹಿತಿ ನೀಡಿದರು.



ಕೋವಿಡ್ ವ್ಯಾಕ್ಸಿನ್ ಸಂಗ್ರಹಿಸುವುದಕ್ಕೆ ಐಸ್‌ಲೆಂಡ್ ರೆಫ್ರಿಜರೇಟರ್

## ಒಂದು ಸಾವಿರಕ್ಕಿಂತ ಕಡಿಮೆ ಜನರಲ್ಲಿ ಸೋಂಕು ಪತ್ತೆ

ರಾಜಧಾನಿ ಬೆಂಗಳೂರಿನಲ್ಲಿ ಸತತ ಎರಡನೇ ದಿನ ಮಂಗಳವಾರ ಒಂದು ಸಾವಿರಕ್ಕಿಂತ ಕಡಿಮೆ 927 ಹೊಸ ಸೋಂಕು ಪ್ರಕರಣ ಪತ್ತೆಯಾಗಿದ್ದು, 1,267 ಸೋಂಕಿತರು ಗುಣಮುಖರಾಗಿದ್ದಾರೆ. 12 ಮಂದಿ ಸೋಂಕಿನಿಂದ ಮೃತಪಟ್ಟಿದ್ದಾರೆ. ಕಳೆದ ಸೋಮವಾರ 725 ಹೊಸ ಸೋಂಕು ಪ್ರಕರಣ ಪತ್ತೆಯಾಗಿದ್ದವು. ಮಂಗಳವಾರ 927 ಪ್ರಕರಣ ಪತ್ತೆಯಾಗಿವೆ. ಈ ಮೂಲಕ ನಗರದಲ್ಲಿ ಒಟ್ಟು ಕೊರೋನಾ ಸೋಂಕಿತರ ಸಂಖ್ಯೆ 3,65,317 ಏರಿಕೆಯಾಗಿದೆ. 3,43,169 ಮಂದಿ ಗುಣಮುಖರಾಗಿದ್ದಾರೆ. 18,057 ಸಕ್ರಿಯ ಸೋಂಕಿತರು ವಿವಿಧ ಆಸ್ಪತ್ರೆ, ಆರೈಕೆ ಕೇಂದ್ರ ಹಾಗೂ ಹೋಂ ಐಸೋಲೇಷನ್‌ನಲ್ಲಿದ್ದಾರೆ. ಇನ್ನು ನಗರದ ವಿವಿಧ ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುವವರ ಸಂಖ್ಯೆ 206ಕ್ಕೆ ಇಳಿಕೆಯಾಗಿದೆ ಎಂದು ಆರೋಗ್ಯ ಇಲಾಖೆ ಮಾಹಿತಿ ನೀಡಿದೆ.

## 150ರ ಗಡಿಗೆ ಸೋಂಕಿತ ವಿದ್ಯಾರ್ಥಿಗಳ ಸಂಖ್ಯೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕಾಲೇಜುಗಳು ಆರಂಭವಾಗಿರುವ ಹಿನ್ನೆಲೆಯಲ್ಲಿ ನಗರದ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗೆ ಕೊರೋನಾ ಸೋಂಕು ಪರೀಕ್ಷೆ ಮುಂದುವರೆದಿದ್ದು, ಮಂಗಳವಾರ 35 ವಿದ್ಯಾರ್ಥಿಗಳು ಹಾಗೂ ಶಿಕ್ಷಕರಲ್ಲಿ ಸೋಂಕು ಕಾಣಿಸಿಕೊಂಡಿದ್ದು, ಇದರೊಂದಿಗೆ ಒಟ್ಟು ಸೋಂಕಿತರ ಸಂಖ್ಯೆ 202ಕ್ಕೆ ಏರಿಕೆಯಾಗಿದೆ.

ಮಂಗಳವಾರ ಒಟ್ಟು 2,664 ಕೋವಿಡ್ ಪರೀಕ್ಷೆ ನಡೆಸಲಾಗಿದ್ದು, ಈ ಪೈಕಿ 1,943 ವಿದ್ಯಾರ್ಥಿಗಳು, 243 ಶಿಕ್ಷಕರು ಹಾಗೂ 488 ಇತರೆ ಸಿಬ್ಬಂದಿಯಾಗಿದ್ದಾರೆ. ಒಟ್ಟು 366 ಕೇಂದ್ರದಲ್ಲಿ ಪರೀಕ್ಷೆ ನಡೆಸಲಾಗಿದ್ದು, ಪರೀಕ್ಷೆಗೆ ಬಿಬಿಎಂಪಿ 110 ತಂಡ ನಿಯೋಜಿಸಿತ್ತು. ಮಂಗಳವಾರ 27 ವಿದ್ಯಾರ್ಥಿಗಳು ಹಾಗೂ 8 ಶಿಕ್ಷಕರು ಮತ್ತು ಇತರ ಸಿಬ್ಬಂದಿ ಸೇರಿದಂತೆ ಒಟ್ಟು 35 ಮಂದಿಗೆ ಸೋಂಕು ಇರುವುದು ದೃಢಪಟ್ಟಿದೆ.

## 'ಒಂದು ದಿನ ಕೋವಿಡ್ ನಿಯಂತ್ರಣ, ಮತ್ತೊಂದು ದಿನ ಇಲಾಖೆ ಕಾರ್ಯ'

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೊರೋನಾ ಸೋಂಕು ನಿಯಂತ್ರಣ ಕಾರ್ಯಕ್ಕೆ ನಿಯೋಜಿಸಲಾದ ಸರ್ಕಾರ ಸಚಿವಾಲಯದ ಅಧಿಕಾರಿ ಹಾಗೂ ನೌಕರರು ಒಂದು ದಿನ ನಗರದ ಸೋಂಕು ನಿಯಂತ್ರಣ ಕೆಲಸದಲ್ಲಿ, ಮತ್ತೊಂದು ದಿನ ಸಚಿವಾಲಯ ಕರ್ತವ್ಯ ನಿರ್ವಹಿಸುವಂತೆ ಬಿಬಿಎಂಪಿ ವಿಶೇಷ ಆಯುಕ್ತ(ಆಡಳಿತ) ಜೆ.ಮಂಜುನಾಥ್ ಆದೇಶ ಹೊರಡಿಸಿದ್ದಾರೆ.



ಕೊರೋನಾ ತಡೆಗಟ್ಟುವ ಸಲುವಾಗಿ ಬೆಂಗಳೂರು ನಗರದ ಸರ್ಕಾರದ ವಿವಿಧ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ, ಸಿಬ್ಬಂದಿಯನ್ನು ನಿಯೋಜನೆ ಮಾಡಲಾಗಿತ್ತು. ಸಚಿವಾಲಯದ ಅಧಿಕಾರಿ ಹಾಗೂ ನೌಕರರು ಕರ್ತವ್ಯವು ಸಚಿವಾಲಯಕ್ಕೆ ಅವಶ್ಯಕತೆ ಇರುವುದರಿಂದ ಸಿಬ್ಬಂದಿ ಹಿಂತಿರುಗಿಸುವ ಕುರಿತು ಮುಖ್ಯ ಕಾರ್ಯದರ್ಶಿ ಅಧ್ಯಕ್ಷತೆಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ಚರ್ಚೆ ನಡೆಸಲಾಗಿತ್ತು. ಆಗ ಸರ್ಕಾರದ ಸಚಿವಾಲಯ ಅಧಿಕಾರಿ, ಸಿಬ್ಬಂದಿ ಕೊರೋನಾ ಸೋಂಕು ನಿಯಂತ್ರಣ ಕಾರ್ಯದೊಂದಿಗೆ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ನಿರ್ವಹಿಸುವುದು ಅಗತ್ಯವಾಗಿರುವುದರಿಂದ ಒಂದು ದಿನ ಸೋಂಕು ನಿಯಂತ್ರಣ ಕಾರ್ಯದಲ್ಲಿ ಮತ್ತೊಂದು ದಿನ ಸಚಿವಾಲಯದಲ್ಲಿ ಕರ್ತವ್ಯ ನಿರ್ವಹಿಸುವಂತೆ ನಿರ್ದೇಶಿಸಿದ್ದರು.

ಈ ಹಿನ್ನೆಲೆಯಲ್ಲಿ ಬಿಬಿಎಂಪಿ ಆಡಳಿತ ವಿಭಾಗದ ವಿಶೇಷ ಆಯುಕ್ತ ಜೆ. ಮಂಜುನಾಥ್ ಅವರು ಬಿಬಿಎಂಪಿ ವ್ಯಾಪ್ತಿಯಲ್ಲಿ ಕೋವಿಡ್ ಕಾರ್ಯಕ್ಕೆ ನಿಯೋಜನೆಗೊಂಡ ಸಚಿವಾಲಯದ ಸಿಬ್ಬಂದಿ ಒಂದು ದಿನ ಸೋಂಕು ನಿಯಂತ್ರಣ ಕಾರ್ಯದಲ್ಲಿ ಮತ್ತೊಂದು ದಿನ ಸಚಿವಾಲಯದ ಕಾರ್ಯ ನಿರ್ವಹಿಸಬೇಕು. ಯಾವ ದಿನ ಎಲ್ಲಿ ಕಾರ್ಯನಿರ್ವಹಿಸಬೇಕು ಎಂಬುದರ ಬಗ್ಗೆ ವಲಯ ಮಟ್ಟದ ಸಂಯೋಜಕರಿಂದ ಪ್ರತ್ಯೇಕವಾಗಿ ಆದೇಶ ನೀಡಲಾಗುವುದು ಎಂದು ತಿಳಿಸಿದ್ದಾರೆ.

## ನಾಡಿದ್ದು ಬಿಬಿಎಂಪಿ ಕನ್ನಡ ರಾಜ್ಯೋತ್ಸವ: ರಾಜ್ ಪುತ್ಥಳಿ ಉದ್ಘಾಟನೆ

• **ಕನ್ನಡ ಪ್ರಭ ವಾರ್ತೆ** ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೌಕರರ ಕನ್ನಡ ಸಂಘದ ವತಿಯಿಂದ ಪಾಲಿಕೆಯ ಕೇಂದ್ರ ಕಚೇರಿಯ ಆವರಣದಲ್ಲಿ ನ.27ರಂದು ಬೆಳಗ್ಗೆ 10 ಗಂಟೆಗೆ ಕರ್ನಾಟಕ ರಾಜ್ಯೋತ್ಸವ ಆಚರಣೆ ಜರುಗಲಿದೆ. ಮಧ್ಯಾಹ್ನ 3 ಗಂಟೆಗೆ ಪದ್ಮ ಭೂಷಣ ಡಾ. ರಾಜಕುಮಾರ್ ಅವರ (ಮೇಯರ್ ಮುತ್ತಣ್ಣ) ಪುತ್ಥಳಿ ಅನಾವರಣ ನಡೆಯಲಿದೆ.

ವಿವಿಧ ಕ್ಷೇತ್ರಗಳ ಸಾಧಕರಿಗೆ 'ಗೌರವ ಸನ್ಮಾನ', ಬಿಬಿಎಂಪಿ ಅಧಿಕಾರಿ ಮತ್ತು ನೌಕರರಿಗೆ 'ಲಕ್ಷ್ಮಣರಾವ್ ಪ್ರಶಸ್ತಿ' ಪ್ರದಾನ ನಡೆಯಲಿದ್ದು ಸಿಎಂ ಬಿ.ಎಸ್. ಯಡಿಯೂರಪ್ಪ, ಶಿವರಾಜ್ ಕುಮಾರ್, ರಾಘವೇಂದ್ರ ರಾಜಕುಮಾರ್, ಪುನೀತ್ ರಾಜಕುಮಾರ್ ಭಾಗವಹಿಸಲಿದ್ದಾರೆ.

ಕನ್ನಡಪ್ರಭ

| Date | 25-11-2020 |
|---|---|
| Page No | 6 |

# ತ್ಯಾಜ್ಯ ನಿರ್ವಹಣೆಗೆ ಪ್ರತ್ಯೇಕ ಮಂಡಳಿ

## ಮುಖ್ಯಮಂತ್ರಿ ಸೂಚನೆ ಮೇರೆಗೆ ಪ್ರಸ್ತಾವನೆ ಸಿದ್ಧಪಡಿಸುತ್ತಿರುವ ಬಿಬಿಎಂಪಿ | ಸರ್ಕಾರಕ್ಕೆ ಶೀಘ್ರ ಸಲ್ಲಿಕೆ: ಆಯುಕ್ತ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನಗರದಲ್ಲಿ ಉತ್ಪಾದನೆಯಾಗುವ ತ್ಯಾಜ್ಯವನ್ನು ಸಮರ್ಪಕ ನಿರ್ವಹಣೆಗೆ ಪ್ರತ್ಯೇಕ ಘನತ್ಯಾಜ್ಯ ನಿರ್ವಹಣಾ ಮಂಡಳಿ ಸ್ಥಾಪಿಸುವುದಕ್ಕೆ ಮುಂದಾಗಿರುವ ರಾಜ್ಯ ಸರ್ಕಾರ ಈ ಕುರಿತು ಪ್ರಸ್ತಾವನೆ ಸಲ್ಲಿಸುವಂತೆ ಬಿಬಿಎಂಪಿಗೆ ಸೂಚಿಸಿದೆ.

ಈ ಕುರಿತು 'ಕನ್ನಡಪ್ರಭ'ದೊಂದಿಗೆ ಮಾತನಾಡಿದ ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ್ ಪ್ರಸಾದ್ ಅವರು, ಬಿಬಿಎಂಪಿ ವ್ಯಾಪ್ತಿ 800 ಚದರ ಕಿಲೋ ಮೀಟರ್ ವರೆಗೆ ವಿಸ್ತರಿಸಿದೆ. ಸುಮಾರು 1.20 ಕೋಟಿ ಜನ ಇಲ್ಲಿ ವಾಸಿಸುತ್ತಾರೆ. ಮೂಲ ಸೌಕರ್ಯ ಒದಗಿಸುವುದು ಸವಾಲಿನ ಕಾರ್ಯ. ಹೀಗಾಗಿ, ಜಲ ಮಂಡಳಿ, ಬೆಸ್ಕಾಂ ಮಾದರಿಯಲ್ಲಿ ಪ್ರತ್ಯೇಕ ಘನತ್ಯಾಜ್ಯ ನಿರ್ವಹಣೆಗೆ ಪ್ರತ್ಯೇಕ ಮಂಡಳಿ ನಿರ್ಮಾಣಕ್ಕೆ ಸಂಬಂಧಿಸಿದಂತೆ ಪ್ರಸ್ತಾವನೆ ಸಲ್ಲಿಸಲು ಮುಖ್ಯಮಂತ್ರಿಯವರು ಸೂಚಿಸಿದ್ದಾರೆ ಎಂದರು.

ನಗರದಲ್ಲಿ ಉತ್ಪಾದನೆ ಆಗುತ್ತಿರುವ ತ್ಯಾಜ್ಯ, ನಿರ್ವಹಣೆಗೆ ಮಾಡುತ್ತಿರುವ ವೆಚ್ಚ, ಸಂಸ್ಕರಣಾ ಘಟಕಗಳ ನಿರ್ವಹಣೆ ಸೇರಿದಂತೆ ವಿವರವಾದ ಪ್ರಸ್ತಾವನೆ ಸಿದ್ಧಪಡಿಸಲಾಗುತ್ತಿದೆ. ಪಾಲಿಕೆ ಆಡಳಿತಾಧಿಕಾರಿಗಳಿಂದ ಅನುಮೋದನೆ ಪಡೆದು ಒಂದು ವಾರದೊಳಗೆ ಸರ್ಕಾರಕ್ಕೆ ಪ್ರಸ್ತಾವನೆ



ಸಲ್ಲಿಸಲಾಗುವುದು ಎಂದು ವಿವರಿಸಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ಸುಮಾರು 10 ಲಕ್ಷಕ್ಕೂ ಅಧಿಕ ತ್ಯಾಜ್ಯ ಉತ್ಪಾದನಾ ಕೇಂದ್ರಗಳಿಂದ ಕಸ ಸಂಗ್ರಹಿಸಲಾಗುತ್ತಿದೆ. ಜತೆಗೆರಸ್ತೆಗಳು, ಉದ್ಯಾನಗಳು, ಮಾರುಕಟ್ಟೆಗಳು ಹಾಗೂ ಬ್ಲಾಕ್ ಸ್ಪಾಟ್‌ಗಳಿಂದ ಹೆಚ್ಚುವರಿ ತ್ಯಾಜ್ಯ ಉತ್ಪಾದನೆಯಾಗುತ್ತಿದೆ. ಈ ಎಲ್ಲ ತ್ಯಾಜ್ಯದ ವಿಲೇವಾರಿ ಮತ್ತು ನಿರ್ವಹಣೆಗೆ ಕೇವಲ ₹50 ಕೋಟಿ ವಾರ್ಷಿಕ ತೆರಿಗೆ ವಸೂಲಿ ಮಾಡಲಾಗುತ್ತಿದೆ. ಆದರೆ, ನಿರ್ವಹಣೆಗೆ ಸುಮಾರು ಒಂದು ಸಾವಿರ ಕೋಟಿ ರುಪಾಯಿಗಿಂತ ಅಧಿಕ ವೆಚ್ಚ ಮಾಡಲಾಗುತ್ತಿದೆ. ಆದರೂ ತ್ಯಾಜ್ಯ ಸಮಸ್ಯೆ ಪರಿಹಾರವಾಗುತ್ತಿಲ್ಲ ಎಂದರು.

ಹಸಿ ಕಸವನ್ನು ಸಾವಯವ ಗೊಬ್ಬರ ಉತ್ಪಾದನೆ, ವಿದ್ಯುತ್ ಉತ್ಪಾದನೆಗೆ ಹಾಗೂ ಪ್ಲಾಸ್ಟಿಕನ್ನು ಸಿಮೆಂಟ್ ಮತ್ತು ಡಾಂಬರ್ ನಿರ್ಮಾಣ ಕಾರ್ಯಕ್ಕೆ, ಮಾಂಸದ ತ್ಯಾಜ್ಯವನ್ನು ಮೀನಿನ ಆಹಾರ ಉತ್ಪಾದನೆಗೆ ಸೇರಿ ವಿವಿಧ ವಿಭಾಗದಲ್ಲಿ ಬಳಕೆ ಮಾಡಲಾಗುತ್ತಿದೆ. ಎಲ್ಲ ಆದಾಯ ಸಂಗ್ರಹಿಸಿ ನಿರ್ವಹಣೆ ಮಾಡಲು ಪಾಲಿಕೆಯ ಘನತ್ಯಾಜ್ಯ ನಿರ್ವಹಣಾ ವಿಭಾಗದಿಂದ ಪ್ರತ್ಯೇಕ ಸಂಸ್ಥೆಯಾಗಿ ಮಾಡುವುದು ಅಗತ್ಯವಾಗಿದೆ ಎಂದರು.

ಇನ್ನು ಪ್ರತ್ಯೇಕ ಮಂಡಳಿ ರಚನೆ ಮಾಡುವುದರಿಂದ ಬಿಬಿಎಂಪಿಯ ತ್ಯಾಜ್ಯ ಸಂಸ್ಕರಣಾ ಘಟಕಗಳ ವ್ಯವಸ್ಥಿತವಾಗಿ ನಿರ್ವಹಣೆ ಮಾಡಬಹುದು ಎಂಬ ಉದ್ದೇಶದಿಂದ ಸರ್ಕಾರ ಮಂಡಳಿ ರಚನೆಗೆ ಮುಂದಾಗಿದೆ ಎಂದು ವಿವರಿಸಿದರು.

# ಮತದಾನದ ಬಗ್ಗೆ ಹೆಚ್ಚೆಚ್ಚು ಜಾಗೃತಿ ಮೂಡಿಸಿ

## 18 ವರ್ಷ ಮೇಲ್ಪಟ್ಟ ಒಬ್ಬರ ಹೆಸರು ತಪ್ಪದಂತೆ ಮತಪಟ್ಟಿಗೆ ಸೇರಿಸಿ: ಕುಮಾರ್ ನಾಯಕ್

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನಗರದಲ್ಲಿ 18 ವರ್ಷ ಮೇಲ್ಪಟ್ಟ ಯಾರೊಬ್ಬರೂ ಮತದಾರ ಪಟ್ಟಿಯಿಂದ ಹೊರಗೆ ಉಳಿಯದಂತೆ ಹೆಸರು ನೋಂದಣಿಗೆ ಹೆಚ್ಚುಹೆಚ್ಚು ಜಾಗೃತಿ ಮೂಡಿಸಿ ಎಂದು ರಾಜ್ಯ ಮತದಾರರ ಪಟ್ಟಿ ವೀಕ್ಷಕ ಜಿ.ಕುಮಾರ್ ನಾಯಕ್ ಸೂಚಿಸಿದ್ದಾರೆ.

ಮಂಗಳವಾರ ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಬೆಂಗಳೂರು-ಬಿಬಿಎಂಪಿ ಕೇಂದ್ರ ವ್ಯಾಪ್ತಿಯ ರಾಜರಾಜೇಶ್ವರಿನಗರ, ಶಿವಾಜಿನಗರ, ಶಾಂತಿನಗರ, ಗಾಂಧಿನಗರ, ರಾಜಾಜಿನಗರ, ಚಾಮರಾಜ ಪೇಟೆ ಹಾಗೂ ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ-2021ರ ಸಭೆ ನಡೆಸಲಾಯಿತು.



ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಮಂಗಳವಾರ ಮತದಾರರ ಪಟ್ಟಿ ಪರಿಷ್ಕರಣ ಸಭೆ ನಡೆಯಿತು.

ಈ ವೇಳೆ ಮಾತನಾಡಿದ ಜಿ.ಕುಮಾರ್ ನಾಯಕ್, 18 ವರ್ಷ ಮೇಲ್ಪಟ್ಟು ಮತದಾರರ ಪಟ್ಟಿಯಿಂದ ಹೊರಗೆ ಉಳಿದ ಎಲ್ಲರನ್ನು ಗುರುತಿಸಿ ಮತದಾರರ ಪಟ್ಟಿಗೆ ಸೇರ್ಪಡೆ ಮಾಡಬೇಕು. ನಗರದಲ್ಲಿ ಸಾರ್ವಜನಿಕರು ಕಚೇರಿಗಳಿಗೆ ತೆರಳುವ ಮುನ್ನವೇ ತ್ಯಾಜ್ಯ ಸಂಗ್ರಹಿಸುವ ಆಟೋಗಳಿಗೆ ಧ್ವನಿವರ್ಧಕ ಅಳವಡಿಸಿ ಅರಿವು ಮೂಡಿಸಬೇಕು. ಕ್ಷೇತ್ರವಾರು ಮತಗಟ್ಟೆ ಪಟ್ಟಿ ಹಾಗೂ ಒಟ್ಟು ಜನಸಂಖ್ಯೆ ಎಷ್ಟಿದೆ ಎಂಬ ಮಾಹಿತಿಯೊಂದಿಗೆ ತಾಳೆ ಹಾಕಿ ಹೊರಗುಳಿದ ಮತದಾರರನ್ನು ಪಟ್ಟಿಗೆ ಸೇರ್ಪಡೆ ಮಾಡಿಸಬೇಕು ಎಂದು ನಿರ್ದೇಶಿಸಿದರು.

ಅಪರ ಜಿಲ್ಲಾ ಚುನಾವಣಾ ಅಧಿಕಾರಿ ಜೆ.ಮಂಜುನಾಥ್ ಮಾತನಾಡಿ, ಮತದಾರರ ಪಟ್ಟಿ ಹಾಗೂ ಎಲೆಕ್ಟರ್ಸ್ ಪಾಪ್ಯುಲೇಷನ್ ರೇಷಿಯೋ ಹೆಚ್ಚಳಕ್ಕೆ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ 4 ಭಾನುವಾರ ಮತದಾರರ ನೋಂದಣಿಗೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ. 2020 ಜನವರಿಗೆ 18 ವರ್ಷ ತುಂಬಿದ ಎಲ್ಲ ಯುವಕ ಯುವತಿಯರಿಗೆ ನಮೂನೆ-6 ಭರ್ತಿ ಮಾಡಿಸಿ ಭಾವಚಿತ್ರ, ಶಾಲೆಯ ವರ್ಗಾವಣೆ ಪ್ರಮಾಣಪತ್ರ, ಅಂಕಪಟ್ಟಿ, ಆಧಾರ್ ಕಾರ್ಡ್ ನಕಲು ನೀಡಿ ಮತದಾರರ ಪಟ್ಟಿಗೆ ಹೆಸರು ಸೇರಿಸಲು ಅವಕಾಶ ನೀಡಲಾಗುತ್ತಿದೆ ಎಂದು ವಿವರಿಸಿದರು.

ಕನ್ನಡಪ್ರಭ

| Date | 25-11-2020 |
| --- | --- |
| Page No | 6 |

# 1870 ಕೊರೋನಾ ಕೇಸ್, 1949 ಮಂದಿ ಗುಣಮುಖ

## 1.18 ಲಕ್ಷ ಪರೀಕ್ಷೆ; ಪಾಸಿಟಿವಿಟಿ ಕೇವಲ ಶೇ.1.58

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದಲ್ಲಿ ಮಂಗಳವಾರ ಹೊಸ ಕೊರೋನಾ ಪ್ರಕರಣಗಳ ಸಂಖ್ಯೆಯಲ್ಲಿ ತುಸು ಏರಿಕೆ ದಾಖಲಾಗಿದ್ದರೂ ಪಾಸಿಟಿವಿಟಿ ದರದಲ್ಲಿ ಹೆಚ್ಚು ಬದಲಾವಣೆ ಆಗಿಲ್ಲ. 1,870 ಮಂದಿಯಲ್ಲಿ ಹೊಸದಾಗಿ ಕೊರೋನಾ ಸೋಂಕು ಕಾಣಿಸಿಕೊಂಡಿದೆ. 1,949 ಮಂದಿ ಗುಣಮುಖರಾಗಿದ್ದಾರೆ. 17 ಮಂದಿ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ



ಸೋಮವಾರ ಶೇ. 1.57ರ ಪಾಸಿಟಿವಿಟಿ ದರದಲ್ಲಿ 1509 ಪ್ರಕರಣಗಳು ಬೆಳಕಿಗೆ ಬಂದಿದ್ದವು. ಮಂಗಳವಾರ ಶೇ. 1.58 ರ ಪಾಸಿಟಿವಿಟಿ ದರ ದಾಖಲಾಗಿದೆ. ಮಂಗಳವಾರ ಒಂದೇ ದಿನ 1.18 ಲಕ್ಷ ಕೊರೋನಾ ಪರೀಕ್ಷೆ ನಡೆಸಲಾಗಿದೆ. ಒಟ್ಟು 1.04 ಕೋಟಿ ಪರೀಕ್ಷೆ ಈವರೆಗೆ ನಡೆದಿದೆ. ಒಟ್ಟು ಸಕ್ರಿಯ ಪ್ರಕರಣಗಳ ಸಂಖ್ಯೆ 24,612ಕ್ಕೆ ಇಳಿದಿದೆ. ಈ ಪೈಕಿ 418 ಮಂದಿ ತೀವ್ರ ನಿಗಾ ವಿಭಾಗದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈವರೆಗೆ ಒಟ್ಟು 8.76 ಲಕ್ಷ ಜನರಲ್ಲಿ ಸೋಂಕು ಪತ್ತೆಯಾಗಿದ್ದು, ಇವರಲ್ಲಿ 8.40 ಲಕ್ಷ ಜನರು ಗುಣಮುಖರಾಗಿದ್ದಾರೆ. 11,695 ಮಂದಿ ಮೃತರಾಗಿದ್ದಾರೆ. 19 ಮಂದಿ ಸೋಂಕಿತರು ಅನ್ಯ ಕಾರಣಗಳಿಂದ ಮರಣವನ್ನಪ್ಪಿದ್ದಾರೆ.

VK ವಿಜಯ ಕರ್ನಾಟಕ

| Date | 25-11-2020 |
| --- | --- |
| Page No | 1 |


# ಇಂದು, ನಾಳೆ ಮಳೆ ಸಾಧ್ಯತೆ

**ಬೆಂಗಳೂರು :** ನಗರದಲ್ಲಿ ಬುಧವಾರದಿಂದ ಎರಡು ದಿನ ಮಳೆಯಾಗಲಿದೆ. ನೆರೆಯ ತಮಿಳುನಾಡು ಕರಾವಳಿ ಬಳಿ ವಾಯುಭಾರ ಕುಸಿತ ಉಂಟಾಗಿರುವ ಕಾರಣ ಬೆಂಗಳೂರು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮಳೆಯಾಗಲಿದೆ.



ಬುಧವಾರ ಮೋಡ ಮುಸುಕಿದ ವಾತಾವರಣ ಇರಲಿದ್ದು, ಸಂಜೆ ಬಳಿಕ ಮಳೆಯಾಗಲಿದೆ. ಗುರುವಾರ ಹೆಚ್ಚು ಪ್ರಮಾಣದ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಕಳೆದೊಂದು ವಾರದಿಂದ ನಗರದಲ್ಲಿ ಮಳೆಯಾಗಿಲ್ಲ, ಒಂದೆರಡು ದಿನ ಸೀಮಿತ ಭಾಗಗಳಲ್ಲಿ ತುಂತುರು ಮಳೆ ಮಾತ್ರ ಆಗಿದೆ. ಮಳೆಯಾಗದಿದ್ದರೂ, ಕನಿಷ್ಠ ಉಷ್ಣಾಂಶ 17-18 ಡಿಗ್ರಿ ಸೆ. ಆಸುಪಾಸಿನಲ್ಲಿದೆ. ಭಾರಿ ಮಳೆಯಾದಲ್ಲಿ ಕನಿಷ್ಠ ಉಷ್ಣಾಂಶದಲ್ಲಿ ಇನ್ನಷ್ಟು ಇಳಿಕೆಯಾಗುವ ಸಾಧ್ಯತೆ ಇದೆ.

ವಿಜಯ ಕರ್ನಾಟಕ

| Date | 25-11-2020 |
|---|---|
| Page No | 1 |

# ರಾಜಕೀಯ ನಾಯಕರ ಫೋಟೋ ಬಳಕೆ ಬಿಬಿಎಂಪಿ ಎಚ್ಚರಿಕೆ

ಬೆಂಗಳೂರು, ನ. 24– ಮಹಾ ನಗರ ಪಾಲಿಕೆ ವತಿಯಿಂದ ಕೈಗೆತ್ತಿಕೊಳ್ಳುವ ಯೋಜನೆಗಳಿಗೆ ರಾಜಕಾರಣಿಗಳ ಫೋಟೋ ಬಳಸಿದರೆ, ಕ್ರಿಮಿನಲ್ ಕೇಸ್ ದಾಖಿಲು ಮಾಡಲಾಗುವುದು ಎಂದು ದಾಖಿಲು ಮಾಡಲಾಗುವುದು ಎಂದು ಬಿಬಿಎಂಪಿ ಆಯುಕ್ತ ಎನ್. ಮಂಜುನಾಥ್ ಪ್ರಸಾದ್ ಸುತ್ತೋಲೆ ಹೊರಡಿಸಿದ್ದಾರೆ.

ಬಸ್ ನಿಲ್ದಾಣಗಳು, ನೀರಿನ ಘಟಕಗಳು ಸೇರಿದಂತೆ, ಸಾರ್ವಜನಿಯ ಸ್ಥಳಗಳಲ್ಲಿ ಬಿಬಿಎಂಪಿ ಕೈಗೆತ್ತಿಕೊಳ್ಳುವ ಯೋಜನೆಗಳು ಮತ್ತು ಕಾಮಗಾರಿಗಳಲ್ಲಿ ರಾಜಕೀಯ ನಾಯಕರ ಫೋಟೋಗಳನ್ನು ಹಾಕುವಂತಿಲ್ಲ. ಹಾಗೊಂದು ವೇಳೆ ಹಾಕಿದರೆ, ಅಂತಹವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಿಲು ಮಾಡುವಂತೆ ಎಲ್ಲಾ 8 ವಲಯಗಳ ಜಂಟಿ ಆಯುಕ್ತರು ಮತ್ತು ಇಂಜಿನಿಯರ್ ಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಸಾಮಾಜಿಕ ಕಾರ್ಯಕರ್ತೆ ಸಾಯಿದತ್ತ ಅವರ ದೂರಿನ ಆಧಾರದ ಮೇಲೆ ಮಂಜುನಾಥ್ ಪ್ರಸಾದ್ ಈ ಕ್ರಮ ಕೈಗೊಂಡಿದ್ದಾರೆ. ಬೆಂಗಳೂರಿನ ಸಾರ್ವಜನಿಯ ಸ್ಥಳಗಳಾದ ನೀರಿನ ಘಟಕ ಸೇರಿದಂತೆ, ಬಿಬಿಎಂಪಿ ಕಾಮಗಾರಿಗಳಲ್ಲಿ ರಾಜಕೀಯ ನಾಯಕರ ಫೋಟೋಗಳು ಇದ್ದರೆ, ಈ ಕೂಡಲೇ ತೆಗೆದುಹಾಕುವಂತೆ ಅವರು ಸೂಚನೆ ನೀಡಿದ್ದಾರೆ.

# ವಾಯುಭಾರ ಕುಸಿತ ರಾಜ್ಯದ ಹಲವೆಡೆ ಮಳೆ

ಬೆಂಗಳೂರು, ನ 24– ಬಂಗಾಳ ಉಪಸಾಗರದ ನೈಋತ್ಯ ಭಾಗದಲ್ಲಿ ವಾಯುಭಾರ ಕುಸಿತವಾಗಿರುವುದರಿಂದ ಮುಂದಿನ 24 ಗಂಟೆಯಲ್ಲಿ ಮತ್ತಷ್ಟು ತೀವ್ರವಾಗಿ 'ನಿವಾರ್' ಚಂಡಮಾರುತ ಅಪ್ಪಳಿಸುವ ಸಾಧ್ಯತೆ ಇದ್ದು, ಬೆಂಗಳೂರು ಸೇರಿದಂತೆ ಹಲವೆಡೆ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದಿ ಹವಾಮಾನ ಇಲಾಖೆಯ ಪ್ರಾದೇಶಿಕ ನಿರ್ದೇಶಕರು ತಿಳಿಸಿದ್ದಾರೆ.

ಇದರ ಪ್ರಭಾವದಿಂದ ಕೋಲಾರ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ರಾಮನಗರ, ತುಮಕೂರು, ಮಂಡ್ಯ, ಚಾಮರಾಜನಗರ ಭಾರಿ ಮಳೆಯಾಗಲಿದೆ. ಈ ಹಿನ್ನೆಲೆ ನವೆಂಬರ್ 25 ಹಾಗೂ 26 ರಂದು ಈ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ ಎಂದು ಹವಾಮಾನ ಇಲಾಖೆಯ ಪ್ರಾದೇಶಿಕ ನಿರ್ದೇಶಕರಾದ ಸಿ. ಎಸ್. ಪಾಟೀಲ್ ತಿಳಿಸಿದ್ದಾರೆ. ನಿವಾರ್ ಸೈಕ್ಲೋನ್ ನಾಳೆ ಪಾಂಡಿಚೇರಿ ಹಾಗೂ ತಮಿಳುನಾಡು ಕರಾವಳಿಯನ್ನು ದಾಟಿ, ಕರೈಕಲ್ ಮತ್ತು ಮಹಾಬಲಿಪುರಂಗೆ ಬರುವ ಸಾಧ್ಯತೆ ಹೆಚ್ಚಿದೆ.

VK ವಿಜಯ ಕರ್ನಾಟಕ

| Date | 25-11-2020 |
| --- | --- |
| Page No | 2 |

## ಬೂತ್ ಮಟ್ಟದಲ್ಲಿ ಕೋವಿಡ್ ಲಸಿಕೆ ನೀಡಲು ಸರಕಾರ ಕ್ರಮ

# ಲಸಿಕೆ ವಿತರಣೆಗೆ ಸಿಎಂ ನೇತೃತ್ವ

**ವಿಕ ಸುದ್ದಿಲೋಕ** ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿಯವರ ಸೂಚನೆಯಂತೆ ಕೋವಿಡ್ ಲಸಿಕೆ ವಿತರಣೆ ಸಂಬಂಧ ಸಿಎಂ ನೇತೃತ್ವದ ಸಂಚಾಲನಾ ಸಮಿತಿ ರಚಿಸಲು ರಾಜ್ಯ ಸರಕಾರ ನಿರ್ಧರಿಸಿದೆ.

ಕೋವಿಡ್ ಲಸಿಕೆ ವಿತರಣೆ ಸಂಬಂಧ ಪ್ರಧಾನಿ ನರೇಂದ್ರ ಮೋದಿಯವರು ನಾನಾ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಮಂಗಳವಾರ ವಿಡಿಯೊ ಸಂವಾದ ನಡೆಸಿದರು. ಸಿಎಂ ಬಿ.ಎಸ್.ಯಡಿಯೂರಪ್ಪ, ಕಂದಾಯ ಸಚಿವ ಆರ್. ಅಶೋಕ್, ಗೃಹ ಸಚಿವ ಬಸವರಾಜ ಬೊಮ್ಮಾಯಿ, ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯ ಭಾಸ್ಕರ್ ಪಾಲ್ಗೊಂಡಿದ್ದರು. ಹೈದರಾಬಾದ್ ಪ್ರವಾಸದಲ್ಲಿರುವ ಆರೋಗ್ಯ ಮತ್ತು ವೈದ್ಯ ಶಿಕ್ಷಣ ಸಚಿವ ಡಾ. ಕೆ. ಸುಧಾಕರ್ ಅಲ್ಲಿಂದಲೇ ಭಾಗಿಯಾಗಿದ್ದರು.

ಕೋವಿಡ್ ಲಸಿಕೆ ವಿತರಣೆ, ನಿರ್ವಹಣೆ ಸಂಬಂಧ ರಾಜ್ಯ ಮಟ್ಟದಲ್ಲಿ ಸಿಎಂ ನೇತೃತ್ವದ ಸಂಚಾಲನಾ ಸಮಿತಿ ರಚಿಸಲು ಪ್ರಧಾನಿ ಸೂಚಿಸಿದ್ದಾರೆ. ಅದರಂತೆ ಕ್ರಮ ಕೈಗೊಳ್ಳಲಾಗುವುದು. ಜಿಲ್ಲಾ, ತಾಲೂಕು ಮಟ್ಟದಲ್ಲೂ ಸಮಿತಿ ಇರಲಿವೆ ಎಂದು ಸಭೆ ಬಳಿಕ ಮಾಹಿತಿ ಒದಗಿಸಿದ ಗೃಹ ಸಚಿವ ಬಸವರಾಜ ಬೊಮ್ಮಾಯಿ ತಿಳಿಸಿದರು.

ಪ್ರಧಾನಿ ನಿರ್ದೇಶನದಂತೆ ಬೂತ್ ಮಟ್ಟದಿಂದಲೂ ಲಸಿಕೆ ವಿತರಣೆಗೆ ಸಿದ್ಧತೆ ಮಾಡಿಕೊಳ್ಳಲಾಗುತ್ತದೆ. ಇದು ಚುನಾವಣೆ ನಡೆಸಿದ ಮಾದರಿಯಲ್ಲಿ ಇರುತ್ತದೆ. ಅದಕ್ಕಾಗಿ ಸ್ವಯಂ ಸೇವಕರು ಹಾಗೂ ಆರೋಗ್ಯ ಕಾರ್ಯಕರ್ತರನ್ನು ಗುರುತಿಸಲಾಗುವುದು. ಮೊದಲ ಹಂತದಲ್ಲಿ 30 ಕೋಟಿ ಜನರಿಗೆ ಲಸಿಕೆ ನೀಡುವುದು ಕೇಂದ್ರದ ಗುರಿ. ಈ ಪೈಕಿ 1 ಕೋಟಿ ಆರೋಗ್ಯ ಕಾರ್ಯಕರ್ತರು, 2 ಕೋಟಿ ಕೋವಿಡ್ ವಾರಿಯರ್ಸ್, 50 ವರ್ಷ ಮೇಲ್ಪಟ್ಟವರು, ನಾನಾ ರೋಗದಿಂದ ಬಳಲುತ್ತಿರುವವರು ಸೇರಿ 26 ಕೋಟಿ ಜನರು ಇರುತ್ತಾರೆ. ಇವರಿಗೆ 3 ಬಾರಿ ಡೋಜ್ ನೀಡಬೇಕಾಗುತ್ತದೆ. ಹಾಗಾಗಿ ಲಸಿಕೆ ಹಾಕಿಸಿಕೊಂಡವರ ಮಾಹಿತಿಯನ್ನು ಡಿಜಿಟಲ್ ಮಾಧ್ಯಮದ ಮೂಲಕ ಕರಾರುವಾಕ್ಕಾಗಿ ಇಟ್ಟುಕೊಳ್ಳಲಾಗುತ್ತದೆ. ಇದಕ್ಕೆ ಬೇಕಾದ ಎಲ್ಲ ಸಿದ್ಧತೆಯನ್ನು ರಾಜ್ಯದಲ್ಲೂ ಮಾಡಿಕೊಳ್ಳಲಾಗುವುದು ಎಂದರು.

ಕೋವಿಡ್ ಲಸಿಕೆ ಸಂಬಂಧ 50 ಕ್ಲಿನಿಕಲ್ ರಿಸರ್ಚ್ ನಡೆಯುತ್ತಿದೆ. 25 ಅಡ್ವಾನ್ಸ್ ಟ್ರಯಲ್, 5 ಕ್ಲಿನಿಕಲ್ ಟ್ರಯಲ್ ನಡೆಯುತ್ತಿದೆ. ದೇಶದಲ್ಲಿ 25 ಕಂಪನಿಗಳಿಗೆ ವ್ಯಾಕ್ಸಿನ್ ತಯಾರಿಸುವ ಸಾಮರ್ಥ್ಯ ಇದೆ. ಐಸಿಎಂಆರ್ ಸಹಯೋಗದಲ್ಲಿ ಭಾರತ್ ಬಯೋಟೆಕ್, ಆಕ್ಸ್‌ಫರ್ಡ್ ಜೆನಿಕಾ ಮತ್ತಿತರ ಸಂಸ್ಥೆಗಳು ಈ ನಿಟ್ಟಿನಲ್ಲಿ ತೊಡಗಿಸಿಕೊಂಡಿವೆ ಎಂದರು.

**ನಿಖರವಾಗಿ ಹೇಳಿಲ್ಲ:** ಲಸಿಕೆ ಯಾವಾಗ ಲಭ್ಯವಾಗಿರುತ್ತದೆ ಎಂಬ ಬಗ್ಗೆ ಪ್ರಧಾನಿಯವರು ನಿಖರವಾಗಿ ಹೇಳಿಲ್ಲ. ಲಸಿಕೆ ಬಂದಾಗ ವಿತರಣೆ ಸೂಕ್ತ ವ್ಯವಸ್ಥೆ ಮಾಡಿಕೊಂಡಿರಬೇಕು ಎಂಬ ಕಾರಣದಿಂದ ಈ ಸಭೆ ನಡೆಸಿದ್ದಾರೆ. ಲಸಿಕೆ ನೀಡಲು ಸನ್ನದ್ಧವಾಗಿರಲು ಸೂಚಿಸಿದ್ದಾರೆ. ಹಾಗೆಯೇ ಲಸಿಕೆ ಬಂದರೂ ಕೊರೊನಾ ವಿರುದ್ಧದ ಸಮರ ಮುಂದುವರಿಯಬೇಕು. ಈ ವಿಚಾರದಲ್ಲಿ ಹಿನ್ನಡೆಯಾಗಬಾರದೆಂದು ಪ್ರಧಾನಿ ಸೂಚಿಸಿದ್ದಾರೆ ಎಂದು ಗೃಹ ಸಚಿವರು ಹೇಳಿದರು.






ವ್ಯಾಕ್ಸಿನ್ ಸಾಗಿಸಲು ಸಜ್ಜಾಗಿರುವ ವ್ಯಾನ್, ಬೆಂಗಳೂರಿನ ದಾಸಪ್ಪ ಆಸ್ಪತ್ರೆಯಲ್ಲಿರುವ ಲಸಿಕೆ ಬಾಕ್ಸ್.

## ಲಸಿಕೆ ವಿತರಣೆಗೆ ಸಿದ್ಧತೆ: ಸಚಿವ ಸುಧಾಕರ್

ರಾಜ್ಯದಲ್ಲಿ ಕೋವಿಡ್ ಲಸಿಕೆ ವಿತರಣೆಗೆ ಸಿದ್ಧತೆ ಕೈಗೊಳ್ಳಲಾಗಿದೆ. 29,451 ಲಸಿಕೆ ವಿತರಣಾ ಕೇಂದ್ರ ಗುರುತಿಸಲಾಗಿದೆ ಎಂದು ಆರೋಗ್ಯ ಮತ್ತು ವೈದ್ಯ ಶಿಕ್ಷಣ ಸಚಿವ ಡಾ. ಕೆ. ಸುಧಾಕರ್ ತಿಳಿಸಿದ್ದಾರೆ.



''ಕೇಂದ್ರ ಸೂಚನೆಯಂತೆ ಲಸಿಕೆ ವಿತರಣೆಗೆ ತಯಾರಿ ಮಾಡಿಕೊಳ್ಳಲಾಗುತ್ತಿದೆ. ಈ ಸಂಬಂಧ ರಾಜ್ಯದ ಕೋವಿಡ್ ಕಾರ್ಯಪಡೆಯಿಂದ ಸಭೆ ನಡೆಸಿ ಚರ್ಚಿಸಲಾಗಿದೆ. ಲಸಿಕೆ ಸಂಗ್ರಹ, ವಿತರಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಲಸಿಕೆ ವಿತರಣೆಗೆ 10,008 ವ್ಯಾಕ್ಸಿನೇಟರ್ ಸಿಬ್ಬಂದಿ ಗುರುತಿಸಲಾಗಿದೆ. ಸರಕಾರಿ ಆರೋಗ್ಯ ಕೇಂದ್ರಗಳ ಸಿಬ್ಬಂದಿ, ಆರೋಗ್ಯ ಕಾರ್ಯಕರ್ತರ ಬಗೆಗಿನ ಮಾಹಿತಿ ದಾಖಲಿಸಲಾಗಿದೆ. ಶೇ.80ರಷ್ಟು ಖಾಸಗಿ ಆಸ್ಪತ್ರೆಗಳೂ ಮಾಹಿತಿ ಒದಗಿಸಿವೆ. ಉಳಿದ ಶೇ.20ರಷ್ಟು ಮಾಹಿತಿ ವಾರದೊಳಗೆ ಲಭ್ಯವಾಗಲಿದೆ,'' ಎಂದು ಹೇಳಿದ್ದಾರೆ.

''ಲಸಿಕೆ ಸಂಗ್ರಹ, ವಿತರಣೆಗೆ 2,855 ಕೋಲ್ಡ್ ಚೈನ್ ಕೇಂದ್ರ ಲಭ್ಯವಿದೆ. ಬೆಂಗಳೂರು, ಶಿವಮೊಗ್ಗ, ಬಳ್ಳಾರಿಯಲ್ಲಿ ಪ್ರಾದೇಶಿಕ ಲಸಿಕಾ ಸಂಗ್ರಹ ಕೇಂದ್ರ ಆರಂಭಿಸುವ ಪ್ರಸ್ತಾಪವಿದೆ. ಈ ಕೇಂದ್ರಗಳಲ್ಲಿ ವಾಕ್ ಇನ್ ಕೂಲರ್, ವಾಕ್ ಇನ್ ಫ್ರೀಜರ್ ವ್ಯವಸ್ಥೆ ಮಾಡುವ ಪ್ರಸ್ತಾಪವೂ ಇದೆ. ರಾಜ್ಯದಲ್ಲಿ ಸದ್ಯ 10 ವಾಕ್ ಇನ್ ಕೂಲರ್, 4 ವಾಕ್ ಇನ್ ಫ್ರೀಜರ್ ಇದೆ. ಕೇಂದ್ರ ಆರೋಗ್ಯ ಸಚಿವಾಲಯವು 3 ವಾಕ್ ಇನ್ ಕೂಲರ್, 2 ವಾಕ್ ಇನ್ ಫ್ರೀಜರ್ ನೀಡಲಿದೆ. ಇದಕ್ಕಾಗಿ ಸಿವಿಲ್ ಕಾಮಗಾರಿ ಆರಂಭವಾಗಿದೆ. ಕೋಲ್ಡ್ ಸ್ಟೋರೇಜ್ ಮತ್ತು ಸಂಗ್ರಹಕ್ಕೆ ಸಂಬಂಧಿಸಿದಂತೆ ಡೋಸ್ ಮತ್ತಿತರ ಮಾಹಿತಿ ಲಭ್ಯವಿದೆ. ಕೇಂದ್ರ ಸರಕಾರ ಈಗಾಗಲೇ ಡೀಪ್ ಫ್ರೀಜರ್ ಹಾಗೂ ರೆಫ್ರಿಜರೇಟರ್ ಮಂಜೂರು ಮಾಡಿದೆ. ಹೆಚ್ಚುವರಿ ಅಗತ್ಯ ಸಂಬಂಧ ಕೇಂದ್ರಕ್ಕೆ ಮಾಹಿತಿ ನೀಡಲಾಗಿದೆ. ಪಶು ಸಂಗೋಪನೆ ಇಲಾಖೆಯಲ್ಲಿ ಲಭ್ಯವಿರುವ ಕೋಲ್ಡ್ ಸ್ಟೋರೇಜ್ ಸೌಲಭ್ಯದ ಬಗ್ಗೆ ಮಾಹಿತಿ ಪಡೆಯಲಾಗಿದೆ. ಖಾಸಗಿ ಆಸ್ಪತ್ರೆಗಳ ಸ್ಟೋರೇಜ್ ಬಗ್ಗೆಯೂ ಮಾಹಿತಿ ತೆಗೆದುಕೊಳ್ಳಲಾಗಿದೆ,'' ಎಂದಿದ್ದಾರೆ.

ವಿಜಯವಾಣಿ
ಕನ್ನಡಿಗರ ಧ್ವನಿ

| Date | 25-11-2020 |
| --- | --- |
| Page No | 8 |


### 4 ವಿಭಾಗಗಳಲ್ಲಿ ಲಸಿಕೆ ವಿತರಣೆ | ರಾಜ್ಯಗಳ ಡೇಟಾ ಆಧರಿಸಿ ಫಲಾನುಭವಿಗಳ ಗುರುತಿಸುವಿಕೆ

# ಒಂದು ಕೋಟಿ ಮಂದಿಗೆ ಮೊದಲು ಲಸಿಕೆ

**ನವದೆಹಲಿ:** ದೇಶದಲ್ಲಿ ಕರೊನಾ ಲಸಿಕೆ ಲಭ್ಯವಾಗುತ್ತಲೇ ಮುಂಚೂಣಿಯಲ್ಲಿ ಸೇವೆ ನೀಡುತ್ತಿರುವ ಸುಮಾರು 1 ಕೋಟಿ ಆರೋಗ್ಯ ಕಾರ್ಯಕರ್ತರಿಗೆ ಮೊದಲು ವಿತರಿಸಲು ಕೇಂದ್ರ ಸರ್ಕಾರ ಯೋಜನೆ ಹಾಕಿಕೊಂಡಿದೆ. ಶೇಕಡ 92 ಸರ್ಕಾರಿ ಆಸ್ಪತ್ರೆಗಳು ಹಾಗೂ ಎಲ್ಲ ರಾಜ್ಯಗಳ ಶೇಕಡ 55 ಖಾಸಗಿ ಆಸ್ಪತ್ರೆಗಳಿಂದ ಸಂಗ್ರಹಿಸಲಾದ ಡೇಟಾದ ಮೂಲಕ ಮೊದಲು ಲಸಿಕೆ ವಿತರಿಸಬೇಕಾದ 1 ಕೋಟಿ ಮುಂಚೂಣಿ ಆರೋಗ್ಯ ಕಾರ್ಯಕರ್ತರನ್ನು ಕೇಂದ್ರ ಗುರುತಿಸಿದೆ.

ಲಸಿಕೆಯನ್ನು ಸದ್ಯ ಅಸ್ತಿತ್ವದಲ್ಲಿರುವ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದ (ಯುಐಪಿ) ತಂತ್ರಜ್ಞಾನ ಮತ್ತು ನೆಟ್‌ವರ್ಕ್ ಬಳಸಿ ವಿತರಿಸಲಾಗುತ್ತದೆ. ಕೇಂದ್ರಾಡಳಿತ ಪ್ರದೇಶಗಳು ಸೇರಿ ಎಲ್ಲ ರಾಜ್ಯಗಳು ನೀಡಿರುವ ಮಾಹಿತಿಯನ್ನು ಆಧರಿಸಿ ಒಟ್ಟು 30 ಕೋಟಿ ಆದ್ಯತೆಯ ಫಲಾನುಭವಿಗಳನ್ನು ಗುರುತಿಸುವ ಪ್ರಕ್ರಿಯೆಯನ್ನು ಕೇಂದ್ರ ಪ್ರಾರಂಭಿಸಿದೆ ಎಂದು ತಿಳಿದುಬಂದಿದೆ.

ಲಸಿಕೆ ವಿತರಣೆಗಾಗಿ ನಾಲ್ಕು ವಿಭಾಗಗಳನ್ನು ಮಾಡಿಕೊಳ್ಳಲಾಗಿದ್ದು, ಮೊದಲ ವಿಭಾಗದಲ್ಲಿ ವೈದ್ಯರು, ದಾದಿಯರು, ಆಶಾ ಕಾರ್ಯಕರ್ತರನ್ನು ಒಳಗೊಂಡ ಸುಮಾರು 1 ಕೋಟಿ ಆರೋಗ್ಯ ಕಾರ್ಯಕರ್ತರಿರುತ್ತಾರೆ. ಎರಡನೇ ವಿಭಾಗದಲ್ಲಿ ಪುರಸಭೆ, ಮಹಾನಗರ ಪಾಲಿಕೆಯ ಕಾರ್ಮಿಕರು, ಪೊಲೀಸರು, ಸಶಸ್ತ್ರ ಪಡೆಗಳ ಸಿಬ್ಬಂದಿ ಸೇರಿ ಮುಂಚೂಣಿಯ ಸುಮಾರು 2 ಕೋಟಿ ಮಂದಿಯನ್ನು ಗುರುತಿಸಲಾಗುತ್ತಿದೆ. ಮೂರನೇ ವಿಭಾಗದಲ್ಲಿ 50 ವರ್ಷಕ್ಕಿಂತ ಮೇಲ್ಪಟ್ಟ ಸುಮಾರು 26 ಕೋಟಿ ಮಂದಿಯಿದ್ದು, ನಾಲ್ಕನೇ ವಿಭಾಗದಲ್ಲಿ 50 ವರ್ಷಕ್ಕಿಂತ ಕಡಿಮೆ ವಯಸ್ಸಿನವರನ್ನು ಆಯ್ಕೆ ಮಾಡಲಾಗುತ್ತದೆ. ಲಸಿಕೆ ಪಡೆದ ಪ್ರತಿಯೊಬ್ಬ ಫಲಾನುಭವಿಯನ್ನು ಗುರುತಿಸುವ ಸಲುವಾಗಿ ಆಧಾರ್ ಕಾರ್ಡ್ ಜತೆಗೆ ಅವರು ಲಸಿಕೆ ಪಡೆದ ಮಾಹಿತಿಗಳನ್ನು ಲಿಂಕ್ ಮಾಡಲಾಗುತ್ತದೆ ಎಂದು ಹೇಳಲಾಗಿದೆ. ಆಧಾರ್ ಕಾರ್ಡ್ ಹೊಂದಿರದಿದ್ದವರು ಮತದಾರರ ಗುರುತಿನ ಚೀಟಿಯನ್ನೂ ಬಳಸಬಹುದಾಗಿದೆ. ದೇಶಾದ್ಯಂತ ಸದ್ಯ ಅಸ್ತಿತ್ವದಲ್ಲಿರುವ 28 ಸಾವಿರ ಸ್ಟೋರೇಜ್ ಪಾಯಿಂಟ್‌ಗಳಿಗೆ ಹೆಚ್ಚುವರಿಯಾಗಿ 1 ಸಾವಿರ ಕೋಲ್ಡ್ ಸ್ಟೋರೇಜ್‌ಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.

**ಸಿರಿಂಜ್ ಪೂರೈಕೆಗೆ ಸಿದ್ಧ:** ಕರೊನಾ ಲಸಿಕೆಯ ವ್ಯಾಕ್ಸಿನೇಷನ್ ಕಾರ್ಯಕ್ರಮಕ್ಕಾಗಿ ಅಗತ್ಯವಾದ ಬಳಸಿ ಬಿಸಾಡಬಹುದಾದ ಅಪಾರ ಪ್ರಮಾಣದ ಸಿರಿಂಜ್ ಮತ್ತು ಸೂಜಿಗಳನ್ನು ಪೂರೈಸಲು ತಾವು ಸಿದ್ಧರಿದ್ದೇವೆ ಎಂದು ಅಖಿಲ ಭಾರತ ಸಿರಿಂಜ್ ಮತ್ತು ಸೂಜಿ ತಯಾರಕರ ಸಂಘ (ಎಐಎಸ್‌ಎನ್‌ಎಂಎ) ಪ್ರಧಾನಿ ನರೇಂದ್ರ ಮೋದಿಗೆ ಬರೆದ ಪತ್ರದಲ್ಲಿ ತಿಳಿಸಿದೆ. ಹೆಚ್ಚುವರಿಯಾಗಿ ಪ್ರತಿ ತಿಂಗಳು 35 ಕೋಟಿ ಸಿರಿಂಜ್‌ಗಳನ್ನು ಉತ್ಪಾದಿಸುವಷ್ಟು ಸಾಮರ್ಥ್ಯ ಹೊಂದಲಾಗಿದೆ.

**ಪಾಸಿಟಿವಿಟಿ ದರ ಶೇ.4ಕ್ಕಿಂತ ಕಡಿಮೆ:** ದೇಶದಲ್ಲಿ ಪ್ರತಿದಿನದ ಕರೊನಾ ಪಾಸಿಟಿವಿಟಿ ದರ ಶೇಕಡ 4ಕ್ಕಿಂತ ಕಡಿಮೆಯಾಗಿದೆ. ಈವರೆಗೆ 13.36 ಕೋಟಿ ಪರೀಕ್ಷೆಗಳನ್ನು ನಡೆಸಲಾಗಿದ್ದು, ಕಳೆದ 24 ತಾಸಿನಲ್ಲಿ 10.99 ಲಕ್ಷ ಪರೀಕ್ಷೆಗಳನ್ನು ನಡೆಸಲಾಗಿದೆ. ದೇಶಾದ್ಯಂತ ಸದ್ಯ 2,134 ಲ್ಯಾಬ್‌ಗಳಲ್ಲಿ ಮಾದರಿಗಳನ್ನು ಪರೀಕ್ಷಿಸಲಾಗುತ್ತಿದೆ. ಕಳೆದ ನವೆಂಬರ್ 8ರಿಂದ ಪ್ರತಿದಿನ ವರದಿಯಾಗುವ ಹೊಸ ಪ್ರಕರಣಗಳ ಪ್ರಮಾಣ 50 ಸಾವಿರಕ್ಕಿಂತ ಕಡಿಮೆ ಇದ್ದು, ಸಾವಿನ ಪ್ರಮಾಣವೂ ಸರಾಸರಿ 500ಕ್ಕೆ ಇಳಿಕೆ ಕಂಡಿದೆ. ದೇಶದಲ್ಲಿ ಈವರೆಗೆ 91.94 ಲಕ್ಷ ಪ್ರಕರಣಗಳು ವರದಿಯಾಗಿದ್ದು, 1.34 ಲಕ್ಷ ಮಂದಿ ಸೋಂಕಿಗೆ ಬಲಿಯಾಗಿದ್ದಾರೆ. 86.18 ಲಕ್ಷ ಸೋಂಕಿತರು ಗುಣಮುಖರಾಗಿದ್ದು, ಇನ್ನೂ 4.39 ಲಕ್ಷ ಸಕ್ರಿಯ ಪ್ರಕರಣಗಳಿವೆ.

### ಆರ್‌ಟಿ-ಪಿಸಿಆರ್ ಪರೀಕ್ಷೆಗೆ ಗರಿಷ್ಠ ದರ

**ಭಾರತದಾದ್ಯಂತ ಆರ್‌ಟಿ-ಪಿಸಿಆರ್ ಪರೀಕ್ಷೆಗೆ ಗರಿಷ್ಠ ದರ ನಿಗದಿಪಡಿಸುವಂತೆ ಕೋರಿ ಸಲ್ಲಿಕೆಯಾಗಿದ್ದ ಅರ್ಜಿ ಸಂಬಂಧ ಪ್ರತಿಕ್ರಿಯೆ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಸುಪ್ರೀಂಕೋರ್ಟ್ ಸೂಚನೆ ನೀಡಿದೆ. ಆರ್‌ಟಿ-ಪಿಸಿಆರ್ ಪರೀಕ್ಷೆಗೆ ದೇಶಾದ್ಯಂತ ₹ 400 ಗರಿಷ್ಠ ದರ ನಿಗದಿಪಡಿಸುವಂತೆ ಅರ್ಜಿಯಲ್ಲಿ ಕೋರಲಾಗಿದೆ. ಸದ್ಯ ವಿವಿಧ ರಾಜ್ಯಗಳಲ್ಲಿ ಈ ಪರೀಕ್ಷೆಗೆ ₹ 900ರಿಂದ 2,800ವರೆಗೆ ದರವಿದೆ.**



ನೊಯ್ಡಾದಲ್ಲಿ ಗಂಟಲು ದ್ರವ್ಯದ ಮಾದರಿ ಪಡೆಯುತ್ತಿರುವ ಆರೋಗ್ಯ ಸಿಬ್ಬಂದಿ.

### ಲಸಿಕೆಯಿಂದ 9-12 ತಿಂಗಳು ರಕ್ಷಣೆ

ಕರೊನಾ ಲಸಿಕೆ ಜನರಿಗೆ ವೈರಸ್‌ನಿಂದ 9 ತಿಂಗಳಿಂದ ಒಂದು ವರ್ಷದವರೆಗೆ ರಕ್ಷಣೆ ನೀಡಬಲ್ಲದು ಎಂದು ದೆಹಲಿಯ ಏಮ್ಸ್ ಮುಖ್ಯಸ್ಥ ಡಾ.ರಣದೀಪ್ ಗುಲೇರಿಯಾ ಹೇಳಿದ್ದಾರೆ. ಜತೆಗೆ ಸೋಂಕು ಪಸರಿಸುವಿಕೆಯ ಸರಪಳಿಯನ್ನು ತುಂಡರಿಸಲು ಸಹಾಯ ಮಾಡುತ್ತದೆ. ಲಸಿಕೆ ಬಂದ ತಕ್ಷಣ ಕರೊನಾ ಸಂಪೂರ್ಣವಾಗಿ ನಾಶವಾಗುವುದಿಲ್ಲ. ನಂತರದ ದಿನಗಳಲ್ಲಿ ಇದು ಸೌಮ್ಯ ಗುಣಲಕ್ಷಣಗಳ ಕಾಯಿಲೆಯಾಗಬಹುದು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. 2023ರಲ್ಲಿ ಸೋಂಕು ನಿವಾರಣೆಯಾಗಬಹುದು ಎಂದು ಡಬ್ಲ್ಯುಎಚ್‌ಒ ಘೋಷಿಸುವ ಸಾಧ್ಯತೆ ಇದೆ ಎಂದಿದ್ದಾರೆ.

## ಟೂರಿಂಗ್ ಪ್ಯಾಕೇಜ್ ಆಫರ್!

ಕರೊನಾ ವೈರಸ್‌ನ ಭೀತಿಯಿಂದಾಗಿ ಜನರು ತಾವು ಯಾವಾಗ ಲಸಿಕೆ ಪಡೆಯುತ್ತೇವೋ ಎಂಬ ಕಾತರದಲ್ಲಿದ್ದಾರೆ. ಇದನ್ನೇ ಸದುಪಯೋಗಪಡಿಸಿಕೊಳ್ಳುತ್ತಿರುವ ಕೆಲ ಟ್ರಾವೆಲ್ ಸಂಸ್ಥೆಗಳು ತಮ್ಮಲ್ಲಿ ಟೂರಿಂಗ್ ಪ್ಯಾಕೇಜ್ ಪಡೆದರೆ ಲಸಿಕೆಯನ್ನು ಉಚಿತವಾಗಿ ನೀಡುತ್ತೇವೆ ಎಂದು ಆಮಿಷವೊಡ್ಡುತ್ತಿವೆ. ಈ ರೀತಿ ಮುಂಬೈನ ಟ್ರಾವೆಲ್ ಸಂಸ್ಥೆಯೊಂದು ನೀಡಿರುವ ಆಫರ್ ಜಾಲತಾಣಗಳಲ್ಲಿ ವೈರಲ್ ಆಗಿದೆ.




ಮುಂಬೈನಿಂದ ನ್ಯೂಯಾರ್ಕ್‌ಗೆ ಕರೆದೊಯ್ದು 4 ದಿನಗಳ ಬಳಿಕ ವಾಪಸ್ ಮುಂಬೈಗೆ ಕರೆತರುವ ಪ್ರವಾಸದ ಪ್ಯಾಕೇಜ್ ಪಡೆದ ಮೊದಲ ಕೆಲ ಅದೃಷ್ಟವಂತರಿಗೆ ಫೈಜರ್ ಲಸಿಕೆಯನ್ನು ಉಚಿತವಾಗಿ ನೀಡಲಾಗುತ್ತದೆ ಎಂದು ತಿಳಿಸಲಾಗಿದೆ. ವಿಮಾನ ಟಿಕೆಟ್ ದರ, ಹೋಟೆಲ್ ಬಿಲ್ ಎಲ್ಲ ಸೇರಿ ಆ ಪ್ಯಾಕೇಜ್‌ನ ಒಟ್ಟು ಮೊತ್ತ ₹ 1,74,999 ಎಂದು ಹೇಳಿದೆ.

## ಪ್ರಧಾನಿ ಮೋದಿ ಸಭೆಯಲ್ಲಿ ಮುಖ್ಯಮಂತ್ರಿಗಳ ಅಹವಾಲು

■ ಕರೊನಾ ವ್ಯಾಕ್ಸಿನೇಷನ್ ಕಾರ್ಯಕ್ರಮಕ್ಕಾಗಿ ಪಶ್ಚಿಮ ಬಂಗಾಳದಲ್ಲಿ ತರಬೇತಿ ಪಡೆದ ಮಾನವ ಸಂಪನ್ಮೂಲ ಮತ್ತು ಅಗತ್ಯ ಮೂಲಸೌಕರ್ಯಗಳನ್ನು ಸಿದ್ಧಪಡಿಸಿಕೊಳ್ಳಲಾಗಿದೆ ಸಿಎಂ ಮಮತಾ ಬ್ಯಾನರ್ಜಿ ಹೇಳಿದರು. ಜತೆಗೆ ರಾಜಕೀಯಕ್ಕೆ ಸಂಬಂಧಿಸಿದ ರ‍್ಯಾಲಿಗಳನ್ನು ಕಡಿಮೆಗೊಳಿಸಬೇಕು. ತಮಗೆ ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ಪರಿಹಾರದ ಬಾಕಿ ಮೊತ್ತ ನೀಡಬೇಕು ಎಂದು ಬ್ಯಾನರ್ಜಿ ಕೇಳಿದರು.

■ ಛತ್ತೀಸಗಢದಲ್ಲಿ ದಿನಕ್ಕೆ 23 ಸಾವಿರಕ್ಕಿಂತ ಅಧಿಕ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಭೂಪೇಶ್ ಬಾಗೇಲ್ ಹೇಳಿದರು. ಅಕ್ಟೋಬರ್ ನಂತರ ಹೊಸ ಪ್ರಕರಣಗಳಲ್ಲಿ ಶೇಕಡ 50 ಕುಸಿತ ದಾಖಲಿಸಿದೆ. ಆದರೆ ಗ್ರಾಮೀಣ ಪ್ರದೇಶಗಳಲ್ಲಿ ಈಗ ಸೋಂಕು ಹೆಚ್ಚಾಗಿದೆ ಎಂದರು.

■ ಲಸಿಕೆಯನ್ನು ಮೊದಲ ಹಂತದಲ್ಲಿ ಆರೋಗ್ಯ ಕಾರ್ಯಕರ್ತರಿಗೆ ಮತ್ತು ಹೆಚ್ಚು ಅಗತ್ಯವಿರುವವರಿಗೆ ನೀಡಬೇಕು. ನಂತರ ಮುಂಚೂಣಿ ಕಾರ್ಯಕರ್ತರಿಗೆ ಹಾಗೂ ಬಳಿಕ ವಯಸ್ಸಿನ ಅನುಗುಣವಾಗಿ ಇನ್ನು ಎರಡು ವಿಭಾಗದಲ್ಲಿ ಲಸಿಕೆ ವಿತರಿಸಬೇಕು ಎಂದು ಹರಿಯಾಣ ಸಿಎಂ ಮನೋಹರ್ ಲಾಲ್ ಖಟ್ಟರ್ ಹೇಳಿದರು.

■ ದೆಹಲಿಯಲ್ಲಿನ ಮಾಲಿನ್ಯ ಸೇರಿದಂತೆ ಹಲವು ಗಮನಾರ್ಹ ಕಾರಣಗಳಿಂದಾಗಿ ಕರೊನಾ 3ನೇ ಅಲೆಯು ತೀವ್ರ ಪ್ರಮಾಣದಲ್ಲಿದೆ ಎಂದು ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಹೇಳಿದರು. ನೆರೆಯ ರಾಜ್ಯಗಳಲ್ಲಿ ಕೃಷಿ ತ್ಯಾಜ್ಯಕ್ಕೆ ಬೆಂಕಿ ಹಚ್ಚುತ್ತಿರುವುದು ಮಾಲಿನ್ಯ ಹೆಚ್ಚಳಕ್ಕೆ ಕಾರಣವಾಗಿದೆ ಎಂದು ತಿಳಿಸಿದರು.

■ ರಾಜ್ಯದಲ್ಲಿ ನಡೆಯುತ್ತಿರುವ ಎಲ್ಲ ಕೋವಿಡ್ ಪರೀಕ್ಷೆಗಳು ಆರ್‌ಟಿ-ಪಿಸಿಆರ್ ಆಗಿದ್ದು, ಈ ಸಂಖ್ಯೆ ಪ್ರತಿದಿನ 30,000ಕ್ಕಿಂತ ಹೆಚ್ಚಿದೆ. ಪಟಾಕಿಗಳ ನಿಷೇಧ, ರಾತ್ರಿ ಕರ್ಫ್ಯೂ ಜಾರಿ ಮಾಡಲಾಗಿದೆ ಎಂದು ರಾಜಸ್ಥಾನದ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ತಿಳಿಸಿದರು.

■ ಕರೊನಾ ಸೋಂಕನ್ನು ರಾಜ್ಯ ಸೋಲಿಸಲಿದೆ ಎಂದು ಮೇಘಾಲಯ ಸಿಎಂ ಕಾನ್ರಾಡ್ ಕೆ ಸಂಗ್ಮಾ ವಿಶ್ವಾಸ ವ್ಯಕ್ತಪಡಿಸಿದರು. ಲಸಿಕೆಯ ಮೊದಲ ಡೋಸ್‌ಗಳನ್ನು ಪಡೆಯುವ 25 ಸಾವಿರ ಆರೋಗ್ಯ ಕಾರ್ಯಕರ್ತರನ್ನು ಗುರುತಿಸಲಾಗಿದೆ. ಸದ್ಯ ಎಲ್ಲ ಜಿಲ್ಲೆಗಳು ಹಾಗೂ ಸಾರ್ವಜನಿಕ ಆರೋಗ್ಯ ಕೇಂದ್ರಗಳಲ್ಲಿ ಲಸಿಕೆಗಳನ್ನು ಶೇಖರಿಸಿಡಲು ಕೋಲ್ಡ್ ಸ್ಟೋರೇಜ್‌ಗಳನ್ನು ನಿರ್ಮಿಸುವ ಅಗತ್ಯವಿದೆ ಎಂದರು.



■ ಕರೊನಾದ 2ನೇ ಅಲೆ ಭೀತಿ ನಡುವೆಯೇ ಕೆಲ ರಾಜಕೀಯ ಪಕ್ಷಗಳು ಹಮ್ಮಿಕೊಳ್ಳುತ್ತಿರುವ ಕಾರ್ಯಕ್ರಮಗಳು ಸೋಂಕು ಪಸರಿಸುವ ಭೀತಿ ಹೆಚ್ಚಿಸಿದೆ. ಪ್ರಧಾನಿ ಅಥವಾ ಗೃಹ ಸಚಿವರು ಎಲ್ಲ ಪಕ್ಷಗಳ ಸಭೆ ಕರೆದು ಪರಿಸ್ಥಿತಿಯ ಗಂಭೀರತೆ ಬಗ್ಗೆ ತಿಳಿಸಬೇಕು ಎಂದು ಮಹಾರಾಷ್ಟ್ರದ ಸಿಎಂ ಉದ್ಧವ್ ಠಾಕ್ರೆ ಹೇಳಿದರು.

ವಿಜಯವಾಣಿ
ಕನ್ನಡಿಗರ ಧ್ವನಿ

| Date | 25-11-2020 |
| --- | --- |
| Page No | 6 |

# 23 ಲಕ್ಷ ಕೋವಿಡ್ ಲಸಿಕೆ ಸಂಗ್ರಹಕ್ಕೆ ವ್ಯವಸ್ಥೆ

» **ಲಸಿಕೆ ಹಾಕಲು ಸಿಬ್ಬಂದಿ ಗುರುತಿಸಿದ ಪಾಲಿಕೆ**

**ಬೆಂಗಳೂರು:** ರಾಜಧಾನಿಯಲ್ಲಿ ಒಂದು ಬಾರಿಗೆ 23 ಲಕ್ಷ ಕೋವಿಡ್ ವ್ಯಾಕ್ಸಿನ್ ಸಂಗ್ರಹಣೆ ಮಾಡಲು ವ್ಯವಸ್ಥೆಯಿದೆ. ಮೊದಲ ಹಂತದಲ್ಲಿ 95 ಸಾವಿರ ಕರೊನಾ ವಾರಿಯರ್ಸ್‌ಗೆ ಲಸಿಕೆ ನೀಡಲು ಪಟ್ಟಿ ನೀಡಲಾಗುತ್ತಿದ್ದು, ಹೆಚ್ಚುವರಿ ಲಸಿಕೆ ಬಂದರೂ ಸಂಗ್ರಹಣೆ ತೊಂದರೆ ಉಂಟಾಗುವುದಿಲ್ಲ ಎಂದು ಬಿಬಿಎಂಪಿ ಆಯುಕ್ತ ಮಂಜುನಾಥ ಪ್ರಸಾದ್ ತಿಳಿಸಿದ್ದಾರೆ.

ದಾಸಪ್ಪ ಆಸ್ಪತ್ರೆಯಲ್ಲಿ ತಲಾ 50 ಸಾವಿರ ವ್ಯಾಕ್ಸಿನ್ ಸಂಗ್ರಹಿಸುವ ಸಾಮರ್ಥ್ಯವಿರುವ 4, ತಲಾ 30 ಸಾವಿರ ಲಸಿಕೆ ಸಂಗ್ರಹಣೆ 3 ಹಾಗೂ ಇತರೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 40 ಐಸ್‌ಲೆಂಡ್ ರೆಫ್ರಿಜಿರೇಟರ್‌ಗಳು ಲಭ್ಯ ಇವೆ. ಏಕ ಕಾಲಕ್ಕೆ 23 ಲಕ್ಷ ವ್ಯಾಕ್ಸಿನ್ ಸಂಗ್ರಹ ಮಾಡಬಹುದು ಎಂದು ಮಾಹಿತಿ ನೀಡಿದ್ದಾರೆ. ಲಸಿಕೆ ಹಾಕುವುದಕ್ಕೆ 500 ಬಿಬಿಎಂಪಿ ಸ್ಟಾಫ್ ನರ್ಸ್‌ಗಳು ಹಾಗೂ 1 ಸಾವಿರ ಪಲ್ಸ್ ಪೋಲಿಯೋ ಅಭಿಯಾನದ ಆರೋಗ್ಯ ಸಿಬ್ಬಂದಿಗಳಿದ್ದಾರೆ. 2017ರಲ್ಲಿ ಈ ಸಿಬ್ಬಂದಿಗಳಿಂದ ದಢಾರ ರೋಗಕ್ಕೆ ನಗರದ 23 ಲಕ್ಷ ಮಂದಿಗೆ ಲಸಿಕೆ ನೀಡಲಾಗಿತ್ತು ಎಂದು ಮಾಹಿತಿ ನಿಡಿದರು.

## 1,267 ಮಂದಿ ಗುಣಮುಖ

» **ಮಂಗಳವಾರ 927 ಪ್ರಕರಣ, 12 ಬಲಿ**

**ಬೆಂಗಳೂರು:** ನಗರದಲ್ಲಿ ಮಂಗಳವಾರ 1,267 ಮಂದಿ ಕರೊನಾ ಸೋಂಕಿನಿಂದ ಮುಕ್ತರಾಗಿದ್ದು, ಈವರೆಗೆ 3,43,169 ಮಂದಿ ಗುಣಮುಖರಾಗಿದ್ದಾರೆ. 927 ಹೊಸ ಪ್ರಕರಣ ಪತ್ತೆಯಾಗಿದ್ದು, ಒಟ್ಟು ಕೊರೊನಾ ಸೋಂಕಿತರ ಸಂಖ್ಯೆ 3,65,317 ಏರಿಕೆಯಾಗಿದೆ. ಕೋವಿಡ್‌ಗೆ 12 ಮಂದಿ ಬಲಿಯಾಗುವ ಮೂಲಕ ಅಸುನೀಗಿದವರ ಒಟ್ಟು ಸಂಖ್ಯೆ 4,090 ತಲುಪಿದೆ. ಆಸ್ಪತ್ರೆ,

ಆರೈಕೆ ಕೇಂದ್ರ ಮತ್ತು ಮನೆ ನಿಗಾದಲ್ಲಿ 18,057 ಸಕ್ರಿಯ ಸೋಂಕಿತರಿದ್ದು, ಅದರಲ್ಲಿ 206 ಮಂದಿ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕಾಲೇಜುಗಳಲ್ಲಿ ಕೋವಿಡ್ ಪರೀಕ್ಷೆ ಮುಂದುವರೆದಿದ್ದು, ಮಂಗಳವಾರ 27 ವಿದ್ಯಾರ್ಥಿಗಳು ಹಾಗೂ 8 ಕಾಲೇಜು ಸಿಬ್ಬಂದಿ ಸೇರಿ 35 ಜನರಲ್ಲಿ ಸೋಂಕು ದೃಢಪಟ್ಟಿದೆ.

ವಿಜಯವಾಣಿ
ಕನ್ನಡಿಗರ ಧ್ವನಿ

| Date | 25-11-2020 |
| --- | --- |
| Page No | 3.4 |

# ಘನತ್ಯಾಜ್ಯ ನಿರ್ವಹಣಾ ಮಂಡಳಿ ಸ್ಥಾಪನೆ

**ಬೆಂಗಳೂರು:** ನಗರದಲ್ಲಿ ಘನತ್ಯಾಜ್ಯ ನಿರ್ವಹಣಾ ಮಂಡಳಿ ಸ್ಥಾಪನೆ ಕುರಿತು ತ್ಯಾಜ್ಯ ಉತ್ಪಾದನೆ, ವೆಚ್ಚ, ಆದಾಯ ಸೇರಿ ವಿವರವಾದ ಪ್ರಸ್ತಾವನಾ ವರದಿ ಸಿದ್ಧಪಡಿಸಲಾಗುತ್ತಿದ್ದು, ವಾರದೊಳಗೆ ಸರ್ಕಾರಕ್ಕೆ ಸಲ್ಲಿಸಲಾಗು ವುದು ಎಂದು ಬಿಬಿಎಂಪಿ ಆಯುಕ್ತ ಮಂಜುನಾಥ ಪ್ರಸಾದ್ ತಿಳಿಸಿದ್ದಾರೆ.

**» ವಾರದೊಳಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಕೆ**

ಸುದ್ದಿಗಾರರೊಂದಿಗೆ ಮಾತನಾಡಿ, ನಗರದಲ್ಲಿ ತ್ಯಾಜ್ಯ ಉತ್ಪಾದನೆ ಪ್ರಮಾಣ ಹೆಚ್ಚಾಗುತ್ತಿದ್ದು, ಸಮರ್ಪಕ ನಿರ್ವಹಣೆಗೆ ಪ್ರತ್ಯೇಕ ಘನತ್ಯಾಜ್ಯ ನಿರ್ವಹಣಾ ಮಂಡಳಿ ಅಗತ್ಯವಿದೆ. ಹೀಗಾಗಿ, ಉತ್ಪಾದನೆ ಅಗುತ್ತಿರುವ ತ್ಯಾಜ್ಯದ ಪ್ರಮಾಣ, ನಿರ್ವಹಣೆಗೆ ಮಾಡುತ್ತಿರುವ ವೆಚ್ಚ, ಪಾಲಿಕೆಗೆ ಬರುತ್ತಿರುವ ಆದಾಯ ಹಾಗೂ ಸಂಸ್ಕರಣಾ ಘಟಕಗಳು ನಿರ್ವಹಣೆ ಸೇರಿ ವಿವರವಾದ ಪ್ರಸ್ತಾವನೆ ಸಿದ್ಧಪಡಿಸಲಾಗುತ್ತಿದೆ. ಈ ಪ್ರಸ್ತಾವನಾ ವರದಿಗೆ ಆಡಳಿತಾಧಿಕಾರಿ ಒಪ್ಪಿಗೆ ಪಡೆದು ಸರ್ಕಾರಕ್ಕೆ ಸಲ್ಲಿಕೆ ಮಾಡಲಾಗುವುದು ಎಂದು ಮಾಹಿತಿ ನೀಡಿದರು.

# ಕರ್ನಾಟಕದಲ್ಲಿ 3 ಸಮಿತಿ

**ಮೊದಲನೇ ಪುಟದಿಂದ...**

ಸಭೆಯಲ್ಲಿ ಭಾಗವಹಿಸಿದ್ದ ನೀತಿ ಆಯೋಗದ ಸದಸ್ಯ ಡಾ.ವಿ.ಕೆ.ಪೌಲ್ ಮಾತನಾಡಿ ಯಾವ್ಯಾವ ದೇಶಗಳಲ್ಲಿ ಲಸಿಕೆ ತಯಾರಿ ಸ್ಥಿತಿ ಯಾವ ಹಂತ ದಲ್ಲಿದೆ ಎಂಬುದರ ಬಗ್ಗೆ ಮಾಹಿತಿ ನೀಡಿದರು. ಜಗತ್ತಿನ ಬೇರೆ ಬೇರೆ ಕಡೆಗಳಲ್ಲಿ ಲಸಿಕೆ ತಯಾರಿಕೆ ವಿವಿಧ ಹಂತಗಳಲ್ಲಿವೆ. 50 ಕ್ಲಿನಿಕಲ್ ರೀಸರ್ಚ್‌ನಲ್ಲಿದ್ದು, 25 ಮುಂದುವರಿದ ಟ್ರಯಲ್‌ನಲ್ಲಿವೆ. ಭಾರತದಲ್ಲೇ 5 ಲಸಿಕೆಗಳ ಕ್ಲಿನಿಕಲ್ ಟ್ರಯಲ್ ನಡೆದಿವೆ. ದೇಶದಲ್ಲಿ 24 ಕಂಪನಿಗಳು ಲಸಿಕೆಗಳನ್ನು ತಯಾರಿಸುವ ಸಾಮರ್ಥ್ಯವನ್ನು ಹೊಂದಿವೆ ಎಂಬ ವಿವರಿಸಿದರು. ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಕಂದಾಯ ಸಚಿವ ಆರ್. ಅಶೋಕ್, ಸಮಾಜ ಕಲ್ಯಾಣ ಸಚಿವ ಶ್ರೀರಾಮುಲು, ಮುಖ್ಯಕಾರ್ಯದರ್ಶಿ ವಿಜಯ ಭಾಸ್ಕರ್ ಸೇರಿ ಹಿರಿಯ ಅಧಿಕಾರಿಗಳು ವಿಡಿಯೋ ಸಂವಾದದಲಿದ್ದರು.

ವಿಜಯವಾಣಿ
ಕನ್ನಡಿಗರ ಧ್ವನಿ

| Date | 25-11-2020 |
| --- | --- |
| Page No | 1 |

## ಚುನಾವಣೆ ರೀತಿ ಕೆಲಸ ಮಾಡೋಣ | ಕರೊನಾವನ್ನು ಗೆಲ್ಲೋಣ

## ಸೋಂಕು ಹೆಚ್ಚಿರುವ ಕರ್ನಾಟಕ ಸೇರಿ 8 ರಾಜ್ಯಗಳಿಗೆ ಪ್ರಧಾನಿ ಕರೆ

# ಪ್ರತಿ ಪ್ರಜೆಗೂ ಲಸಿಕೆ ನಿಶ್ಚಿತ

**ನವದೆಹಲಿ:** ವಿಶ್ವಾದ್ಯಂತ ಮರಣಮೃದಂಗ ಬಾರಿಸುತ್ತಿರುವ ಕರೊನಾ ಮಹಾಮಾರಿಯನ್ನು ಭಾರತ ಮಟ್ಟ ಹಾಕುವುದು ನಿಶ್ಚಿತ ಎಂದಿರುವ ಪ್ರಧಾನಿ ನರೇಂದ್ರ ಮೋದಿ, ದೇಶದ ಪ್ರತಿ ಪ್ರಜೆಗೂ ಲಸಿಕೆ ವಿತರಿಸುವ ಗುರಿ ಈಡೇರಲು ಎಲ್ಲ ರಾಜ್ಯಗಳು ಚುನಾವಣೆ ರೀತಿ ಸಜ್ಜಾಗಬೇಕೆಂದು ಕರೆ ನೀಡಿದ್ದಾರೆ.

ಕರೊನಾದಿಂದ ಅತಿ ಹೆಚ್ಚು ಬಾಧಿತವಾಗಿರುವ ಪ್ರಮುಖ 8 ರಾಜ್ಯಗಳ ಮುಖ್ಯಮಂತ್ರಿಗಳ ಜತೆ ಮಂಗಳವಾರ ವಿಡಿಯೋ ಸಂವಾದ ನಡೆಸಿದ ಮೋದಿ ಪಾಸಿಟಿವ್ ಪ್ರಮಾಣವನ್ನು ಶೇ.5ಕ್ಕಿಂತ ಕೆಳಗಿಳಿಸಿದರಷ್ಟೇ ಕರೊನಾ ವಿರುದ್ಧ ಗೆಲುವು ಸಾಧ್ಯ ಎಂದರು.

- » ಪಾಸಿಟಿವ್ ಪ್ರಮಾಣ ಶೇ.5ಕ್ಕಿಂತ ಕೆಳಗಿಳಿಸಲು ಸೂಚನೆ
- » ಶೀಘ್ರದಲ್ಲೇ ಜಿಲ್ಲಾ ಮಟ್ಟದಲ್ಲಿ ಟಾಸ್ಕ್ ಫೋರ್ಸ್ ರಚನೆ

ದೇಶದ ಪ್ರತಿಯೊಬ್ಬರಿಗೂ ಲಸಿಕೆ ವಿತರಿಸುವುದು ಸರ್ಕಾರದ ಆದ್ಯತೆಯಾಗಿದೆ. ಈ ಅಭಿಯಾನವು ಬೃಹತ್ ಹಾಗೂ ದೀರ್ಘಕಾಲದ್ದಾಗಿರುತ್ತದೆ. ಈ ಕಾರ್ಯಕ್ಕೆ ಎಲ್ಲ ರಾಜ್ಯಗಳು ಸಜ್ಜಾದರೆ ನಾವೆಲ್ಲ ಒಂದು ತಂಡವಾಗಿ ಕೆಲಸ ಮಾಡಬಹುದೆಂದು ಮೋದಿ ಕರೆ ನೀಡಿದರು. ಇದಕ್ಕೂ ಮೊದಲು ಆಯಾ ರಾಜ್ಯಗಳ ಪ್ರತಿನಿಧಿಗಳಿಂದ ಕರೊನಾ ಸ್ಥಿತಿಗತಿಯ ಮಾಹಿತಿ ಪಡೆದ ಅವರು, ಸೋಂಕು ಪಸರಿಸುವಿಕೆ ತಡೆಯುವುದು, ಲಸಿಕೆ ವಿತರಣೆ ಸೇರಿ ಹಲವು ಪ್ರಮುಖ ವಿಷಯಗಳ ಕುರಿತು ಚರ್ಚಿಸಿದರು.

**9ನೇ ಸಂವಾದ:** ಕರೊನಾ ಬಿಕ್ಕಟ್ಟಿನ ಕುರಿತು ಕಳೆದ ಮಾ.20ರಿಂದ ಇಂದಿನವರೆಗೆ ಮುಖ್ಯಮಂತ್ರಿಗಳ ಜತೆಗೆ ಪ್ರಧಾನಿ 9 ಬಾರಿ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಷಾ, ಆರೋಗ್ಯ ಸಚಿವ ಡಾ. ಹರ್ಷವರ್ಧನ್, ಮಹಾರಾಷ್ಟ್ರ, ಕೇರಳ, ದೆಹಲಿ, ಪಶ್ಚಿಮ ಬಂಗಾಳ, ಕರ್ನಾಟಕ, ಉತ್ತರಪ್ರದೇಶ, ರಾಜಸ್ಥಾನ ಮತ್ತು ಛತ್ತೀಸಗಢದ ಮುಖ್ಯಮಂತ್ರಿಗಳು ಹಾಗೂ ಪತಿನಿಧಿಗಳು ಸಭೆಯಲ್ಲಿ ಭಾಗಿಯಾಗಿದ್ದರು.

ಪುಟ 4



ಪ್ರಧಾನಿ ಜತೆಗಿನ ಸಂವಾದದಲ್ಲಿ ಸಿಎಂ ಯಡಿಯೂರಪ್ಪ, ಸಚಿವ ಆರ್.ಅಶೋಕ್

### ಮೊದಲ ಹಂತ

ಒಂದು ಕೋಟಿ ಆರೋಗ್ಯ ಕಾರ್ಯಕರ್ತರು, 2 ಕೋಟಿ ಕರೊನಾ ವಾರಿಯರ್ಸ್ ಮತ್ತು 50 ವರ್ಷದ ದಾಟಿದ 26 ಕೋಟಿ ಜನರಿಗೆ ಮೊದಲ ಹಂತದಲ್ಲಿ ಲಸಿಕೆ ವಿತರಣೆ.

## ರಾಜ್ಯಗಳಿಗೆ ಮೋದಿ ಸಲಹೆ, ಸೂಚನೆ



ಸೋಂಕಿತರಿಗೆ ಆಮ್ಲಜನಕ, ವೆಂಟಿಲೇಟರ್ ಸಕಾಲಕ್ಕೆ ದೊರೆಯುವಂತೆ ಮಾಡಲು ಹೆಚ್ಚು ಗಮನ ವಹಿಸಲಾಗಿದೆ. ಇದಕ್ಕಾಗಿ ಪಿಎಂ-ಕೇರ್ಸ್ ನಿಧಿಯಲ್ಲಿ ಹೆಚ್ಚಿನ ಒತ್ತು ನೀಡಲಾಗಿದೆ. ಆಮ್ಲಜನಕ ವಿಚಾರದಲ್ಲಿ ಮೆಡಿಕಲ್ ಕಾಲೇಜು ಮತ್ತು ಜಿಲ್ಲಾಸ್ಪತ್ರೆಗಳು ಸ್ವಾವಲಂಬಿಯನ್ನಾಗಿಸಲು ಪ್ರಯತ್ನಿಸುತ್ತಿದ್ದೇವೆ. ದೇಶದಲ್ಲಿ 160 ಆಕ್ಸಿಜನ್ ಜನರೇಷನ್ ಪ್ಲಾಂಟ್ ಸ್ಥಾಪಿಸುವ ಪ್ರಯತ್ನ ನಡೆಯುತ್ತಿದೆ ಎಂದು ಮೋದಿ ತಿಳಿಸಿದರು.

- ಚುನಾವಣೆ ಬೂತ್ ಮಾದರಿ ಲಸಿಕೆ ಕೇಂದ್ರ ರಚನೆ
- ಲಸಿಕೆ ಸಂಗ್ರಹಕ್ಕೆ ಅಗತ್ಯವಾದ ಮೂಲ ಸೌಕರ್ಯ ಸಿದ್ಧಪಡಿಸಿಕೊಳ್ಳುವುದು
- ಆರೋಗ್ಯ ಕಾರ್ಯಕರ್ತರು, ಹಿರಿಯರಿಗೆ ಮೊದಲ ಆದ್ಯತೆ
- ಲಸಿಕೆ ಕೊಟ್ಟ ಬಳಿಕ ಟ್ರ್ಯಾಕ್ ರಿಪೋರ್ಟ್ ಸಂಗ್ರಹ
- ಲಸಿಕೆ, ಕರೊನಾ ತಡೆಗೆ ಯಾವುದೇ ಸಲಹೆ ಸೂಚನೆ ಇದ್ದರೆ ರಾಜ್ಯಗಳು ಹಂಚಿಕೊಳ್ಳಬಹುದು.

ಉದಯವಾಣಿ
ಜನಮನದ ಜೀವನಾಡಿ

| Date | 25-11-2020 |
|---|---|
| Page No | 1 |

ಹೊಸ ದಿಗಂತ

1
25 Nov 2020

## ಶೈತ್ಯಾಗಾರ ಸೌಲಭ್ಯ ಸಿದ್ಧವಾಗಿರಲಿ | ರಾಜ್ಯಗಳಿಗೆ ಪ್ರಧಾನಿ ಮೋದಿ ಸೂಚನೆ

# ಲಸಿಕೆ ವಿತರಣೆಗೆ ಸಿದ್ಧರಾಗಿ

**ಹೊಸದಿಲ್ಲಿ:** 2-3 ತಿಂಗಳಲ್ಲಿ ಕೊರೋನಾಗೆ ಲಸಿಕೆ ಸಿದ್ಧ ಎಂದು ಹಲವು ಸಂಸ್ಥೆಗಳು ಘೋಷಿಸಿದ ಬೆನ್ನಲ್ಲೇ ದೇಶದ ಜನರಿಗೆ ಲಸಿಕೆ ವಿತರಿಸಲು ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ತೀರ್ಮಾನಿಸಿದೆ. ಆಯಾ ರಾಜ್ಯಗಳು ಲಸಿಕೆ ಸಂಗ್ರಹಕ್ಕೆ ಶೈತ್ಯಾಗಾರ ಸೌಲಭ್ಯ ಹೊಂದಲು ಎಂದು ಪ್ರಧಾನಿ ಸೂಚಿಸಿದ್ದಾರೆ.

ಕರ್ನಾಟಕ, ಗುಜರಾತ್, ತೆಲಂಗಾಣ ಸೇರಿ ಹಲವು ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಮುಖ್ಯಮಂತ್ರಿಗಳೊಂದಿಗೆ ಸಭೆ ನಡೆಸಿದ ಮೋದಿ, ದೇಶದ ಪ್ರತಿಯೊಬ್ಬರಿಗೂ ಲಸಿಕೆ ಪೂರೈಸುವುದು ಕೇಂದ್ರ ಸರ್ಕಾರದ ಆದ್ಯತೆಯಾಗಿದೆ. ಇದಕ್ಕಾಗಿ ಆಯಾ ರಾಜ್ಯಗಳು ಶೈತ್ಯಾಗಾರ ನಿರ್ಮಿಸುವ ಕುರಿತು ಕೇಂದ್ರಕ್ಕೆ ವರದಿ ಸಲ್ಲಿಸುವಂತೆಯೂ ಹೇಳಿದ್ದಾರೆ.

ಕೊರೋನಾಗೆ ಲಸಿಕೆ ಸಿದ್ಧವಾಗುತ್ತಿದೆ. ಇದಕ್ಕಾಗಿ ಕೇಂದ್ರ ಸರ್ಕಾರವು ಜಾಗತಿಕ ನಿಯಂತ್ರಕರು, ಬೇರೆ ದೇಶಗಳ ಸರ್ಕಾರ, ಅಂತಾರಾಷ್ಟ್ರೀಯ ಕಂಪನಿ, ದೇಶಿ ಸಂಸ್ಥೆಗಳ ಜತೆ ನಿರಂತರವಾಗಿ ಸಂಪರ್ಕದಲ್ಲಿದೆ. ಯಾವಾಗ ಲಸಿಕೆ ಲಭ್ಯವಾಗುತ್ತದೆಯೋ, ಆಗ ಅದನ್ನು ವೈಜ್ಞಾನಿಕವಾಗಿ ವಿತರಿಸಲು ಎಲ್ಲ ರಾಜ್ಯಗಳು ಸಿದ್ಧರಾಗಿರಬೇಕು ಎಂದಿದ್ದಾರೆ. ↘೪

### 4 ಹಂತದಲ್ಲಿ ವಿತರಣೆ

1. ಆರೋಗ್ಯ ಸಿಬ್ಬಂದಿಗೆ
2. ಪೊಲೀಸರು
3. 50 ವರ್ಷ ದಾಟಿದವರು
4. ಅನಾರೋಗ್ಯದಿಂದ ಬಳಲುತ್ತಿರುವವರು

### 160 ಆಮ್ಲಜನಕ ಉತ್ಪಾದನೆ ಘಟಕ

ಜನರಿಗೆ ಆರೋಗ್ಯ ಭದ್ರತೆ ಒದಗಿಸುವುದೇ ಕೇಂದ್ರದ ಉದ್ದೇಶವಾಗಿದ್ದು, ಕೃತಕ ಆಮ್ಲಜನಕ ಹಾಗೂ ವೆಂಟಿಲೇಟರ್ ಪೂರೈಸಲಾಗುತ್ತಿದೆ. ದೇಶದಲ್ಲಿ 160ಕ್ಕೂ ಹೆಚ್ಚು ಕೃತಕ ಆಮ್ಲಜನಕ ಉತ್ಪಾದನಾ ಘಟಕ ಸ್ಥಾಪನೆಗೆ ಪ್ರಯತ್ನ ನಡೆಯುತ್ತಿದೆ ಎಂದು ಮೋದಿ ತಿಳಿಸಿದ್ದಾರೆ.



### ಒಂದು ಕೋಟಿ ಆರೋಗ್ಯ ಸಿಬ್ಬಂದಿಗೆ ಮೊದಲ ಲಸಿಕೆ



ಇನ್ನು ಲಸಿಕೆ ಲಭ್ಯವಾದ ತಕ್ಷಣ ದೇಶದಲ್ಲಿ ಕೊರೋನಾ ವಿರುದ್ಧ ಹೋರಾಡಿದ ಆರೋಗ್ಯ ಸಿಬ್ಬಂದಿಗೆ ನೀಡಲಿದ್ದು, ಇದಕ್ಕಾಗಿ ಸರ್ಕಾರ ಒಂದು ಕೋಟಿ ಆರೋಗ್ಯ ಸಿಬ್ಬಂದಿಯನ್ನು ಗುರುತಿಸಿದೆ ಎಂದು ತಿಳಿದುಬಂದಿದೆ. ↘೪

4 ವಾರದಲ್ಲಿ ಲಸಿಕೆ: ಬಿಎಸ್‌ವೈ • ಪುಟ ೪

### ರಾಜ್ಯಗಳಿಗೆ ಅಮಿತ್ ಶಾ 3 ನಿರ್ದೇಶನ



ಯಾವುದೇ ಕಾರಣಕ್ಕೂ ಕೊರೋನಾ ಸಕ್ರಿಯ ಪ್ರಕರಣಗಳ ಸಂಖ್ಯೆ ಶೇ.5 ದಾಟದಂತೆ ಹಾಗೂ ಸಾವಿನ ಪ್ರಮಾಣ ಶೇ.1ಕ್ಕಿಂತ ಕಡಿಮೆ ಆಗುವಂತೆ ನೋಡಿಕೊಳ್ಳಬೇಕು ಎಂದು ಎಲ್ಲ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ↘೪

ಉದಯವಾಣಿ
ಜನಮನದ ಜೀವನಾಡಿ

| Date | 25-11-2020 |
| --- | --- |
| Page No | 4 |

ಹೊಸ ದಿಗಂತ

4
25 Nov 2020

ಜಿಲ್ಲಾ-ತಾಲೂಕು ಕೇಂದ್ರದಲ್ಲಿ ಪೂರ್ವ ತಯಾರಿಗೆ ಸೂಚನೆ | ರಾಜ್ಯದೆಲ್ಲೆಡೆ 29451 ಲಸಿಕೆ ವಿತರಣೆ ಕೇಂದ್ರ ಸ್ಥಾಪನೆ

# ಕೋವಿಡ್ ಲಸಿಕೆ ಹಂಚಿಕೆಗೆ ಭರದ ಸಿದ್ಧತೆ

• ದಿಗಂತ ವರದಿ, ಬೆಂಗಳೂರು

ಕೋವಿಡ್ ಲಸಿಕೆ ವಿತರಣೆಗೆ ರಾಜ್ಯ ಸಜ್ಜಾಗಿದೆ. ಒಟ್ಟು 29,451 ಲಸಿಕೆ ವಿತರಣೆ ಕೇಂದ್ರವನ್ನು ಗುರುತಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ಡಾ.ಕೆ.ಸುಧಾಕರ್ ತಿಳಿಸಿದರು.



ಕೇಂದ್ರ ಸರ್ಕಾರದ ಸೂಚನೆಯಂತೆ, ಕೋವಿಡ್ ಲಸಿಕೆ ವಿತರಣೆಗೆ ತಯಾರಿ ನಡೆದಿದೆ. ರಾಜ್ಯ ಕೋವಿಡ್ ಕಾರ್ಯಪಡೆ ಸಭೆ ಸೇರಿ ಈ ಕುರಿತು ಚರ್ಚೆ ನಡೆಸಲಾಗಿದೆ.ಲಸಿಕೆ ಸಂಗ್ರಹ ಹಾಗೂ ವಿತರಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ರಾಜ್ಯಾದ್ಯಂತ 29,451 ಲಸಿಕೆ ವಿತರಣೆ ಕೇಂದ್ರವನ್ನು ಗುರುತಿಸಲಾಗಿದೆ. ಲಸಿಕೆ ವಿತರಣೆ ಮಾಡಲು 10,008 ವ್ಯಾಕ್ಸಿನೇಟರ್ ಸಿಬ್ಬಂದಿ ಗುರುತಿಸಲಾಗಿದೆ. ಸರ್ಕಾರಿ ಆರೋಗ್ಯ ಕೇಂದ್ರಗಳ ಸಿಬ್ಬಂದಿ, ಆರೋಗ್ಯ ಕಾರ್ಯಕರ್ತರ ಬಗೆಗಿನ ಮಾಹಿತಿ ದಾಖಲಿಸಲಾಗಿದೆ. ಶೇ.80ರಷ್ಟು ಖಾಸಗಿ ಆಸ್ಪತ್ರೆಗಳು ಮಾಹಿತಿ ಒದಗಿಸಿದೆ. ಇನ್ನೂ ಶೇ.20ರಷ್ಟು ಆಸ್ಪತ್ರೆಗಳು ವಾರದೊಳಗೆ ಮಾಹಿತಿ ನೀಡಲಿವೆ ಎಂದು ವಿವರಿಸಿದರು.



## ಪ್ರಾದೇಶಿಕ ಲಸಿಕಾ ಕೇಂದ್ರ ಆರಂಭಿಸಲು ಪ್ರಸ್ತಾವನೆ

ರಾಜ್ಯದಲ್ಲಿ ಲಸಿಕೆ ಸಂಗ್ರಹ ಮತ್ತು ವಿತರಣೆಗೆ 2,855 ಕೋಲ್ಡ್ ಚೈನ್ ಕೇಂದ್ರ ಲಭ್ಯವಿದೆ. ಬೆಂಗಳೂರು ನಗರ, ಶಿವಮೊಗ್ಗ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಪ್ರಾದೇಶಿಕ ಲಸಿಕೆ ಸಂಗ್ರಹ ಕೇಂದ್ರಗಳನ್ನು ಆರಂಭಿಸಲು ಪ್ರಸ್ತಾಪಿಸಲಾಗಿದೆ. ಈ ಕೇಂದ್ರಗಳಿಗೆ ವಾಕ್ ಇನ್ ಕೂಲರ್, ವಾಕ್ ಇನ್ ಫ್ರೀಜರ್ ಗಳನ್ನು ನೀಡುವ ಪ್ರಸ್ತಾಪವಿದೆ. ರಾಜ್ಯದಲ್ಲಿ 10 ವಾಕ್ ಇನ್ ಕೂಲರ್ ಮತ್ತು 4 ವಾಕ್ ಇನ್ ಫ್ರೀಜರ್ ಇದೆ.

ಕೇಂದ್ರ ಆರೋಗ್ಯ ಸಚಿವಾಲಯವು ಮೂರು ವಾಕ್ ಇನ್ ಕೂಲರ್, ಎರಡು ವಾಕ್ ಇನ್ ಫ್ರೀಜರ್ ನೀಡಲಿದೆ.ಇದಕ್ಕಾಗಿ ಸಿವಿಲ್ ಕಾಮಗಾರಿ ಆರಂಭವಾಗಿದೆ. ಕೋಲ್ಡ್ ಸ್ಟೋರೇಜ್ ಮತ್ತು ಸಂಗ್ರಹಕ್ಕೆ ಸಂಬಂಧಿಸಿದಂತೆ, ಡೋಸ್ ಗಳು ಮತ್ತಿತರ ಮಾಹಿತಿ ಅಗತ್ಯವಿದೆ. ಈ ಮಾಹಿತಿಯನ್ನು ಶೀಘ್ರ ಒದಗಿಸುವಂತೆ ಕೇಂದ್ರ ಆರೋಗ್ಯ ಸಚಿವಾಲಯಕ್ಕೆ ಕೋರಲಾಗಿದೆ. ಲಸಿಕೆ ಕಾರ್ಯಕ್ರಮಕ್ಕೆ ಅಗತ್ಯವಿರುವ ಡ್ರೈ ಸ್ಟೋರೇಜ್ ಬಗ್ಗೆಯೂ ನಿರ್ಧಾರ ಕೈಗೊಳ್ಳಬೇಕಿದೆ ಎಂದು ಸಚಿವ ಸುಧಾಕರ್ ತಿಳಿಸಿದ್ದಾರೆ.

## ಲಸಿಕೆ ಬಗ್ಗೆ ಭರವಸೆ ಮೂಡಿಸಿದ ಕೇಂದ್ರ



ಮೈಸೂರು: ಇನ್ನು ನಾಲ್ಕು ವಾರದಲ್ಲಿ ಕೊರೊಫೀನಾ ಸೋಂಕಿಗೆ ಲಸಿಕೆ ಬರಬಹುದು. ಹಾಗಾಗಿ ಜಿಲ್ಲಾ ಮಟ್ಟದಲ್ಲಿ ಲಸಿಕೆ ಹಂಚಿಕೆ ಮಾಡಲು ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಇನ್ನು ನಾಲ್ಕು ವಾರದಲ್ಲಿ ಕೊರೊನಾ ಸೋಂಕಿಗೆ ಲಸಿಕೆ ಬರಬಹುದು. ಆದಕ್ಕಾಗಿ ಸಿದ್ಧತೆ ಮಾಡಿಕೊಳ್ಳಿ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಈ ಸಂಬಂಧ ಹಲವು ರಾಜ್ಯಗಳ ಮುಖ್ಯಮಂತ್ರಿಗಳ ಸಭೆ ಕರೆದಿದ್ದರು.ಆದಕ್ಕಾಗಿ ಬೇಕಾದ ಸಿದ್ಧತೆ ಮಾಡಿಕೊಳ್ಳಲು ಸೂಚನೆ ನೀಡಿದ್ದಾರೆ. ಜಿಲ್ಲಾ ಮಟ್ಟದಲ್ಲಿ ಲಸಿಕೆ ಹಂಚಲು ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ. ಆದಕ್ಕೆ ಬೇಕಾದ ತಯಾರಿ ನಡೆದಿದೆ ಎಂದರು.

## ಲಸಿಕೆ ವಿತರಣೆಗೆ ಸಿದ್ಧರಾಗಿ

ಗ ಕೊರೋನಾ ವಿರುದ್ಧ ನಡೆಯುತ್ತಿರುವ ಹೋರಾಟದಲ್ಲಿ ಪ್ರತಿಯೊಂದು ಜೀವ ಸಹ ರಕ್ಷಿಸುವುದು ಕೇಂದ್ರ ಸರ್ಕಾರದ ಉದ್ದೇಶವಾಗಿದೆ. ಈ ದಿಸೆಯಲ್ಲಿ ರಾಜ್ಯ ಸರ್ಕಾರಗಳ ನೆರವು ಸಹ ಪ್ರಮುಖವಾಗುತ್ತದೆ. ಹಾಗಾಗಿ ಲಸಿಕೆ ಸಂಗ್ರಹಕ್ಕಾಗಿ ಶೈತ್ಯಾಗಾರಗಳ ಅವಶ್ಯಕತೆ ಇದ್ದು, ಇದಕ್ಕಾಗಿ ರಾಜ್ಯಗಳ ಜತೆ ಚರ್ಚೆ ಸಹ ನಡೆಸಲಾಗಿದೆ. ಈ ದಿಸೆಯಲ್ಲಿ ರಾಜ್ಯಗಳು ರಾಜ್ಯ ಮಟ್ಟದ ಚಾಲನಾ ಸಮಿತಿ, ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಕಾರ್ಯಪಡೆ ರಚಿಸಬೇಕು ಎಂದಿದ್ದಾರೆ. ಕೊರೋನಾ ನಿಗ್ರಹದ ದಿಸೆಯಲ್ಲಿ ಕೈಗೊಂಡ ಕ್ರಮ, ಲಸಿಕೆ, ಕೇಂದ್ರ ಸಹಕಾರ ಸೇರಿ ಹಲವು ವಿಷಯಗಳ ಕುರಿತು ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಪ್ರಧಾನಿ ಜತೆ ಚರ್ಚಿಸಿದರು. ಕರ್ನಾಟಕ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸಹ ಸಭೆಯಲ್ಲಿ ಭಾಗವಹಿಸಿದ್ದರು.

## ಒಂದು ಕೋಟಿ ಆರೋಗ್ಯ ಸಿಬ್ಬಂದಿಗೆ ಮೊದಲ ಲಸಿಕೆ

ಗ ಕೊರೋನಾ ಯೋಧರಿಗೆ ಮೊದಲ ಲಸಿಕೆ ಲಭ್ಯವಾಗಲಿದ್ದು, ದೇಶದ ಶೇ.92 ಸರ್ಕಾರಿ ಹಾಗೂ ಶೇ.55 ಖಾಸಗಿ ಆಸ್ಪತ್ರೆಗಳ ಸಿಬ್ಬಂದಿಗೆ ನೀಡಲಾಗುತ್ತದೆ. ದೇಶದ 30 ಕೋಟಿ ಜನರಿಗೆ ಕೊರೋನಾ ಲಸಿಕೆ ನೀಡಲು ಸರ್ಕಾರ ಚಿಂತನೆ ನಡೆಸಿದೆ.

## ರಾಜ್ಯಗಳಿಗೆ ಅಮಿತ್ ಶಾ ನಿರ್ದೇಶನ

ಗ ಯಾವುದೇ ಕಾರಣಕ್ಕೂ ಕೊರೋನಾ ಎರಡನೇ ಹಂತಕ್ಕೆ ಹೋಗಬಾರದು. ಈ ದಿಸೆಯಲ್ಲಿ ಆಯಾ ರಾಜ್ಯ ಸರ್ಕಾರಗಳು ಕ್ರಮ ತೆಗೆದುಕೊಳ್ಳಬೇಕು ಎಂದು ಹೇಳಿದ್ದಾರೆ.

### ನಿರ್ದೇಶನ ಯಾವುವು?

- ಕಂಟೈನ್‌ಮೆಂಟ್ ವಲಯಗಳಲ್ಲಿ ಆಯಾ ಮುಖ್ಯಮಂತ್ರಿಗಳು ಇನ್ನೂ ಹೆಚ್ಚಿನ ಕ್ರಮ ಕೈಗೊಳ್ಳಬೇಕು
- ಅಧಿಕಾರಿಗಳು 15 ದಿನ ಬದಲು ವಾರಕ್ಕೊಮ್ಮೆ ಭೇಟಿ ನೀಡಿ ಪರಿಶೀಲಿಸಬೇಕು
- ಕೆಂಪು ವಲಯ ಎಂಬ ಹಣೆಪಟ್ಟಿಯಿಂದ ಆಯಾ ಪ್ರದೇಶ ಯಥಃಸ್ಥಿತ್ ಮುಕ್ತವಾಗಬೇಕು

## ವಾರಿಯರ್ಸ್‌ಗೆ ಮೊದಲ ಲಸಿಕೆ

ಬೆಂಗಳೂರು: ಕೊರೋನಾಗೆ ಲಸಿಕೆ ತಯಾರಿಸುವಲ್ಲಿ ದೇಶದ 24 ಸಂಸ್ಥೆಗಳು ಸಾಮರ್ಥ್ಯ ಹೊಂದಿವೆ. ಮೊದಲು ಆರೋಗ್ಯ ಕಾರ್ಯಕರ್ತರಿಗೆ ಲಸಿಕೆ ನೀಡಲಾಗುವುದು ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಹೇಳಿದರು.



ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ಜೊತೆಗಿನ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಶ್ವದಲ್ಲಿ 50 ಲಸಿಕೆಗಳು ಕ್ಲಿನಿಕಲ್ ಸಂಶೋಧನೆ ಪ್ರಯೋಗದ ಹಂತದಲ್ಲಿದೆ. 25 ಲಸಿಕೆಗಳು ಪ್ರಾಯೋಗಿಕವಾಗಿ ಮುಂಚೂಣಿಯಲ್ಲಿವೆ. ಐದು ಲಸಿಕೆ ವೈದ್ಯಕೀಯ ಪ್ರಯೋಗದ ಹಂತದಲ್ಲಿವೆ. ಭಾರತದಲ್ಲಿ 24 ಸಂಸ್ಥೆಗಳು ಲಸಿಕೆ ತಯಾರಿಸುವ ಸಾಮರ್ಥ್ಯ ಹೊಂದಿದ್ದು ಲಸಿಕೆ ಲಭ್ಯವಾದ ಕೂಡಲೇ ಕೋವಿಡ್ ಆರೋಗ್ಯ ಕಾರ್ಯಕರ್ತರಿಗೆ ಮೊದಲು ನೀಡಲಾಗುವುದು ಎಂದು ತಿಳಿಸಿದರು.

ಲಸಿಕೆ ಹಂಚಲು ಚುನಾವಣಾ ಮಾದರಿಯಲ್ಲಿ ಬೂತ್ ಮಟ್ಟದ ಕೇಂದ್ರವನ್ನು ತೆರೆಯಲಾಗುವುದು. ಈ ಕುರಿತು ಮೂರು ಸಮಿತಿಗಳನ್ನು ರಚಿಸಿ ಮುಖ್ಯಮಂತ್ರಿಗಳು, ಜಿಲ್ಲಾಧಿಕಾರಿಗಳು ಹಾಗೂ ತಾಲೂಕು ಮಟ್ಟದ ಸಮಿತಿಗಳನ್ನು ರಚಿಸಲಾಗುವುದು ಎಂದು ಹೇಳಿದರು. ದೇಶದಲ್ಲಿ ಆರಂಭದಲ್ಲಿ 30 ಕೋಟಿ ಜನಕ್ಕೆ ಲಸಿಕೆ ಹಂಚುವ ಉದ್ದೇಶ ಹೊಂದಿದ್ದು ಈ ಪೈಕಿ 1 ಕೋಟಿ ಆರೋಗ್ಯ ಕಾರ್ಯಕರ್ತರು, 2 ಕೋಟಿ ಕೊರೋನಾ ವಾರಿಯರ್ಸ್ ಹಾಗೂ 26 ಕೋಟಿ 50ರಿಂದ 60 ವಯೋಮಿತಿಯ ಮಂದಿಗೆ ಮೊದಲು ಲಸಿಕೆ ನೀಡುವ ಕುರಿತು ಪ್ರಧಾನ ಮಂತ್ರಿಗಳೊಂದಿಗಿನ ಸಭೆಯಲ್ಲಿ ಚರ್ಚಿಸಲಾಗಿದೆ ಎಂದರು.

**ಭಾರತದಲ್ಲಿ 24 ಸಂಸ್ಥೆಗಳು ಲಸಿಕೆ ತಯಾರಿಸುವ ಸಾಮರ್ಥ್ಯ ಹೊಂದಿದೆ. ಐದು ಲಸಿಕೆ ವೈದ್ಯಕೀಯ ಪ್ರಯೋಗದ ಹಂತದಲ್ಲಿವೆ. ಲಸಿಕೆ ಲಭ್ಯವಾದ ಕೂಡಲೇ ಕೋವಿಡ್ ಆರೋಗ್ಯ ಕಾರ್ಯಕರ್ತರಿಗೆ ಮೊದಲು ನೀಡಲಾಗುವುದು.**

■ ಬಸವರಾಜ ಬೊಮ್ಮಾಯಿ, ಗೃಹ ಸಚಿವ

ಉದಯವಾಣಿ
ಜನಮನದ ಜೀವನಾಡಿ

| Date | 25-11-2020 |
| --- | --- |
| Page No | 2 |

ಹೊಸ ದಿಗಂತ

2
25 Nov 2020

# ಪಾಸಿಟಿವ್ ಬಂದಲ್ಲಿ ಕಾಲೇಜಿಗೆ ಪ್ರವೇಶವಿಲ್ಲ

• ದಿಗಂತ ವರದಿ, ಬೆಳಗಾವಿ

ವಿದ್ಯಾರ್ಥಿಗಳು ಕಾಲೇಜು ಬರುವ ಮುನ್ನ ಕೊರೋನಾ ಸೋಂಕು ತಪಾಸಣೆ ಮಾಡುತ್ತಿದ್ದೇವೆ. ತಪಾಸಣೆ ಮಾಡುವ ವೇಳೆ ಪಾಸಿಟಿವ್ ಬಂದವರಿಗೆ ಕಾಲೇಜು ಬರಲು ಅವಕಾಶವಿಲ್ಲ ಎಂದು ಡಿಸಿಎಂ ಹಾಗೂ ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್.ಅಶ್ವತ್ಥನಾರಾಯಣ ಹೇಳಿದರು.

ಅವರು ಮಂಗಳವಾರ ಇಲ್ಲಿನ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಎಲ್ಲ ರೀತಿಯ ಸುರಕ್ಷತಾ ಕ್ರಮಗಳಿಗೆ ಆದ್ಯತೆ, ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದೇವೆ. ದಿನೇದಿನೇ ಹೆಚ್ಚೆಚ್ಚು ವಿದ್ಯಾರ್ಥಿಗಳು ಕಾಲೇಜಿಗೆ ಬರುತ್ತಿದ್ದಾರೆ ಎಂದು ಹೇಳಿದರು.

- **ವಿದ್ಯಾರ್ಥಿಗಳಿಗೆ ಕಡ್ಡಾಯ ಕೊರೋನಾ ತಪಾಸಣೆ**
- **ಆಫ್‌ಲೈನ್‌ನಲ್ಲೂ ಪಾಠ ಕೇಳಲು ಅವಕಾಶ**

ಕಾಲೇಜು ಆರಂಭಕ್ಕೆ ವಿದ್ಯಾರ್ಥಿಗಳು, ಪೋಷಕರ ಒತ್ತಾಯ ಇತ್ತು ಹೀಗಾಗಿ ಆನ್‌ಲೈನ್, ಆಫ್‌ಲೈನ್ ಕ್ಲಾಸ್ ಎರಡೂ ಆರಂಭಿಸಿದ್ದೇವೆ. ಸ್ವಇಚ್ಛೆಯಿಂದ ಬರುವ ವಿದ್ಯಾರ್ಥಿಗಳ ಅನುಕೂಲಕ್ಕೆ ಆಫ್‌ಲೈನ್ ಕ್ಲಾಸ್ ಶುರು ಮಾಡಿದ್ದೇವೆ ಎಂದು ಹೇಳಿದರು.

**ಸಂಪುಟ ವಿಸ್ತರಣೆ ಸಿಎಂಗೆ ಪರಮಾಧಿಕಾರ:** ಬಿ.ಎಸ್.ಯಡಿಯೂರಪ್ಪ ಅವರೇ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರೆ. ಯಾವುದೇ ಕಾರಣಕ್ಕೂ ಸಿಎಂ ಬದಲಾವಣೆಯ ಪ್ರಶ್ನೆಯೇ ಇಲ್ಲ. ಸಚಿವ ಸಂಪುಟ ವಿಸ್ತರಣೆ ಮಾಡುವುದಾಗಿ ಸಿಎಂ ಹೇಳಿದ್ದಾರೆ. ಸಿ.ಪಿ. ಯೋಗೀಶ್ವರ ರನ್ನು ಸಚಿವರನ್ನಾಗಿ ಮಾಡಬೇಕು ಎನ್ನುವ ಒತ್ತಾಯ ಹಿಂದಿನಿಂದಲೂ ಬಂದಿದೆ. ಯಾರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳಬೇಕು ಎನ್ನುವುದು ಮುಖ್ಯಮಂತ್ರಿ ಅವರ ಪರಮಾಧಿಕಾರವಿರುತ್ತದೆ ಎಂದರು.

**ಕನ್ನಡಿಗರೇ ಪ್ರತಿಭಟಿಸುವುದು ಸರಿಯಲ್ಲ:** ಮರಾಠಾ ಅಭಿವೃದ್ಧಿ ನಿಗಮ ಅವಶ್ಯವಿತ್ತು. ಅವರ ಅಭಿವೃದ್ಧಿಗಾಗಿ ಸರ್ಕಾರ ಕ್ರಮ ವಹಿಸಬೇಕಲ್ಲವೇ? ಅವರೂ ನಮ್ಮವರೇ, ನಮ್ಮ ಕನ್ನಡಿಗರೇ ಈ ವಿಷಯದಲ್ಲಿ ಸಂಘಟನೆ ಗಳು ಪ್ರತಿಭಟನೆ ನಡೆಸುವುದು ಸರಿಯಲ್ಲ ಎಂದರು.



## ವಿನಯ್ ಕರೆ ಮಾಡಿದ ಬಗ್ಗೆ ನನಗೆ ಗೊತ್ತಿಲ್ಲ

ಜೈಲಿನಲ್ಲಿದ್ದುಕೊಂಡು ವಿನಯ ಕುಲಕರ್ಣಿ ಅವರು ಹಲವರಿಗೆ ಕರೆ ಮಾಡಿದ್ದರೆ ಎಂಬ ವಿಚಾರ ನನಗೆ ಈ ಬಗ್ಗೆ ಗೊತ್ತಿಲ್ಲ, ನ್ಯಾಯಾಂಗದಿಂದ ಏನು ಸೌಲಭ್ಯ ನೀಡಿದ್ದಾರೆ ಗೊತ್ತಿಲ್ಲ, ಕಾನೂನು ಬಾಹಿರವಾಗಿ ನಡೆದುಕೊಳ್ಳಲು ಅವಕಾಶ ಇಲ್ಲ ಎಂದು ಡಿಸಿಎಂ ಹಾಗೂ ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್. ಅಶ್ವತ್ಥನಾರಾಯಣ ತಿಳಿಸಿದರು.

## ಅಭಿವೃದ್ಧಿ ವಿಚಾರಕ್ಕಾಗಿ ರಮೇಶ್ ದೆಹಲಿ ಭೇಟಿ

ಜಲಸಂಪನ್ಮೂಲ ಸಚಿವ ರಮೇಶ ಜಾರಕಿಹೊಳಿ ಅವರೊಂದಿಗೆ ಬಿಜೆಪಿ ಸೇರಿದವರಿಗೆ ಸಚಿವ ಸ್ಥಾನ ನೀಡಬೇಕ. ಹಾಗೂ ರಾಜ್ಯದ ನೀರಾವರಿ ಯೋಜನೆಗಳ ಬಗ್ಗೆ ಚರ್ಚಿಸಲು ಅವರು ದೆಹಲಿಗೆ ತೆರಳಿರಬಹುದು ತಮ್ಮ ಜೊತೆಗೆ ಬಂದವರ ಹಿತ ಕಾಯಲು ರಮೇಶ ಜಾರಕಿಹೊಳಿ ಮುಂದಾಗಿದ್ದಾರೆ. ಅದರಲ್ಲಿ ಯಾವುದೇ ತಪ್ಪಿಲ್ಲ ಎಂದು ಡಿಸಿಎಂ ಹಾಗೂ ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್.ಅಶ್ವತ್ಥನಾರಾಯಣ ಹೇಳಿದರು.

## ಒಕ್ಕಲಿಗರ ನಿಗಮಕ್ಕೆ ನನ್ನ ಬೆಂಬಲ

ಒಕ್ಕಲಿಗರ ಅಭಿವೃದ್ಧಿ ನಿಗಮ ಆಗಬೇಕು ಎನ್ನುವ ಒತ್ತಾಯ ಬಹಳ ದಿನಗಳಿಂದ ಇದೆ. ರಾಜ್ಯ ಸರ್ಕಾರ ಲಿಂಗಾಯತ ಅಭಿವೃದ್ಧಿ ನಿಗಮ ರಚಿಸಿದಂತೆ ಒಕ್ಕಲಿಗರ ಅಭಿವೃದ್ಧಿ ನಿಗಮ ರಚಿಸಲು ನನ್ನ ಬೆಂಬಲವೂ ಇದೆ.

ಸಂಯುಕ್ತ ಕರ್ನಾಟಕ

| Date | 25-11-2020 |
| --- | --- |
| Page No | 1 |

## ರಾಜ್ಯಮಟ್ಟದಲ್ಲಿ ಮೇಲುಸ್ತುವಾರಿ ಸಮಿತಿ ರಚನೆ

# ಲ[illegible]ರೈಕೆಗೆ ಕರ್ನಾಟಕ ಸನ್ನದ್ಧ

Clip & Share ✖ Cancel

**ಸಿದ್ಧತೆ ಏನೇನು...**

**29,451**
ಲಸಿಕೆ ವಿತರಣೆ ಕೇಂದ್ರ

**10,008**
ಲಸಿಕಾ ಸಿಬ್ಬಂದಿ ಗುರುತು

**2,855**
ಕೋಲ್ಡ್ ಚೇನ್ ಕೇಂದ್ರಗಳು

**10**
ವಾಕ್ ಇನ್ ಕೂಲರ್‌ಗಳು ಲಭ್ಯ

**ಸಂ.ಕ.ಸಮಾಚಾರ ಬೆಂಗಳೂರು**

ಮನುಕುಲವನ್ನೇ ತಲ್ಲಣಗೊಳಿಸಿರುವ ಮಾರಕ ಕೊರೊನಾ ವೈರಸ್‌ಗೆ ಲಸಿಕೆ ಲಭ್ಯವಾಗುತ್ತಿದ್ದಂತೆಯೇ ರಾಜ್ಯದಲ್ಲೂ ವ್ಯವಸ್ಥಿತವಾಗಿ ಲಸಿಕಾ ಕಾರ್ಯಕ್ರಮ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರ ಸರ್ವ ಸನ್ನದ್ಧವಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮಾಹಿತಿ ನೀಡಿದ್ದಾರೆ.

ಮಂಗಳವಾರ ಪ್ರಧಾನಿ ಮೋದಿ ದೇಶದ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳ ಜತೆ ಕೋವಿಡ್ ನಿಯಂತ್ರಣ ಹಾಗೂ ಲಸಿಕಾ ಕಾರ್ಯಕ್ರಮದ ಪೂರ್ವಸಿದ್ಧತೆಗಾಗಿ ನಡೆಸಿದ ವರ್ಚುವಲ್ ಸಭೆಯಲ್ಲಿ ಪಾಲ್ಗೊಂಡು ರಾಜ್ಯದ ಸಿದ್ಧತೆಗಳ ಬಗೆಗೆ ಸಂಪೂರ್ಣ ವಿವರ ನೀಡಿದರು. ಅಲ್ಲದೇ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಅಗತ್ಯ ಕ್ರಮಕೈಗೊಳ್ಳಲಿದೆ ಎಂದು ಭರವಸೆ ನೀಡಿದರು.

ಸಭೆಯ ಬಳಿಕ ಮಾಧ್ಯಮಗಳಿಗೆ ಮಾಹಿತಿ ನೀಡಿದ ಗೃಹ ಸಚಿವ ಬಸವರಾಜ ಬೊಮ್ಮಾಯಿ, ಚುನಾವಣೆಗಳು ನಡೆಯುವ ಮಾದರಿಯಲ್ಲಿ ಬೂತ್ ಮಟ್ಟ, ತಾಲ್ಲೂಕು ಮಟ್ಟ ಹಾಗೂ ಜಿಲ್ಲಾ ಮಟ್ಟದಲ್ಲಿ ಹಾಗೂ ರಾಜ್ಯಮಟ್ಟದಲ್ಲಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲೇ ಮೇಲುಸ್ತುವಾರಿ ಸಮಿತಿ ರಚಿಸಲು ಪ್ರಧಾನಿ ಸೂಚನೆ ಕೊಟ್ಟಿದ್ದಾರೆ. ಹೀಗಾಗಿ ರಾಜ್ಯ ಸರ್ಕಾರ ಈ ಲಸಿಕೆಯನ್ನು ಸಾರ್ವಜನಿಕರಿಗೆ ನೀಡಲು ಈಗಾಗಲೇ ಅಗತ್ಯ ಸಿದ್ಧತೆಗಳನ್ನು ಕೈಗೊಂಡಿದೆ ಎಂದು ತಿಳಿಸಿದರು.

ಕೊರೊನಾ ಹೆಮ್ಮಾರಿ

ದೇಶದಲ್ಲಿ ಸದ್ಯ 30 ಕೋಟಿ ಜನರಿಗೆ ಲಸಿಕೆಗಳನ್ನು ವಿತರಿಸುವ ಗುರಿ ಹೊಂದಲಾಗಿದೆ. ಮೊದಲ ಒಂದು ಕೋಟಿ ಆರೋಗ್ಯ ಕಾರ್ಯಕರ್ತರು, ಎರಡು ಕೋಟಿ ಕೋವಿಡ್ ವಾರಿಯರ್ಸ್ ಹಾಗೂ 26 ಕೋಟಿ ಲಸಿಕೆಗಳನ್ನು 50ರಿಂದ 60 ವರ್ಷದ ವಯಸ್ಸಿನವರಿಗೆ ನೀಡಲಾಗುವುದು. ಈ ಮಾದರಿಯಲ್ಲಿ ರಾಜ್ಯದಲ್ಲೂ ಆದ್ಯತೆಯ ಅನುಸಾರ ಲಸಿಕೆ ನೀಡಲು ಅಗತ್ಯ ತಯಾರಿ ಮಾಡಿಕೊಳ್ಳಲಾಗಿದೆ ಎಂದರು.

ಜಗತ್ತಿನಾದ್ಯಂತ ಕೋವಿಡ್ ಲಸಿಕೆ ಸಂಶೋಧನೆ 50ಕ್ಕೂ ಹೆಚ್ಚು ಕಡೆಗಳಲ್ಲಿ ನಡೆದಿದೆ. ಭಾರತದಲ್ಲೂ ಹಲವಾರು ಕಂಪನಿಗಳು ಲಸಿಕೆ ತಯಾರಿಕೆಗೆ ಮುಂದೆ ಬಂದಿವೆ. ಐಸಿಎಂಆರ್ ಅನುಮತಿಯೊಂದಿಗೆ ಭಾರತ್ ಬಯೋಟೆಕ್, ಆಕ್ಸ್‌ಫರ್ಡ್ ಜೆನೆಟಿಕ್ ಸೇರಿದಂತೆ ವಿವಿಧ ಕಂಪನಿಗಳು ಈಗಾಗಲೇ ಸಾಕಷ್ಟು ಪ್ರಗತಿ ಸಾಧಿಸಿವೆ. ದೇಶದಲ್ಲಿ ಮೂರು ಹಂತದ ಲಸಿಕೆ ಪ್ರಗತಿಯಲ್ಲಿದೆ. ಮುಂಗಡ, ಪ್ರಾಥಮಿಕ ಹಾಗೂ ಪ್ರಯೋಗ ಹಂತದ ಲಸಿಕೆಯನ್ನು ಸಂಶೋಧನೆ ಮಾಡಲಾಗುತ್ತಿದೆ. ಅಂತಿಮವಾಗಿ ಇದರಲ್ಲಿ ಯಾವುದು ಯಶಸ್ವಿಯಾಗುತ್ತದೆಯೋ ಅದನ್ನು ಜನಗಳಿಗೆ ತೆಗೆದುಕೊಳ್ಳುವ ಸಾಧ್ಯತೆ ಇದೆ . ಆದರೆ ನಿಖರ ದಿನಾಂಕ ಈವರೆಗೆ ಗೊತ್ತಿಲ್ಲ ಎಂದು ತಿಳಿಸಿದರು. ಲಸಿಕೆಗಳನ್ನು ಯಾವ ರೀತಿ ವಿತರಣೆ ಮಾಡಬೇಕು, ಹೇಗೆ ನೀಡಬೇಕು ಎಂಬುದರ ಬಗ್ಗೆ ತರಬೇತಿ ನೀಡಲಾಗುವುದು. ಇದನ್ನು ಎರಡರಿಂದ ಮೂರು ಡೋಸ್ ನೀಡುವ ಬಗ್ಗೆಯೂ ಚರ್ಚೆಯಾಗಿದೆ. ಅಂತಿಮವಾಗಿ ವೈದ್ಯಕೀಯ ಮಾರ್ಗಸೂಚಿಗಳ ಅನ್ವಯ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದರು. ಕೊರೊನಾ ನಿಯಂತ್ರಣಕ್ಕೆ ರಾಜ್ಯ ಸರ್ಕಾರ ಅನುಸರಿಸುತ್ತಿರುವ ಕಾರ್ಯಸೂಚಿ ಬಗೆಗೆ ಪ್ರಧಾನಿ ಮೋದಿ ತೃಪ್ತಿ ವ್ಯಕ್ತಪಡಿಸಿದ್ದಾರೆ. ಕೊರೊನಾ ನಿಯಂತ್ರಣದಲ್ಲಿದೆ ಎಂದು ಯಾರೊಬ್ಬರೂ ಮೈಮರೆಯಬಾರದು ಎಂದು ಸೂಚನೆ ಕೊಟ್ಟಿದ್ದಾರೆ. ಅಗತ್ಯವಿರುವ ಕಡೆ ನಿಯಮಗಳನ್ನು ಪಾಲನೆ ಮಾಡಬೇಕು. ಕೊರೊನಾ ನಿಯಂತ್ರಣಕ್ಕೆ ಸಾರ್ವಜನಿಕರೂ ಸಹ ಕೈಜೋಡಿಸಬೇಕೆಂದು ಹೇಳಿದರು.



ವರ್ಚುವಲ್ ಸಭೆಯಲ್ಲಿ ಸಿಎಂ ಜೊತೆಗೆ ಸಚಿವರಾದ ಬೊಮ್ಮಾಯಿ, ಆರ್.ಅಶೋಕ್, ಬಿ.ಶ್ರೀರಾಮುಲು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡಿದ್ದರು.

ಸಂಯುಕ್ತ ಕರ್ನಾಟಕ

| Date | 25-11-2020 |
|---|---|
| Page No | 1 |

# ಶೈತ್ಯಾಗಾರಗಳ ಸಿದ್ಧತೆಗೆ ರಾಜ್ಯಗಳಿಗೆ ಮೋದಿ ಸೂಚನೆ

**ನವದೆಹಲಿ:** ಕಳೆದ ಹನ್ನೊಂದು ತಿಂಗಳಿನಿಂದ ಜಗತ್ತಿನಾದ್ಯಂತ ಅಲ್ಲೋಲ ಕಲ್ಲೋಲ ಎಬ್ಬಿಸಿರುವ ಕೊರೊನಾ ಸಾಂಕ್ರಾಮಿಕ ಪಿಡುಗಿಗೆ ಲಸಿಕೆ ಸಿದ್ಧಗೊಳ್ಳುತ್ತಿರುವುದಾಗಿ ವರದಿ ಬರುತ್ತಿರುವಂತೆಯೇ, ಅವುಗಳ ಸಂಗ್ರಹಕ್ಕಾಗಿ ಶೈತ್ಯಾಗಾರಗಳನ್ನು ಸಜ್ಜುಗೊಳಿಸಿಕೊಳ್ಳುವಂತೆ ರಾಜ್ಯ ಸರ್ಕಾರಗಳಿಗೆ ಪ್ರಧಾನಿ ನರೇಂದ್ರ ಮೋದಿ ಸೂಚಿಸಿದ್ದಾರೆ.

ಸಾಂಕ್ರಾಮಿಕದ ಎರಡನೇ ಅಲೆ ಎದ್ದಿರುವ ಎಂಟು ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದ ನಂತರ ಮಾತನಾಡಿರುವ ಅವರು, ವೈಜ್ಞಾನಿಕವಾಗಿ ಪ್ರಮಾಣೀಕೃತ ಲಸಿಕೆ ಲಭ್ಯವಾದ ಕೂಡಲೇ ಅದನ್ನು ನೀಡಲಾಗುವುದು ಎಂದರು.

ಲಸಿಕೆ ಸಂಶೋಧನೆ ಮತ್ತು ಅಭಿವೃದ್ಧಿ ಕುರಿತು ನಿಗಾ ಇಡಲಾಗಿದೆ. ಲಸಿಕೆ ತಯಾರಿಸುವವರು ಸಂಪರ್ಕದಲ್ಲಿದ್ದಾರೆ. ಜಾಗತಿಕವಾಗಿ ಲಸಿಕೆಯನ್ನು ನಿಯಂತ್ರಿಸುವ ಸಂಸ್ಥೆಗಳು, ವಿವಿಧ ದೇಶಗಳ ಮುಖ್ಯಸ್ಥರು, ಅಂತಾರಾಷ್ಟ್ರೀಯ ಕಂಪನಿಗಳೊಂದಿಗೂ ಸತತವಾಗಿ ಸಂಪರ್ಕದಲ್ಲಿರುವುದಾಗಿ ಮೋದಿ ಹೇಳಿದರು. ತ್ವರಿತವಾಗಿ ಲಸಿಕೆಯನ್ನು ತಲುಪಿಸುವುದು ಎಷ್ಟು ಮುಖ್ಯವೋ, ಸುರಕ್ಷತೆಯೂ ಅಷ್ಟೇ ಮುಖ್ಯ ಎನ್ನುವುದನ್ನು ಗಮನದಲ್ಲಿಟ್ಟುಕೊಂಡಿರುವುದಾಗಿ ಅವರು ಸ್ಪಷ್ಟಪಡಿಸಿದ್ದಾರೆ. ಲಸಿಕಾ ಕಾರ್ಯಕ್ರಮ ಎಲ್ಲಾ ಮಟ್ಟದಲ್ಲೂ ಅತ್ಯಂತ ಸರಳವಾಗಿ, ಸುವ್ಯವಸ್ಥಿತವಾಗಿ ನಡೆಯುವಂತೆ ರಾಜ್ಯ ಸರ್ಕಾರಗಳು ನೋಡಿಕೊಳ್ಳುವುದು ಅಗತ್ಯ ಎಂದಿದ್ದಾರೆ.

ಈ ನಡುವೆ ಬ್ರಿಟನ್ ಮೂಲದ ಆಕ್ಸ್‌ಫರ್ಡ್ ವಿವಿ ಹಾಗೂ ಆಸ್ಟ್ರಾಜೆನಿಕಾ ಸಂಶೋಧಿಸುತ್ತಿರುವ ಕೊವಿಶೀಲ್ಡ್ ಕೊರೊನಾ ನಿರೋಧಕ ಲಸಿಕೆಯ 10 ಕೋಟಿ ಡೋಸ್‌ಗಳನ್ನು ಜನವರಿಯ ಹೊತ್ತಿಗೆ ಸಿದ್ಧಪಡಿಸುವುದಾಗಿ ಭಾರತದ ಸೀರಂ ಇನ್‌ಸ್ಟಿಟ್ಯೂಟ್‌ನ ಅದಾರ್ ಪೂನಾವಾಲಾ ಹೇಳಿದ್ದಾರೆ. ಈ ಪೈಕಿ ಶೇ.90ರಷ್ಟು ಲಸಿಕೆಗಳನ್ನು ಭಾರತಕ್ಕೇ ಆದ್ಯತೆ ಮೇರೆಗೆ ನೀಡಲಾಗುವುದು. ಲಸಿಕೆಯ ಒಂದು ಡೋಸ್‌ನ್ನು ಸರ್ಕಾರಕ್ಕೆ 250 ರೂ.ಗಳಿಗೆ ನೀಡಲಾಗುವುದು ಎಂದಿರುವ ಅವರು, ಖಾಸಗಿಯವರಿಗೆ ಇದರ ಬೆಲೆ 1000 ರೂ.ಗಳು ಎಂದು ಬಹಿರಂಗಪಡಿಸಿದ್ದಾರೆ.

ಸಂಯುಕ್ತ ಕರ್ನಾಟಕ

| Date | 25-11-2020 |
| --- | --- |
| Page No | 1 |


# ತ್ಯಾಜ್ಯ ನಿರ್ವಹಣೆ: ಪ್ರತ್ಯೇಕ ಮಂಡಳಿ ಸ್ಥಾಪನೆಗೆ ಸಿದ್ಧತೆ

**ಸಂ.ಕ.ಸಮಾಚಾರ ಬೆಂಗಳೂರು**

ಬೆಂಗಳೂರು ನಗರದಲ್ಲಿ ತ್ಯಾಜ್ಯ ಉತ್ಪಾದನೆ ಹೆಚ್ಚಳವಾಗುತ್ತಿದ್ದು ಇದರ ನಿರ್ವಹಣೆಗೆ ಪ್ರತ್ಯೇಕ ಘನತ್ಯಾಜ್ಯ ನಿರ್ವಹಣ ಮಂಡಳಿ ಸ್ಥಾಪನೆ ಮಾಡುವ ಕುರಿತು ಬಿಬಿಎಂಪಿ ಸಿದ್ಧತೆ ನಡೆಸಿದೆ.



ಈ ಕುರಿತಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿದ್ದು ಹಲವಾರು ವರ್ಷಗಳಿಂದ ಸಮಸ್ಯೆಯಾಗಿರುವ ತ್ಯಾಜ್ಯ ನಿರ್ವಹಣೆಯನ್ನು ಸರಿಯಾದ ದಾರಿಗೆ ತರಬೇಕಾದಲ್ಲಿ ಘನತ್ಯಾಜ್ಯ ನಿರ್ವಹಣಾ ಮಂಡಳಿ ಸ್ಥಾಪನೆಯೇ ಇರುವ ದಾರಿ ಎಂಬುದು ಬಿಬಿಎಂಪಿ ಉದ್ದೇಶ.

ಈ ಕುರಿತಂತೆ ಬಿಬಿಎಂಪಿ ಆಯುಕ್ತ ಮಾಧ್ಯಮಗಳಿಗೆ ವಿವರಿಸಿ, ಬಿಬಿಎಂಪಿ ವ್ಯಾಪ್ತಿ 800 ಚ.ಕಿ.ಮೀವರೆಗೆ ವಿಸ್ತರಣೆಯಾಗಿದ್ದು, ಸುಮಾರು 1.20 ಕೋಟಿ ಜನಸಂಖ್ಯೆ ಇದೆ. ಜನಸಂಖ್ಯೆಗೆ ಅನುಗುಣವಾಗಿ ಮೂಲ ಸೌಕರ್ಯ ಒದಗಿಸುವುದು ಸವಾಲಿನ ಕೆಲಸವಾಗಿದೆ. ಈ ಹಿನ್ನೆಲೆಯಲ್ಲಿ ಬೆಂಗಳೂರು ಜಲಮಂಡಳಿ, ಬೆಸ್ಕಾಂ ಮಾದರಿಯಲ್ಲಿ ಪ್ರತ್ಯೇಕ ಘನತ್ಯಾಜ್ಯ ನಿರ್ವಹಣಾ ಮಂಡಳಿ ನಿರ್ಮಾಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವುದಕ್ಕೆ ಸೂಚನೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಇನ್ನೊಂದು ವಾರದಲ್ಲಿ ಪ್ರಸ್ತಾವನೆ ಸಲ್ಲಿಸಲು ಸಿದ್ಧತೆ ನಡೆಸಲಾಗಿದೆ ಎಂದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ಸುಮಾರು 10 ಲಕ್ಷಕ್ಕೂ ಅಧಿಕ ತ್ಯಾಜ್ಯ ಉತ್ಪಾದನಾ ಕೇಂದ್ರಗಳಿಂದ ಕಸ ಸಂಗ್ರಹಿಸಲಾಗುತ್ತಿದೆ. ಜತೆಗೆ ರಸ್ತೆಗಳು, ಉದ್ಯಾನಗಳು, ಮಾರುಕಟ್ಟೆಗಳು ಹಾಗೂ ಬ್ಲಾಕ್ ಸ್ಪಾಟ್‌ಗಳಿಂದ ಹೆಚ್ಚುವರಿ ತ್ಯಾಜ್ಯ ಉತ್ಪಾದನೆಯಾಗುತ್ತಿದೆ. ಈ ಎಲ್ಲ ತ್ಯಾಜ್ಯದ ವಿಲೇವಾರಿ ಮತ್ತು ನಿರ್ವಹಣೆಗೆ ಕೇವಲ 50 ಕೋಟಿ ರೂ. ವಾರ್ಷಿಕ ತೆರಿಗೆ ವಸೂಲಿ ಮಾಡಲಾಗುತ್ತಿದೆ. ಆದರೆ, ನಿರ್ವಹಣೆಗೆ ಸುಮಾರು ಒಂದು ಸಾವಿರ ಕೋಟಿ ರೂ.ಗಿಂತ ಅಧಿಕ ವೆಚ್ಚ ಮಾಡಲಾಗುತ್ತಿದೆ. ಆದರೂ ತ್ಯಾಜ್ಯ ಸಮಸ್ಯೆ ಪರಿಹಾರವಾಗುತ್ತಿಲ್ಲ. ಹಸಿ ಕಸವನ್ನು ಸಾವಯವ ಗೊಬ್ಬರ ಉತ್ಪಾದನೆ, ವಿದ್ಯುತ್ ಉತ್ಪಾದನೆಗೆ ಹಾಗೂ ಪ್ಲಾಸ್ಟಿಕ್‌ನ್ನು ಸಿಮೆಂಟ್ ಮತ್ತು ಡಾಂಬರು ನಿರ್ಮಾಣ ಕಾರ್ಯಕ್ಕೆ, ಮಾಂಸದ ತ್ಯಾಜ್ಯವನ್ನು ಮೀನಿನ ಆಹಾರ ಉತ್ಪಾದನೆಗೆ ಸೇರಿ ವಿವಿಧ ವಿಭಾಗದಲ್ಲಿ ಬಳಕೆ ಮಾಡಲಾಗುತ್ತಿದೆ. ಎಲ್ಲ ಆದಾಯ ಸಂಗ್ರಹಿಸಿ ನಿರ್ವಹಣೆ ಮಾಡಲು ಪಾಲಿಕೆಯ ಘನತ್ಯಾಜ್ಯ ನಿರ್ವಹಣಾ ವಿಭಾಗದಿಂದ ಪ್ರತ್ಯೇಕ ಸಂಸ್ಥೆಯಾಗಿ ಮಾಡುವುದು ಅಗತ್ಯವಾಗಿದೆ. ಮಂಡಳಿ ರಚನೆ ಮಾಡಿದಲ್ಲಿ ತ್ಯಾಜ್ಯ ಸಂಸ್ಕರಣಾ ಘಟಕಗಳ ವ್ಯವಸ್ಥಿತವಾಗಿ ನಿರ್ವಹಣೆ ಮಾಡಬಹುದು ಎಂಬ ಉದ್ದೇಶದಿಂದ ಸರ್ಕಾರ ಮಂಡಳಿ ರಚನೆಗೆ ಮುಂದಾಗಿದೆ ಎಂದು ವಿವರಿಸಿದರು.

> “ನಗರದಲ್ಲಿ ಉತ್ಪಾದನೆಯಾಗುತ್ತಿರುವ ತ್ಯಾಜ್ಯ, ನಿರ್ವಹಣೆಗೆ ಮಾಡುತ್ತಿರುವ ವೆಚ್ಚ, ಸಂಸ್ಕರಣಾ ಘಟಕಗಳು ನಿರ್ವಹಣೆ ಸೇರಿದಂತೆ ವಿವರವಾದ ಪ್ರಸ್ತಾವನೆ ಸಿದ್ಧಪಡಿಸಲಾಗುತ್ತಿದೆ. ಪಾಲಿಕೆ ಆಡಳಿತಾಧಿಕಾರಿಗಳಿಂದ ಅನುಮೋದನೆ ಪಡೆದು ಸರ್ಕಾರಕ್ಕೆ ಸಲ್ಲಿಸಲಾಗುವುದು.
>
> ■ **ಮಂಜುನಾಥ್ ಪ್ರಸಾದ್** | ಪಾಲಿಕೆ ಆಯುಕ್ತ

ಸಂಯುಕ್ತ ಕರ್ನಾಟಕ

| Date | 25-11-2020 |
| --- | --- |
| Page No | 3 |

# 3 ಪ್ರಾದೇಶಿಕ ಲಸಿಕೆ ಸಂಗ್ರಹ ಕೇಂದ್ರ

ಬೆಂಗಳೂರು: ರಾಜ್ಯದಲ್ಲಿ ಕೋವಿಡ್ ಲಸಿಕೆ ವಿತರಣೆಗೆ ಎಲ್ಲ ಬಗೆಯ ಸಿದ್ಧತೆಗಳನ್ನು ಮಾಡಿಕೊಂಡಿದ್ದು, ಬೇಗನೆ ಲಸಿಕೆ ವಿತರಣೆ ಮಾಡಲು ಸಾಧ್ಯವಾಗುವಂತೆ ಹೊಸದಾಗಿ ಬೆಂಗಳೂರು ನಗರ, ಶಿವಮೊಗ್ಗ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಪ್ರಾದೇಶಿಕ ಲಸಿಕೆ ಸಂಗ್ರಹ ಕೇಂದ್ರಗಳನ್ನು ಆರಂಭಿಸಲು ಪ್ರಸ್ತಾಪಿಸಲಾಗಿದೆ ಎಂದು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್ ಮಾಹಿತಿ ನೀಡಿದ್ದಾರೆ.

ಪ್ರಾದೇಶಿಕ ಲಸಿಕೆ ಸಂಗ್ರಹ ಕೇಂದ್ರಗಳಿಗೆ ವಾಕ್ ಇನ್ ಕೂಲರ್, ವಾಕ್ ಇನ್ ಫ್ರೀಜರ್‌ಗಳನ್ನು ಕೂಡ ನೀಡುವ ಪ್ರಸ್ತಾಪವಿದೆ. ರಾಜ್ಯ ಕೋವಿಡ್ ಕಾರ್ಯಪಡೆ ಸಭೆ ಸೇರಿ ಈ ಕುರಿತು ಚರ್ಚೆ ನಡೆಸಿದ್ದು, ಲಸಿಕೆ ಸಂಗ್ರಹ ಹಾಗೂ ವಿತರಣೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಸರ್ಕಾರಿ ಆರೋಗ್ಯ ಕೇಂದ್ರಗಳ ಸಿಬ್ಬಂದಿ, ಆರೋಗ್ಯ ಕಾರ್ಯಕರ್ತರ ಬಗೆಗಿನ ಮಾಹಿತಿಯನ್ನು ದಾಖಲಿಸಲಾಗಿದೆ. ಶೇ.80 ರಷ್ಟು ಖಾಸಗಿ ಆಸ್ಪತ್ರೆಗಳು ಮಾಹಿತಿ ಒದಗಿಸಿದ್ದು, ಇನ್ನೂ ಶೇ.20 ರಷ್ಟು ಆಸ್ಪತ್ರೆಗಳು ವಾರದೊಳಗೆ ಮಾಹಿತಿ ನೀಡಲಿವೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ 10 ವಾಕ್ ಇನ್ ಕೂಲರ್ ಮತ್ತು 4 ವಾಕ್ ಇನ್ ಫ್ರೀಜರ್ ಇದೆ. ಕೇಂದ್ರ ಆರೋಗ್ಯ ಸಚಿವಾಲಯವು 3 ವಾಕ್ ಇನ್ ಕೂಲರ್, 2 ವಾಕ್ ಇನ್ ಫ್ರೀಜರ್ ನೀಡಲಿದೆ. ಇದಕ್ಕಾಗಿ ಸಿವಿಲ್ ಕಾಮಗಾರಿ ಆರಂಭವಾಗಿದೆ. ಕೋಲ್ಡ್ ಸ್ಟೋರೇಜ್ ಮತ್ತು ಸಂಗ್ರಹಕ್ಕೆ ಸಂಬಂಧಿಸಿದಂತೆ, ಡೋಸ್ ಗಳು ಮತ್ತಿತರ ಮಾಹಿತಿ ಅಗತ್ಯವಿದೆ. ಈ ಮಾಹಿತಿಯನ್ನು ಶೀಘ್ರ ಒದಗಿಸುವಂತೆ ಕೇಂದ್ರ ಆರೋಗ್ಯ ಸಚಿವಾಲಯಕ್ಕೆ ಕೋರಲಾಗಿದೆ. ಲಸಿಕೆ ಕಾರ್ಯಕ್ರಮಕ್ಕೆ ಅಗತ್ಯವಿರುವ ಡ್ರೈ ಸ್ಟೋರೇಜ್ ಬಗ್ಗೆಯೂ ನಿರ್ಧಾರ ಕೈಗೊಳ್ಳಬೇಕಿದೆ ಎಂದು ತಿಳಿಸಿದ್ದಾರೆ.

ಕೇಂದ್ರ ಸರ್ಕಾರ ಈಗಾಗಲೇ ಡೀಪ್ ಫ್ರೀಜರ್ ಹಾಗೂ ರೆಫ್ರಿಜರೇಟರ್‌ಗಳನ್ನು ಮಂಜೂರು ಮಾಡಿದೆ. ಹೆಚ್ಚುವರಿ ಅಗತ್ಯಗಳ ಕುರಿತು ಕೇಂದ್ರ ಸರ್ಕಾರಕ್ಕೆ ಮಾಹಿತಿ ನೀಡಲಾಗಿದೆ. ಪಶು ಸಂಗೋಪನೆ ಇಲಾಖೆಯಲ್ಲಿ ಲಭ್ಯವಿರುವ ಕೋಲ್ಡ್ ಸ್ಟೋರೇಜ್ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆಯಲಾಗಿದೆ. ಕಾರ್ಪೋರೇಟ್ ಖಾಸಗಿ ಆಸ್ಪತ್ರೆಗಳ ಕೋಲ್ಡ್ ಸ್ಟೋರೇಜ್ ಬಗ್ಗೆಯೂ ಮಾಹಿತಿ ಪಡೆಯಲಾಗಿದೆ ಎಂದು ಸಚಿವ ಡಾ.ಸುಧಾಕರ್ ವಿವರಿಸಿದ್ದಾರೆ.

| Date | 25-11-2020 |
| --- | --- |
| Page No | 1 |

ಹೊಸ ದಿಗಂತ



25 Nov 2020

## ಶೈತ್ಯಾಗಾರ ಸೌಲಭ್ಯ ಸಿದ್ಧವಾಗಿರಲಿ | ರಾಜ್ಯಗಳಿಗೆ ಪ್ರಧಾನಿ ಮೋದಿ ಸೂಚನೆ

# ಲಸಿಕೆ ವಿತರಣೆಗೆ ಸಿದ್ಧರಾಗಿ

**ಹೊಸದಿಲ್ಲಿ:** 2-3 ತಿಂಗಳಲ್ಲಿ ಕೊರೋನಾಗೆ ಲಸಿಕೆ ಸಿದ್ಧ ಎಂದು ಹಲವು ಸಂಸ್ಥೆಗಳು ಘೋಷಿಸಿದ ಬೆನ್ನಲ್ಲೇ ದೇಶದ ಜನರಿಗೆ ಲಸಿಕೆ ವಿತರಿಸಲು ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ತೀರ್ಮಾನಿಸಿದೆ. ಆಯಾ ರಾಜ್ಯಗಳು ಲಸಿಕೆ ಸಂಗ್ರಹಕ್ಕೆ ಶೈತ್ಯಾಗಾರ ಸೌಲಭ್ಯ ಹೊಂದಲು ಎಂದು ಪ್ರಧಾನಿ ಸೂಚಿಸಿದ್ದಾರೆ.

ಕರ್ನಾಟಕ, ಗುಜರಾತ್, ತೆಲಂಗಾಣ ಸೇರಿ ಹಲವು ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಮುಖ್ಯಮಂತ್ರಿಗಳೊಂದಿಗೆ ಸಭೆ ನಡೆಸಿದ ಮೋದಿ, ದೇಶದ ಪ್ರತಿಯೊಬ್ಬರಿಗೂ ಲಸಿಕೆ ಪೂರೈಸುವುದು ಕೇಂದ್ರ ಸರ್ಕಾರದ ಆದ್ಯತೆಯಾಗಿದೆ. ಇದಕ್ಕಾಗಿ ಆಯಾ ರಾಜ್ಯಗಳು ಶೈತ್ಯಾಗಾರ ನಿರ್ಮಿಸುವ ಕುರಿತು ಕೇಂದ್ರಕ್ಕೆ ವರದಿ ಸಲ್ಲಿಸುವಂತೆಯೂ ಹೇಳಿದ್ದಾರೆ.

ಕೊರೋನಾಗೆ ಲಸಿಕೆ ಸಿದ್ಧವಾಗುತ್ತಿದೆ. ಇದಕ್ಕಾಗಿ ಕೇಂದ್ರ ಸರ್ಕಾರವು ಜಾಗತಿಕ ನಿಯಂತ್ರಕರು, ಬೇರೆ ದೇಶಗಳ ಸರ್ಕಾರ, ಅಂತಾರಾಷ್ಟ್ರೀಯ ಕಂಪನಿ, ದೇಶಿ ಸಂಸ್ಥೆಗಳ ಜತೆ ನಿರಂತರವಾಗಿ ಸಂಪರ್ಕದಲ್ಲಿದೆ. ಯಾವಾಗ ಲಸಿಕೆ ಲಭ್ಯವಾಗುತ್ತದೆಯೋ, ಆಗ ಅದನ್ನು ವೈಜ್ಞಾನಿಕವಾಗಿ ವಿತರಿಸಲು ಎಲ್ಲ ರಾಜ್ಯಗಳು ಸಿದ್ಧರಾಗಿರಬೇಕು ಎಂದಿದ್ದಾರೆ. ೪

### 4 ಹಂತದಲ್ಲಿ ವಿತರಣೆ

1. ಆರೋಗ್ಯ ಸಿಬ್ಬಂದಿಗೆ
2. ಪೊಲೀಸರು
3. 50 ವರ್ಷ ದಾಟಿದವರು
4. ಅನಾರೋಗ್ಯದಿಂದ ಬಳಲುತ್ತಿರುವವರು

### 160 ಆಮ್ಲಜನಕ ಉತ್ಪಾದನೆ ಘಟಕ

ಜನರಿಗೆ ಆರೋಗ್ಯ ಭದ್ರತೆ ಒದಗಿಸುವುದೇ ಕೇಂದ್ರದ ಉದ್ದೇಶವಾಗಿದ್ದು, ಕೃತಕ ಆಮ್ಲಜನಕ ಹಾಗೂ ವೆಂಟಿಲೇಟರ್ ಪೂರೈಸಲಾಗುತ್ತಿದೆ. ದೇಶದಲ್ಲಿ 160ಕ್ಕೂ ಹೆಚ್ಚು ಕೃತಕ ಆಮ್ಲಜನಕ ಉತ್ಪಾದನಾ ಘಟಕ ಸ್ಥಾಪನೆಗೆ ಪ್ರಯತ್ನ ನಡೆಯುತ್ತಿದೆ ಎಂದು ಮೋದಿ ತಿಳಿಸಿದ್ದಾರೆ.



### ಒಂದು ಕೋಟಿ ಆರೋಗ್ಯ ಸಿಬ್ಬಂದಿಗೆ ಮೊದಲ ಲಸಿಕೆ



ಇನ್ನು ಲಸಿಕೆ ಲಭ್ಯವಾದ ತಕ್ಷಣ ದೇಶದಲ್ಲಿ ಕೊರೋನಾ ವಿರುದ್ಧ ಹೋರಾಡಿದ ಆರೋಗ್ಯ ಸಿಬ್ಬಂದಿಗೆ ನೀಡಲಿದ್ದು, ಇದಕ್ಕಾಗಿ ಸರ್ಕಾರ ಒಂದು ಕೋಟಿ ಆರೋಗ್ಯ ಸಿಬ್ಬಂದಿಯನ್ನು ಗುರುತಿಸಿದೆ ಎಂದು ತಿಳಿದುಬಂದಿದೆ. ೪

**4 ವಾರದಲ್ಲಿ ಲಸಿಕೆ: ಬಿಎಸ್‌ವೈ** • ಪುಟ ೪

### ರಾಜ್ಯಗಳಿಗೆ ಅಮಿತ್ ಶಾ 3 ನಿರ್ದೇಶನ

ಯಾವುದೇ ಕಾರಣಕ್ಕೂ ಕೊರೋನಾ ಸಕ್ರಿಯ ಪ್ರಕರಣಗಳ ಸಂಖ್ಯೆ ಶೇ.5



ದಾಟದಂತೆ ಹಾಗೂ ಸಾವಿನ ಪ್ರಮಾಣ ಶೇ.1ಕ್ಕಿಂತ ಕಡಿಮೆ ಆಗುವಂತೆ ನೋಡಿಕೊಳ್ಳಬೇಕು ಎಂದು ಎಲ್ಲ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ೪

| Date | 25-11-2020 |
| --- | --- |
| Page No | 4 |



ಜಿಲ್ಲಾ-ತಾಲೂಕು ಕೇಂದ್ರದಲ್ಲಿ ಪೂರ್ವ ತಯಾರಿಗೆ ಸೂಚನೆ | ರಾಜ್ಯದೆಲ್ಲೆಡೆ 29451 ಲಸಿಕೆ ವಿತರಣೆ ಕೇಂದ್ರ ಸ್ಥಾಪನೆ

# ಕೋವಿಡ್ ಲಸಿಕೆ ಹಂಚಿಕೆಗೆ ಭರದ ಸಿದ್ಧತೆ

• ದಿಗಂತ ವರದಿ, ಬೆಂಗಳೂರು

ಕೋವಿಡ್ ಲಸಿಕೆ ವಿತರಣೆಗೆ ರಾಜ್ಯ ಸಜ್ಜಾಗಿದೆ. ಒಟ್ಟು 29,451 ಲಸಿಕೆ ವಿತರಣೆ ಕೇಂದ್ರವನ್ನು ಗುರುತಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ಡಾ.ಕೆ.ಸುಧಾಕರ್ ತಿಳಿಸಿದರು.



ಕೇಂದ್ರ ಸರ್ಕಾರದ ಸೂಚನೆಯಂತೆ, ಕೋವಿಡ್ ಲಸಿಕೆ ವಿತರಣೆಗೆ ತಯಾರಿ ನಡೆದಿದೆ. ರಾಜ್ಯ ಕೋವಿಡ್ ಕಾರ್ಯಪಡೆ ಸಭೆ ಸೇರಿ ಈ ಕುರಿತು ಚರ್ಚೆ ನಡೆಸಲಾಗಿದೆ.ಲಸಿಕೆ ಸಂಗ್ರಹ ಹಾಗೂ ವಿತರಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ರಾಜ್ಯಾದ್ಯಂತ 29,451 ಲಸಿಕೆ ವಿತರಣೆ ಕೇಂದ್ರವನ್ನು ಗುರುತಿಸಲಾಗಿದೆ. ಲಸಿಕೆ ವಿತರಣೆ ಮಾಡಲು 10,008 ವ್ಯಾಕ್ಸಿನೇಟರ್ ಸಿಬ್ಬಂದಿ ಗುರುತಿಸಲಾಗಿದೆ. ಸರ್ಕಾರಿ ಆರೋಗ್ಯ ಕೇಂದ್ರಗಳ ಸಿಬ್ಬಂದಿ, ಆರೋಗ್ಯ ಕಾರ್ಯಕರ್ತರ ಬಗೆಗಿನ ಮಾಹಿತಿ ದಾಖಲಿಸಲಾಗಿದೆ. ಶೇ.80ರಷ್ಟು ಖಾಸಗಿ ಆಸ್ಪತ್ರೆಗಳು ಮಾಹಿತಿ ಒದಗಿಸಿದೆ. ಇನ್ನೂ ಶೇ.20ರಷ್ಟು ಆಸ್ಪತ್ರೆಗಳು ವಾರದೊಳಗೆ ಮಾಹಿತಿ ನೀಡಲಿವೆ ಎಂದು ವಿವರಿಸಿದರು.



## ಪ್ರಾದೇಶಿಕ ಲಸಿಕಾ ಕೇಂದ್ರ ಆರಂಭಿಸಲು ಪ್ರಸ್ತಾವನೆ

ರಾಜ್ಯದಲ್ಲಿ ಲಸಿಕೆ ಸಂಗ್ರಹ ಮತ್ತು ವಿತರಣೆಗೆ 2,855 ಕೋಲ್ಡ್ ಚೈನ್ ಕೇಂದ್ರ ಲಭ್ಯವಿದೆ. ಬೆಂಗಳೂರು ನಗರ, ಶಿವಮೊಗ್ಗ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಪ್ರಾದೇಶಿಕ ಲಸಿಕೆ ಸಂಗ್ರಹ ಕೇಂದ್ರಗಳನ್ನು ಆರಂಭಿಸಲು ಪ್ರಸ್ತಾಪಿಸಲಾಗಿದೆ. ಈ ಕೇಂದ್ರಗಳಿಗೆ ವಾಕ್ ಇನ್ ಕೂಲರ್, ವಾಕ್ ಇನ್ ಫ್ರೀಜರ್ ಗಳನ್ನು ನೀಡುವ ಪ್ರಸ್ತಾಪವಿದೆ. ರಾಜ್ಯದಲ್ಲಿ 10 ವಾಕ್ ಇನ್ ಕೂಲರ್ ಮತ್ತು 4 ವಾಕ್ ಇನ್ ಫ್ರೀಜರ್ ಇದೆ.

ಕೇಂದ್ರ ಆರೋಗ್ಯ ಸಚಿವಾಲಯವು ಮೂರು ವಾಕ್ ಇನ್ ಕೂಲರ್, ಎರಡು ವಾಕ್ ಇನ್ ಫ್ರೀಜರ್ ನೀಡಲಿದೆ.ಇದಕ್ಕಾಗಿ ಸಿವಿಲ್ ಕಾಮಗಾರಿ ಆರಂಭವಾಗಿದೆ. ಕೋಲ್ಡ್ ಸ್ಟೋರೇಜ್ ಮತ್ತು ಸಂಗ್ರಹಕ್ಕೆ ಸಂಬಂಧಿಸಿದಂತೆ, ಡೋಸ್ ಗಳು ಮತ್ತಿತರ ಮಾಹಿತಿ ಅಗತ್ಯವಿದೆ. ಈ ಮಾಹಿತಿಯನ್ನು ಶೀಘ್ರ ಒದಗಿಸುವಂತೆ ಕೇಂದ್ರ ಆರೋಗ್ಯ ಸಚಿವಾಲಯಕ್ಕೆ ಕೋರಲಾಗಿದೆ. ಲಸಿಕೆ ಕಾರ್ಯಕ್ರಮಕ್ಕೆ ಅಗತ್ಯವಿರುವ ಡ್ರೈ ಸ್ಟೋರೇಜ್ ಬಗ್ಗೆಯೂ ನಿರ್ಧಾರ ಕೈಗೊಳ್ಳಬೇಕಿದೆ ಎಂದು ಸಚಿವ ಸುಧಾಕರ್ ತಿಳಿಸಿದ್ದಾರೆ.

## ಲಸಿಕೆ ವಿತರಣೆಗೆ ಸಿದ್ಧರಾಗಿ

ಕೊರೋನಾ ವಿರುದ್ಧ ನಡೆಯುತ್ತಿರುವ ಹೋರಾಟದಲ್ಲಿ ಪ್ರತಿಯೊಂದು ಜೀವ ಸಹ ರಕ್ಷಿಸುವುದು ಕೇಂದ್ರ ಸರ್ಕಾರದ ಉದ್ದೇಶವಾಗಿದೆ. ಈ ದಿಸೆಯಲ್ಲಿ ರಾಜ್ಯ ಸರ್ಕಾರಗಳ ನೆರವು ಸಹ ಪ್ರಮುಖವಾಗುತ್ತದೆ. ಹಾಗಾಗಿ ಲಸಿಕೆ ಸಂಗ್ರಹಕ್ಕಾಗಿ ಶೈತ್ಯಾಗಾರಗಳ ಅವಶ್ಯಕತೆ ಇದ್ದು, ಇದಕ್ಕಾಗಿ ರಾಜ್ಯಗಳ ಜತೆ ಚರ್ಚೆ ಸಹ ನಡೆಸಲಾಗಿದೆ. ಈ ದಿಸೆಯಲ್ಲಿ ರಾಜ್ಯಗಳು ರಾಜ್ಯ ಮಟ್ಟದ ಚಾಲನಾ ಸಮಿತಿ, ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಕಾರ್ಯಪಡೆ ರಚಿಸಬೇಕು ಎಂದಿದ್ದಾರೆ. ಕೊರೋನಾ ನಿಗ್ರಹದ ದಿಸೆಯಲ್ಲಿ ಕೈಗೊಂಡ ಕ್ರಮ, ಲಸಿಕೆ, ಕೇಂದ್ರ ಸಹಕಾರ ಸೇರಿ ಹಲವು ವಿಷಯಗಳ ಕುರಿತು ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಪ್ರಧಾನಿ ಜತೆ ಚರ್ಚಿಸಿದರು. ಕರ್ನಾಟಕ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸಹ ಸಭೆಯಲ್ಲಿ ಭಾಗವಹಿಸಿದ್ದರು.

## ಒಂದು ಕೋಟಿ ಆರೋಗ್ಯ ಸಿಬ್ಬಂದಿಗೆ ಮೊದಲ ಲಸಿಕೆ

ಕೊರೋನಾ ಯೋಧರಿಗೆ ಮೊದಲ ಲಸಿಕೆ ಲಭ್ಯವಾಗಲಿದ್ದು, ದೇಶದ ಶೇ.92 ಸರ್ಕಾರಿ ಹಾಗೂ ಶೇ.55 ಖಾಸಗಿ ಆಸ್ಪತ್ರೆಗಳ ಸಿಬ್ಬಂದಿಗೆ ನೀಡಲಾಗುತ್ತದೆ. ದೇಶದ 30 ಕೋಟಿ ಜನರಿಗೆ ಕೊರೋನಾ ಲಸಿಕೆ ನೀಡಲು ಸರ್ಕಾರ ಚಿಂತನೆ ನಡೆಸಿದೆ.

## ರಾಜ್ಯಗಳಿಗೆ ಅಮಿತ್ ಶಾ ನಿರ್ದೇಶನ

ಯಾವುದೇ ಕಾರಣಕ್ಕೂ ಕೊರೋನಾ ಎರಡನೇ ಹಂತಕ್ಕೆ ಹೋಗಬಾರದು. ಈ ದಿಸೆಯಲ್ಲಿ ಆಯಾ ರಾಜ್ಯ ಸರ್ಕಾರಗಳು ಕ್ರಮ ತೆಗೆದುಕೊಳ್ಳಬೇಕು ಎಂದು ಹೇಳಿದ್ದಾರೆ.

### ನಿರ್ದೇಶನ ಯಾವುವು?

- ಕಂಟೈನ್‌ಮೆಂಟ್ ವಲಯಗಳಲ್ಲಿ ಆಯಾ ಮುಖ್ಯಮಂತ್ರಿಗಳು ಇನ್ನೂ ಹೆಚ್ಚಿನ ಕ್ರಮ ಕೈಗೊಳ್ಳಬೇಕು
- ಅಧಿಕಾರಿಗಳು 15 ದಿನ ಬದಲು ವಾರಕ್ಕೊಮ್ಮೆ ಭೇಟಿ ನೀಡಿ ಪರಿಶೀಲಿಸಬೇಕು
- ಕೆಂಪು ವಲಯ ಎಂಬ ಹಣೆಪಟ್ಟಿಯಿಂದ ಆಯಾ ಪ್ರದೇಶ ಯಃಕಶ್ಚಿತ್ ಮುಕ್ತವಾಗಬೇಕು

## ವಾರಿಯರ್ಸ್‌ಗೆ ಮೊದಲ ಲಸಿಕೆ

**ಬೆಂಗಳೂರು:** ಕೊರೋನಾಗೆ ಲಸಿಕೆ ತಯಾರಿಸುವಲ್ಲಿ ದೇಶದ 24 ಸಂಸ್ಥೆಗಳು ಸಾಮರ್ಥ್ಯ ಹೊಂದಿವೆ. ಮೊದಲು ಆರೋಗ್ಯ ಕಾರ್ಯಕರ್ತರಿಗೆ ಲಸಿಕೆ ನೀಡಲಾಗುವುದು ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಹೇಳಿದರು.



ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ಜೊತೆಗಿನ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಶ್ವದಲ್ಲಿ 50 ಲಸಿಕೆಗಳು ಕ್ಲಿನಿಕಲ್ ಸಂಶೋಧನೆ ಪ್ರಯೋಗದ ಹಂತದಲ್ಲಿದೆ. 25 ಲಸಿಕೆಗಳು ಪ್ರಾಯೋಗಿಕವಾಗಿ ಮುಂಚೂಣಿಯಲ್ಲಿವೆ. ಐದು ಲಸಿಕೆ ವೈದ್ಯಕೀಯ ಪ್ರಯೋಗದ ಹಂತದಲ್ಲಿವೆ. ಭಾರತದಲ್ಲಿ 24 ಸಂಸ್ಥೆಗಳು ಲಸಿಕೆ ತಯಾರಿಸುವ ಸಾಮರ್ಥ್ಯ ಹೊಂದಿದ್ದು ಲಸಿಕೆ ಲಭ್ಯವಾದ ಕೂಡಲೇ ಕೋವಿಡ್ ಆರೋಗ್ಯ ಕಾರ್ಯಕರ್ತರಿಗೆ ಮೊದಲು ನೀಡಲಾಗುವುದು ಎಂದು ತಿಳಿಸಿದರು.

ಲಸಿಕೆ ಹಂಚಲು ಚುನಾವಣಾ ಮಾದರಿಯಲ್ಲಿ ಬೂತ್ ಮಟ್ಟದ ಕೇಂದ್ರವನ್ನು ತೆರೆಯಲಾಗುವುದು. ಈ ಕುರಿತು ಮೂರು ಸಮಿತಿಗಳನ್ನು ರಚಿಸಿ ಮುಖ್ಯಮಂತ್ರಿಗಳು, ಜಿಲ್ಲಾಧಿಕಾರಿಗಳು ಹಾಗೂ ತಾಲೂಕು ಮಟ್ಟದ ಸಮಿತಿಗಳನ್ನು ರಚಿಸಲಾಗುವುದು ಎಂದು ಹೇಳಿದರು. ದೇಶದಲ್ಲಿ ಆರಂಭದಲ್ಲಿ 30 ಕೋಟಿ ಜನಕ್ಕೆ ಲಸಿಕೆ ಹಂಚುವ ಉದ್ದೇಶ ಹೊಂದಿದ್ದು ಈ ಪೈಕಿ 1 ಕೋಟಿ ಆರೋಗ್ಯ ಕಾರ್ಯಕರ್ತರು, 2 ಕೋಟಿ ಕೊರೋನಾ ವಾರಿಯರ್ಸ್ ಹಾಗೂ 26 ಕೋಟಿ 50ರಿಂದ 60 ವಯೋಮಿತಿಯ ಮಂದಿಗೆ ಮೊದಲು ಲಸಿಕೆ ನೀಡುವ ಕುರಿತು ಪ್ರಧಾನ ಮಂತ್ರಿಗಳೊಂದಿಗಿನ ಸಭೆಯಲ್ಲಿ ಚರ್ಚಿಸಲಾಗಿದೆ ಎಂದರು.

**ಭಾರತದಲ್ಲಿ 24 ಸಂಸ್ಥೆಗಳು ಲಸಿಕೆ ತಯಾರಿಸುವ ಸಾಮರ್ಥ್ಯ ಹೊಂದಿದೆ. ಐದು ಲಸಿಕೆ ವೈದ್ಯಕೀಯ ಪ್ರಯೋಗದ ಹಂತದಲ್ಲಿವೆ. ಲಸಿಕೆ ಲಭ್ಯವಾದ ಕೂಡಲೇ ಕೋವಿಡ್ ಆರೋಗ್ಯ ಕಾರ್ಯಕರ್ತರಿಗೆ ಮೊದಲು ನೀಡಲಾಗುವುದು.**

■ ಬಸವರಾಜ ಬೊಮ್ಮಾಯಿ, ಗೃಹ ಸಚಿವ

## ಲಸಿಕೆ ಬಗ್ಗೆ ಭರವಸೆ ಮೂಡಿಸಿದ ಕೇಂದ್ರ



ಮೈಸೂರು: ಇನ್ನು ನಾಲ್ಕು ವಾರದಲ್ಲಿ ಕೊರೊಘೀನಾ ಸೋಂಕಿಗೆ ಲಸಿಕೆ ಬರಬಹುದು. ಹಾಗಾಗಿ ಜಿಲ್ಲಾ ಮಟ್ಟದಲ್ಲಿ ಲಸಿಕೆ ಹಂಚಿಕೆ ಮಾಡಲು ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಇನ್ನು ನಾಲ್ಕು ವಾರದಲ್ಲಿ ಕೊರೊನಾ ಸೋಂಕಿಗೆ ಲಸಿಕೆ ಬರಬಹುದು. ಆದಕ್ಕಾಗಿ ಸಿದ್ಧತೆ ಮಾಡಿಕೊಳ್ಳಿ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಈ ಸಂಬಂಧ ಹಲವು ರಾಜ್ಯಗಳ ಮುಖ್ಯಮಂತ್ರಿಗಳ ಸಭೆ ಕರೆದಿದ್ದರು.ಆದಕ್ಕಾಗಿ ಬೇಕಾದ ಸಿದ್ಧತೆ ಮಾಡಿಕೊಳ್ಳಲು ಸೂಚನೆ ನೀಡಿದ್ದಾರೆ. ಜಿಲ್ಲಾ ಮಟ್ಟದಲ್ಲಿ ಲಸಿಕೆ ಹಂಚಲು ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ. ಆದಕ್ಕೆ ಬೇಕಾದ ತಯಾರಿ ನಡೆದಿದೆ ಎಂದರು.

ಹೊಸ ದಿಗಂತ

| Date | 25-11-2020 |
| --- | --- |
| Page No | 2 |

ಹೊಸ ದಿಗಂತ

2

25 Nov 2020

# ಪಾಸಿಟಿವ್ ಬಂದಲ್ಲಿ ಕಾಲೇಜಿಗೆ ಪ್ರವೇಶವಿಲ್ಲ

• ದಿಗಂತ ವರದಿ, ಬೆಳಗಾವಿ

ವಿದ್ಯಾರ್ಥಿಗಳು ಕಾಲೇಜು ಬರುವ ಮುನ್ನ ಕೊರೋನಾ ಸೋಂಕು ತಪಾಸಣೆ ಮಾಡುತ್ತಿದ್ದೇವೆ. ತಪಾಸಣೆ ಮಾಡುವ ವೇಳೆ ಪಾಸಿಟಿವ್ ಬಂದವರಿಗೆ ಕಾಲೇಜು ಬರಲು ಅವಕಾಶವಿಲ್ಲ ಎಂದು ಡಿಸಿಎಂ ಹಾಗೂ ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್.ಅಶ್ವತ್ಥನಾರಾಯಣ ಹೇಳಿದರು.

ಅವರು ಮಂಗಳವಾರ ಇಲ್ಲಿನ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಎಲ್ಲ ರೀತಿಯ ಸುರಕ್ಷತಾ ಕ್ರಮಗಳಿಗೆ ಆದ್ಯತೆ, ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದೇವೆ. ದಿನೇದಿನೇ ಹೆಚ್ಚೆಚ್ಚು ವಿದ್ಯಾರ್ಥಿಗಳು ಕಾಲೇಜಿಗೆ ಬರುತ್ತಿದ್ದಾರೆ ಎಂದು ಹೇಳಿದರು.

- ವಿದ್ಯಾರ್ಥಿಗಳಿಗೆ ಕಡ್ಡಾಯ ಕೊರೋನಾ ತಪಾಸಣೆ
- ಆಫ್‌ಲೈನ್‌ನಲ್ಲೂ ಪಾಠ ಕೇಳಲು ಅವಕಾಶ

ಕಾಲೇಜು ಆರಂಭಕ್ಕೆ ವಿದ್ಯಾರ್ಥಿಗಳು, ಪೋಷಕರ ಒತ್ತಾಯ ಇತ್ತು ಹೀಗಾಗಿ ಆನ್‌ಲೈನ್, ಆಫ್‌ಲೈನ್ ಕ್ಲಾಸ್ ಎರಡೂ ಆರಂಭಿಸಿದ್ದೇವೆ. ಸ್ವಇಚ್ಛೆಯಿಂದ ಬರುವ ವಿದ್ಯಾರ್ಥಿಗಳ ಅನುಕೂಲಕ್ಕೆ ಆಫ್‌ಲೈನ್ ಕ್ಲಾಸ್ ಶುರು ಮಾಡಿದ್ದೇವೆ ಎಂದು ಹೇಳಿದರು.

**ಸಂಪುಟ ವಿಸ್ತರಣೆ ಸಿಎಂಗೆ ಪರಮಾಧಿಕಾರ:** ಬಿ.ಎಸ್.ಯಡಿಯೂರಪ್ಪ ಅವರೇ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರೆ. ಯಾವುದೇ ಕಾರಣಕ್ಕೂ ಸಿಎಂ ಬದಲಾವಣೆಯ ಪ್ರಶ್ನೆಯೇ ಇಲ್ಲ, ಸಚಿವ ಸಂಪುಟ ವಿಸ್ತರಣೆ ಮಾಡುವುದಾಗಿ ಸಿಎಂ ಹೇಳಿದ್ದಾರೆ. ಸಿ.ಪಿ. ಯೋಗೀಶ್ವರ ರನ್ನು ಸಚಿವರನ್ನಾಗಿ ಮಾಡಬೇಕು ಎನ್ನುವ ಒತ್ತಾಯ ಹಿಂದಿನಿಂದಲೂ ಬಂದಿದೆ. ಯಾರನ್ನೂ ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳಬೇಕು ಎನ್ನುವುದು ಮುಖ್ಯಮಂತ್ರಿ ಅವರ ಪರಮಾಧಿಕಾರವಿರುತ್ತದೆ ಎಂದರು.

**ಕನ್ನಡಿಗರೇ ಪ್ರತಿಭಟಿಸುವುದು ಸರಿಯಲ್ಲ:** ಮರಾಠಾ ಅಭಿವೃದ್ಧಿ ನಿಗಮ ಅವಶ್ಯವಿತ್ತು. ಅವರ ಅಭಿವೃದ್ಧಿಗಾಗಿ ಸರ್ಕಾರ ಕ್ರಮ ವಹಿಸ ಬೇಕಲ್ಲವೇ? ಅವರೂ ನಮ್ಮವರೇ, ನಮ್ಮ ಕನ್ನಡಿಗರೇ ಈ ವಿಷಯದಲ್ಲಿ ಸಂಘಟನೆ ಗಳು ಪ್ರತಿಭಟನೆ ನಡೆಸುವುದು ಸರಿಯಲ್ಲ ಎಂದರು.



## ವಿನಯ್ ಕರೆ ಮಾಡಿದ ಬಗ್ಗೆ ನನಗೆ ಗೊತ್ತಿಲ್ಲ

ಜೈಲಿನಲ್ಲಿದ್ದುಕೊಂಡು ವಿನಯ ಕುಲಕರ್ಣಿ ಅವರು ಹಲವರಿಗೆ ಕರೆ ಮಾಡಿದ್ದರೆ ಎಂಬ ವಿಚಾರ ನನಗೆ ಈ ಬಗ್ಗೆ ಗೊತ್ತಿಲ್ಲ, ನ್ಯಾಯಾಂಗದಿಂದ ಏನು ಸೌಲಭ್ಯ ನೀಡಿದ್ದಾರೆ ಗೊತ್ತಿಲ್ಲ, ಕಾನೂನು ಬಾಹಿರವಾಗಿ ನಡೆದುಕೊಳ್ಳಲು ಅವಕಾಶ ಇಲ್ಲ ಎಂದು ಡಿಸಿಎಂ ಹಾಗೂ ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್. ಅಶ್ವತ್ಥನಾರಾಯಣ ತಿಳಿಸಿದರು.

## ಅಭಿವೃದ್ಧಿ ವಿಚಾರಕ್ಕಾಗಿ ರಮೇಶ್ ದೆಹಲಿ ಭೇಟಿ

ಜಲಸಂಪನ್ಮೂಲ ಸಚಿವ ರಮೇಶ ಜಾರಕಿಹೊಳಿ ಅವರೊಂದಿಗೆ ಬಿಜೆಪಿ ಸೇರಿದವರಿಗೆ ಸಚಿವ ಸ್ಥಾನ ನೀಡಬೇಕ. ಹಾಗೂ ರಾಜ್ಯದ ನೀರಾವರಿ ಯೋಜನೆಗಳ ಬಗ್ಗೆ ಚರ್ಚಿಸಲು ಅವರು ದೆಹಲಿಗೆ ತೆರಳಿರಬಹುದು ತಮ್ಮ ಜೊತೆಗೆ ಬಂದವರ ಹಿತ ಕಾಯಲು ರಮೇಶ ಜಾರಕಿಹೊಳಿ ಮುಂದಾಗಿದ್ದಾರೆ. ಅದರಲ್ಲಿ ಯಾವುದೇ ತಪ್ಪಿಲ್ಲ ಎಂದು ಡಿಸಿಎಂ ಹಾಗೂ ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್.ಅಶ್ವತ್ಥನಾರಾಯಣ ಹೇಳಿದರು.

## ಒಕ್ಕಲಿಗರ ನಿಗಮಕ್ಕೆ ನನ್ನ ಬೆಂಬಲ

ಒಕ್ಕಲಿಗರ ಅಭಿವೃದ್ಧಿ ನಿಗಮ ಆಗಬೇಕು ಎನ್ನುವ ಒತ್ತಾಯ ಬಹಳ ದಿನಗಳಿಂದ ಇದೆ. ರಾಜ್ಯ ಸರ್ಕಾರ ಲಿಂಗಾಯತ ಅಭಿವೃದ್ಧಿ ನಿಗಮ ರಚಿಸಿದಂತೆ ಒಕ್ಕಲಿಗರ ಅಭಿವೃದ್ಧಿ ನಿಗಮ ರಚಿಸಲು ನನ್ನ ಬೆಂಬಲವೂ ಇದೆ.

ಹೊಸ ದಿಗಂತ

| Date | 25-11-2020 |
|---|---|
| Page No | 12 |

ಹೊಸ ದಿಗಂತ

12

25 Nov 2020

## ಸಚಿವಾಲಯದ ಅಧಿಕಾರಿ, ನೌಕರರಿಗೆ ವಿಶೇಷ ಆಯುಕ್ತರ ಆದೇಶ

# 1 ದಿನ ಕೋವಿಡ್, ಒಂದು ದಿನ ಸಚಿವಾಲಯದ ಕೆಲಸ

**ಬೆಂಗಳೂರು:** ಕೋವಿಡ್-19 ಸೋಂಕು ತಡೆಗಟ್ಟುವ ಸಲುವಾಗಿ ನಿಯೋಜಿಸಲಾಗಿರುವ ಕರ್ನಾಟಕ ಸರ್ಕಾರ ಸಚಿವಾಲಯದ ಅಧಿಕಾರಿ ಹಾಗೂ ನೌಕರರು ಒಂದು ದಿನ ಪಾಲಿಕೆಯಲ್ಲಿ ಕೋವಿಡ್-19 ಕೆಲಸ ಕಾರ್ಯಗಳು ಹಾಗೂ ಮತ್ತೊಂದು ದಿನ ಸಚಿವಾಲಯ ಕರ್ತವ್ಯವನ್ನು ದಿನ ಬಿಟ್ಟು ದಿನ ನಿರ್ವಹಿಸುವಂತೆ ಬಿಬಿಎಂಪಿ ವಿಶೇಷ ಆಯುಕ್ತ( ಆಡಳಿತ) ಜೆ.ಮಂಜುನಾಥ್ ಆದೇಶ ಹೊರಡಿಸಿದ್ದಾರೆ.

ಕೊರೋನಾ ತಡೆಗಟ್ಟುವ ಸಲುವಾಗಿ ಬೆಂಗಳೂರು ನಗರದ ಸರ್ಕಾರದ ವಿವಿಧ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ ನೇಮಕ ಮಾಡಿಕೊಳ್ಳಲಾಗಿದೆ. ಸಚಿವಾಲಯದ ಅಧಿಕಾರಿ ಹಾಗೂ ನೌಕರರು ಕರ್ತವ್ಯವು ಸಚಿವಾಲಯಕ್ಕೆ ಅವಶ್ಯಕತೆ ಇರುವುದರಿಂದ ಸದರಿ ಕಚೇರಿ ಕೆಲಸಕ್ಕೆ ಹಿಂದುರುಗಿಸಲು ಕುರಿತು ಕೆ.ಡಿ.ಪಿ ಸಭೆಯಲ್ಲಿ ಚರ್ಚೆ ನಡೆಸಲಾಗಿದೆ. ಕರ್ನಾಟಕ ಸರ್ಕಾರದ ಸಚಿವಾಲಯ ಅಧಿಕಾರಿಗಳನ್ನು ಒಂದು ದಿನ ಕೋವಿಡ್-19 ನಿಯಂತ್ರಣ ಕರ್ತವ್ಯ, ಮತ್ತೊಂದು ದಿನ ಸಚಿವಾಲಯದ ಕರ್ತವ್ಯ ನಿರ್ವಹಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ನಿರ್ದೇಶನ ನೀಡಿದೆ.

ಪಾಲಿಕೆಯಲ್ಲಿ ಕೋವಿಡ್-19 ಕಾರ್ಯನಿರ್ವಹಿಸುತ್ತಿರುವ ಸಚಿವಾಲಯದ ಸಿಬ್ಬಂದಿಗಳು ಕೋವಿಡ್ ಕೆಲಸ ಹಾಗೂ ಸಚಿವಾಲಯದ ಕೆಲಸವನ್ನು ಯಾವ ಯಾವ ದಿನಗಳಂದು ನಿರ್ವಹಿಸಬೇಕೆಂದು ವಲಯ ಮಟ್ಟದ ಸಂಯೋಜಕರಿಂದ ಪ್ರತ್ಯೇಕವಾಗಿ ಆದೇಶ ಪಡೆದುಕೊಂಡು ಕರ್ತವ್ಯ ನಿರ್ವಹಿಸಲು ಸೂಚನೆ ನೀಡಲಾಗಿದೆ.



### 1267 ಸೋಂಕಿತರು ಆಸ್ಪತ್ರೆಯಿಂದ ಮನೆಗೆ

**ಬೆಂಗಳೂರು:** ನಗರದಲ್ಲಿ ಮಂಗಳವಾರ 927 ಜನರಿಗೆ ಕೊರೋನಾ ಸೋಂಕು ದೃಢಪಟ್ಟಿದೆ. 1267 ಸೋಂಕಿತರು ಆಸ್ಪತ್ರೆಯಿಂದ ಮನೆಗೆ ತೆರಳಿದ್ದು, 12 ಜನರು ಮೃತರಾಗಿದ್ದಾರೆ. ನಗರದಲ್ಲಿ ಒಟ್ಟು 3,65,317 ಸೋಂಕಿತರು ದೃಢಪಟ್ಟಿದ್ದು, ಇಲ್ಲಿಯವರೆಗೆ 4090 ಜನರು ಸೋಂಕಿಗೆ ಬಲಿಯಾಗಿದ್ದಾರೆ. ಇಲ್ಲಿಯವರೆಗೆ 3,43,169 ಜನರು ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ಕೋವಿಡ್ ನಿಗದಿತ ಆಸ್ಪತ್ರೆಗಳು ಹಾಗೂ ಆರೋಗ್ಯ ಕೇಂದ್ರಗಳು ಹಾಗೂ ಆರೈಕೆ ಕೇಂದ್ರಗಳು ಒಳಗೊಂಡಂತೆ 18,057 ಜನ ಸಕ್ರಿಯ ಸೋಂಕಿತರು ಚಿಕಿತ್ಸೆ ಪಡೆಯುತ್ತಿದ್ದಾರೆ. ಮಂಗಳವಾರದ ಬಿಬಿಎಂಪಿ ಕೋವಿಡ್ ವರದಿ ಪ್ರಕಾರ ಸಿಟಿಯಲ್ಲಿ ಒಟ್ಟು ಸಕ್ರಿಯ 2 ಕಂಟೈನ್ಮೆಂಟ್ ಜೋನ್‌ಗಳಿವೆ. ನಗರದ 11,42,785 ಜನರನ್ನು ಪ್ರಾಥಮಿಕ ಸಂಪರ್ಕಿತರನ್ನು ಗುರುತಿಸಲಾಗಿದ್ದು, ದ್ವಿತೀಯ ಸಂಪರ್ಕಿತರನ್ನು 13,30,728 ಜನರನ್ನು ಗುರುತಿಸಲಾಗಿದೆ. ನಗರದಲ್ಲಿ 42,03,349 ಜನರಿಗೆ ಕೊರೋನಾ ಪರೀಕ್ಷೆ ನಡೆಸಲಾಗಿದ್ದು, ಇದರಲ್ಲಿ ಪಾಸಿಟಿವ್ ಪ್ರಮಾಣ ಶೇ.8.69 ರಷ್ಟಿದೆ. ಕೊರೋನಾಕ್ಕೆ ಮೃತರಾಗುತ್ತಿರುವ ಪ್ರಮಾಣ ಶೇ.1.12ರಷ್ಟಿದ್ದು, ಗುಣಮುಖರಾಗುತ್ತಿರುವ ಪ್ರಮಾಣ ಶೇ.93.94 ರಷ್ಟಿದೆ.

ಹೊಸ ದಿಗಂತ

| Date | 25-11-2020 |
|---|---|
| Page No | 12 |

ಹೊಸ ದಿಗಂತ 12
25 Nov 2020

# ಮತದಾರರ ಪಟ್ಟಿ ನೋಂದಣಿಗೆ ಜಾಗೃತಿ

**ಬೆಂಗಳೂರು:** ಪಾಲಿಕೆ ವ್ಯಾಪ್ತಿಯಲ್ಲಿ 18 ವರ್ಷ ತುಂಬಿದ ಯಾರೊಬ್ಬರೂ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಹೆಸರು ನೋಂದಣಿ ಮಾಡಿಸುವಂತೆ ಘನತ್ಯಾಜ್ಯ ವಿಲೇವಾರಿ ಆಟೋಗಳ ಧ್ವನಿವರ್ಧಕಗಳ ಮೂಲಕ ಜಾಗೃತಿ ಮೂಡಿಸಬೇಕು ಎಂದು ರಾಜ್ಯ ಮತದಾರರ ಪಟ್ಟಿ ವೀಕ್ಷಕ ಜಿ. ಕುಮಾರ್ ನಾಯಕ್ ತಿಳಿಸಿದ್ದಾರೆ.

ಬಿಬಿಎಂಪಿ ಕೇಂದ್ರ ವ್ಯಾಪ್ತಿಯ ರಾಜರಾಜೇಶ್ವರಿನಗರ, ಶಿವಾಜಿನಗರ, ಶಾಂತಿನಗರ, ಗಾಂಧಿನಗರ, ರಾಜಾಜಿನಗರ, ಚಾಮರಾಜಪೇಟೆ ಹಾಗೂ ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ-2021ರ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಕೇಂದ್ರ ವಿಭಾಗದ ಎಲ್ಲ ಕ್ಷೇತ್ರಗಳಲ್ಲಿ ಮತದಾರರ ಪಟ್ಟಿಯಿಂದ ಹೊರಗುಳಿದ ಎಲ್ಲರನ್ನು ಗುರುತಿಸಿ ಪಟ್ಟಿಗೆ ಸೇರ್ಪಡೆ ಮಾಡಬೇಕು. ಈ ನಿಟ್ಟಿನಲ್ಲಿ ಜನರು ಕಚೇರಿಗಳಿಗೆ ತೆರಳುವ ಮುಂಚಿತವಾಗಿ ಬೆಳಗ್ಗೆ ತ್ಯಾಜ್ಯ ಸಂಗ್ರಹಿಸುವ ಆಟೋಗಳ ಮೂಲಕ ಅರಿವು ಮೂಡಿಸಬೇಕು ಎಂದು ಸೂಚಿಸಿದರು.

ಕ್ಷೇತ್ರವಾರು ಎಲ್ಲ ಮತಗಟ್ಟೆ ಮಟ್ಟದ ಅಧಿಕಾರಿಗಳು ಮತಗಟ್ಟೆಗಳ ಪಟ್ಟಿ ಹಾಗೂ ಒಟ್ಟು ಜನಸಂಖ್ಯೆ ಎಷ್ಟಿದೆ ಎಂಬ ಮಾಹಿತಿಯೊಂದಿಗೆ ತಾಳೆ ಮಾಡಿ, 18 ವರ್ಷ ತುಂಬಿದ ಯಾರೊಬ್ಬರೂ ಮತದಾರರ ಪಟ್ಟಿಗೆ ಸೇರ್ಪಡೆಯಾಗದೇ ಇರುವವರನ್ನು ಸೇರಿಸಬೇಕು. ಎಲ್ಲ ಕಡೆ ಹೆಚ್ಚು ಜಾಗೃತಿ ಮೂಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.ಪಾಲಿಕೆ ಅಪರ ಜಿಲ್ಲಾ ಚುನಾವಣಾ ಅಧಿಕಾರಿ ಹಾಗೂ ಪಾಲಿಕೆ ಆಡಳಿತ ವಿಭಾಗದ ವಿಶೇಷ ಆಯುಕ್ತ ಜೆ. ಮಂಜುನಾಥ್ ಮಾತನಾಡಿ, ಮತದಾರರ ಪಟ್ಟಿ ಹಾಗೂ ಎಲೆಕ್ಟರ್ಸ್ ಪಾಪ್ಯುಲೇಷನ್ ರೇಷಿಯೋ ಹೆಚ್ಚಳಕ್ಕೆ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ 4 ಭಾನುವಾರ ಮತದಾರರ ನೋಂದಣಿಗೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದಲ್ಲಿ ಕ್ಷೇಮಾಭಿವೃದ್ಧಿ ಸಂಘಗಳು ಮತ್ತು ಎನ್‌ಜಿಒಗಳ ಸಹಯೋಗದೊಂದಿಗೆ ಕೆಲಸ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

# ಪ್ರತ್ಯೇಕ ಘನತ್ಯಾಜ್ಯ ನಿರ್ವಹಣಾ ಮಂಡಳಿ ಸ್ಥಾಪಿಸಲು ಪಾಲಿಕೆ ಸಿದ್ಧತೆ!

**ಬೆಂಗಳೂರು:** ನಗರದ ತ್ಯಾಜ್ಯ ಉತ್ಪಾದನೆ ಪ್ರಮಾಣ ಹೆಚ್ಚಾಗುತ್ತಿದ್ದು, ಸಮರ್ಪಕ ನಿರ್ವಹಣೆಗೆ ಪ್ರತ್ಯೇಕ ಘನತ್ಯಾಜ್ಯ ನಿರ್ವಹಣಾ ಮಂಡಳಿ ಸ್ಥಾಪಿಸುವುದಕ್ಕೆ ಪಾಲಿಕೆ ಮುಂದಾಗಿದ್ದು, ವಾರದೊಳಗೆ ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದಕ್ಕೆ ಸಿದ್ಧತೆ ನಡೆಸಿದೆ.

ಈ ಕುರಿತು ಹೊಸದಿಗಂತದೊಂದಿಗೆ ಮಾತನಾಡಿದ ಬಿಬಿಎಂಪಿ ಆಯುಕ್ತ ಮಂಜುನಾಥ್ ಪ್ರಸಾದ್ ಅವರು, ಬಿಬಿಎಂಪಿ ವ್ಯಾಪ್ತಿ 800 ಚ.ಕಿ.ಮೀ ವರೆಗೆ ವಿಸ್ತರಣೆಯಾಗಿದ್ದು, ಸುಮಾರು 1.20 ಕೋಟಿ ಜನಸಂಖ್ಯೆ ಇಲ್ಲಿ ವಾಸಿವಾಗಿದ್ದಾರೆ. ಮೂಲ ಸೌಕರ್ಯ ಒದಗಿಸುವುದು ಸವಾಲಿನ ಕಾರ್ಯವಾಗಿದೆ. ಹೀಗಾಗಿ, ಜಲಮಂಡಳಿ, ಬೆಸ್ಕಾಂ ಮಾದರಿಯಲ್ಲಿ ಪ್ರತ್ಯೇಕ ಘನತ್ಯಾಜ್ಯ ನಿರ್ವಹಣಾ ಮಂಡಳಿ ನಿರ್ಮಾಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವುದಕ್ಕೆ ಸೂಚನೆ ನೀಡಿದ್ದಾರೆ.

ಈ ಹಿನ್ನೆಲೆಯಲ್ಲಿ ನಗರದಲ್ಲಿ ಉತ್ಪಾದನೆಯಾಗುತ್ತಿರುವ ತ್ಯಾಜ್ಯ, ನಿರ್ವಹಣೆಗೆ ಮಾಡುತ್ತಿರುವ ವೆಚ್ಚ, ಸಂಸ್ಕರಣಾ ಘಟಕಗಳು ನಿರ್ವಹಣೆ ಸೇರಿದಂತೆ ವಿವರವಾದ ಪ್ರಸ್ತಾವನೆ ಸಿದ್ಧಪಡಿಸಲಾಗುತ್ತಿದೆ. ಪಾಲಿಕೆ ಅಡಳಿತಾಧಿಕಾರಿಗಳಿಂದ ಅನುಮೋದನೆ ಪಡೆದು ಒಂದು ವಾರದೊಳಗೆ ಸರ್ಕಾರಕ್ಕೆ ಸಲ್ಲಿಸಲಾಗುವುದು. ಬಿಬಿಎಂಪಿ ವ್ಯಾಪ್ತಿಯಲ್ಲಿ ಸುಮಾರು 10 ಲಕ್ಷಕ್ಕೂ



ಅಧಿಕ ತ್ಯಾಜ್ಯ ಉತ್ಪಾದನಾ ಕೇಂದ್ರಗಳಿಂದ ಕಸ ಸಂಗ್ರಹಿಸಲಾಗುತ್ತಿದೆ. ಜತೆಗೆ ಮಾರುಕಟ್ಟೆಗಳು, ರಸ್ತೆಗಳು, ಉದ್ಯಾನಗಳು ಹಾಗೂ ಬ್ಲಾಕ್ ಸ್ಪಾಟ್‌ಗಳಿಂದ ಹೆಚ್ಚುವರಿ ತ್ಯಾಜ್ಯ ಉತ್ಪಾದನೆಯಾಗುತ್ತಿದೆ. ಈ ಎಲ್ಲ ತ್ಯಾಜ್ಯದ ವಿಲೇವಾರಿ ಮತ್ತು ನಿರ್ವಹಣೆಗೆ ಕೇವಲ 50 ಕೋಟಿ ರುಪಾಯಿ ವಾರ್ಷಿಕ ತೆರಿಗೆ ವಸೂಲಿ ಮಾಡಲಾಗುತ್ತಿದೆ. ಆದರೆ, ನಿರ್ವಹಣೆಗೆ ಸುಮಾರು ಒಂದು ಸಾವಿರ ಕೋಟಿ ರು. ಗಿಂತ ಅಧಿಕ ವೆಚ್ಚ ಮಾಡಲಾಗುತ್ತಿದೆ. ಆದರೂ ತ್ಯಾಜ್ಯ ಸಮಸ್ಯೆ ಪರಿಹಾರವಾಗುತ್ತಿಲ್ಲ. ಹಸಿ ಕಸವನ್ನು ಸಾವಯವ ಗೊಬ್ಬರ ಉತ್ಪಾದನೆ, ವಿದ್ಯುತ್ ಉತ್ಪಾದನೆಗೆ ಹಾಗೂ ಪ್ಲಾಸ್ಟಿಕ್‌ನ್ನು ಸಿಮೆಂಟ್ ಮತ್ತು ಡಾಂಬರ್ ನಿರ್ಮಾಣ ಕಾರ್ಯಕ್ಕೆ, ಮಾಂಸದ ತ್ಯಾಜ್ಯವನ್ನು ಮೀನಿನ ಆಹಾರ ಉತ್ಪಾದನೆಗೆ ಸೇರಿ ವಿವಿಧ ವಿಭಾಗದಲ್ಲಿ ಬಳಕೆ ಮಾಡಲಾಗುತ್ತಿದೆ. ಎಲ್ಲ ಆದಾಯ ಸಂಗ್ರಹಿಸಿ ನಿರ್ವಹಣೆ ಮಾಡಲು ಪಾಲಿಕೆಯ ಘನತ್ಯಾಜ್ಯ ನಿರ್ವಹಣಾ ವಿಭಾಗದಿಂದ ಪ್ರತ್ಯೇಕ ಸಂಸ್ಥೆಯಾಗಿ ಮಾಡುವುದು ಅಗತ್ಯವಾಗಿದೆ ಎಂದರು.

# ಹೈಜೀನ್ ಬ್ರ್ಯಾಂಡ್‌ಗೆ ಗಂಗೂಲಿ ಬ್ರ್ಯಾಂಡ್ ಅಂಬಾಸಿಡರ್

**ಬೆಂಗಳೂರು:** ಹೈಜೀನ್ ಬ್ರ್ಯಾಂಡ್ ಲಿವಿನ್‌ಗಾರ್ಡ್ ಎಜಿ ಮಾಸ್ಕ್‌ಗಳು ಮತ್ತು ಕೈಗವಸುಗಳಿಗೆ ಭಾರತೀಯ ಕ್ರಿಕೆಟ್ ನಿಯಂತ್ರಣಾ ಮಂಡಳಿಯ ಅಧ್ಯಕ್ಷ ಸೌರವ್ ಗಂಗೂಲಿ ಬ್ರ್ಯಾಂಡ್ ಅಂಬಾಸಿಡರ್ ಆಗಿದ್ದಾರೆ. ಲಿವಿನ್‌ಗಾರ್ಡ್‌ನ ಕ್ರಾಂತಿಕಾರಿ ಉತ್ಪನ್ನಗಳು ಅತ್ಯುನ್ನತ ರಕ್ಷಣೆ ಒದಗಿಸುವ ಸಾಮರ್ಥ್ಯ ಹೊಂದಿವೆ. ಸೀಮಿತ ಆವೃತ್ತಿಯ ಮಾಸ್ಕ್‌ಗಳು ಸ್ಪೋರ್ಟ್, ಪ್ರೋ ಮತ್ತು ಅಲ್ಟ್ರಾ ಎಂಬ ಮೂರು ವಿಧಗಳಲ್ಲಿ ಲಭ್ಯವಿವೆ. ಇವುಗಳನ್ನು 6 ತಿಂಗಳುಗಳವರೆಗೆ ಬಳಸಬಹುದು. ಲಿಮಿಟೆಡ್ ಎಡಿಶನ್ ಸೌರವ್ ಆಟೋಗ್ರಾಫ್ ಇರುವ ಮಾಸ್ಕ್ ಅನ್ನು ಡಿಸೆಂಬರ್ ತಿಂಗಳ ಕೊನೆಯಲ್ಲಿ ಬಿಡುಗಡೆ ಮಾಡಲಿದ್ದು, ನೈಕಾ ಮತ್ತು ಫ್ಲಿಪ್‌ಕಾರ್ಟ್‌ನಲ್ಲಿ 1490 ರೂಪಾಯಿಗೆ ಲಭ್ಯವಿದೆ. ales.india@livinguard.comಗೆ ಇಮೇಲ್ ಕಳುಹಿಸುವ ಮೂಲಕ ಲಭ್ಯರುತ್ತದೆ.



ಜನದನಿಯ ಸಾರಥಿ
ವಾರ್ತಾ ಭಾರತಿ

| Date | 25-11-2020 |
|---|---|
| Page No | 1 |


# ಆಪರೇಷನ್ ಲಸಿಕೆಗೆ ರೆಡಿ

## ಕೊರೊನಾ ಲಸಿಕೆ ವಿತರಣೆಗೆ ರಾಜ್ಯ ಸಜ್ಜು | ಸಮರೋಪಾದಿಯಲ್ಲಿ ನಡೆಯಲಿದೆ ಪ್ರಕ್ರಿಯೆ
## ಬೂತ್ ಮಟ್ಟದಲ್ಲಿ ವ್ಯಾಕ್ಸಿನ್ ಹಂಚಿಕೆ | ಸಿಎಂ ಬಿಎಸ್‌ವೈ ನೇತೃತ್ವದಲ್ಲಿ ಚಾಲನಾ ಸಮಿತಿ

**ಬೆಂಗಳೂರು:** ಇಡೀ ಮನುಕುಲವನ್ನೇ ಬೆಚ್ಚಿಬೀಳಿಸಿರುವ 'ಕೊರೊನಾ ವೈರಸ್'ಗೆ ಲಸಿಕೆಯ ಬ್ರಹ್ಮಾಸ್ತ್ರ ಸಿದ್ಧವಾಗುತ್ತಿರುವಂತೆಯೇ, ದೇಶವಾಸಿಗಳಿಗೆ ಸಮರೋಪಾದಿಯಲ್ಲಿ ಲಸಿಕೆ ವಿತರಿಸುವ 'ಆಪರೇಷನ್ ಲಸಿಕೆ' ಪ್ರಕ್ರಿಯೆಗೆ ಕೇಂದ್ರ-ರಾಜ್ಯ ಸರ್ಕಾರಗಳು ಸನ್ನದ್ಧವಾಗಿವೆ.

ದೇಶ- ವಿದೇಶಗಳಲ್ಲಿ ಕೊರೊನಾ ಹತ್ತಿಕ್ಕುವಂಥ ಲಸಿಕೆಗಳು ಅಭಿವೃದ್ಧಿಯ ಹಂತದಲ್ಲಿವೆ. ಅವುಗಳ ಬಳಕೆಗೆ ಸರ್ಕಾರದ ಒಪ್ಪಿಗೆಯ ಮುದ್ರೆ ಬೀಳುತ್ತಿದ್ದಂತೆ ದೇಶಾದ್ಯಂತ ಲಸಿಕೆ ಹಂಚಿಕೆಯ ಪ್ರಕ್ರಿಯೆ ವೇಗ ಪಡೆದುಕೊಳ್ಳಲಿದೆ. ರಾಜ್ಯ ಸರ್ಕಾರವೂ ವ್ಯಾಕ್ಸಿನ್ ಸಂಗ್ರಹ ಹಾಗೂ ಕ್ಷಿಪ್ರ ಹಂಚಿಕೆಗೆ ಸಜ್ಜಾಗಿದೆ.

ರಾಜ್ಯ ಮಟ್ಟದಲ್ಲಿ ಮುಖ್ಯಮಂತ್ರಿ ಯಡಿಯೂರಪ್ಪ ನೇತೃತ್ವದಲ್ಲಿ ಚಾಲನಾ ಸಮಿತಿ ರಚನೆಯಾಗಲಿದ್ದು ಚುನಾವಣಾ ಮಾದರಿಯಲ್ಲಿ ಬೂತ್ ಮಟ್ಟದಲ್ಲಿ ಲಸಿಕೆ ಹಂಚಿಕೆ ಮಾಡಲು ಸರ್ಕಾರ ನಿರ್ಧರಿಸಿದೆ. ಮೊದಲ ಹಂತದಲ್ಲಿ ತಮ್ಮ ಸಿಬ್ಬಂದಿಗೆ ಲಸಿಕೆ ಪಡೆಯಲು 24 ಸಾವಿರಕ್ಕೂ ಅಧಿಕ ಆರೋಗ್ಯ ಕೇಂದ್ರಗಳು ಆರೋಗ್ಯ ಕಾರ್ಯಕರ್ತರ ಮಾಹಿತಿ ನೀಡುವ ಮೂಲಕ ನೋಂದಣಿ ಮಾಡಿಕೊಂಡಿವೆ. ▶ 7ನೇ ಪುಟಕ್ಕೆ



ನವದೆಹಲಿಯಲ್ಲಿ ಕೊರೊನಾ ಸುರಕ್ಷತೆಗೆ ಸಂಬಂಧಿಸಿದ ಭಿತ್ತಿಚಿತ್ರದ ಮುಂದೆ ಮಾಸ್ಕ್ ಧರಿಸಿದ ಯುವತಿ ಕ್ಯಾಮೆರಾ ಕಣ್ಣಲ್ಲಿ ಕಂಡಿದ್ದು ಹೀಗೆ.

### ಮೂರು ಲಕ್ಷಕ್ಕೂ ಅಧಿಕ ಮಂದಿಗೆ ಲಸಿಕೆ




**ಮೊ**ದಲ ಹಂತದ ಲಸಿಕೆಯನ್ನು ಆರೋಗ್ಯ ಕಾರ್ಯಕರ್ತರಿಗೆ ನೀಡಲು ಕೇಂದ್ರ ಸರ್ಕಾರ ಸೂಚನೆ ನೀಡಿದೆ. ಸದ್ಯ ರಾಜ್ಯದಲ್ಲಿ ಆರೋಗ್ಯ ಇಲಾಖೆ ಖಾಯಂ ಸಿಬ್ಬಂದಿ, ಗುತ್ತಿಗೆ, ಹೊರ ಗುತ್ತಿಗೆ ನೌಕರರು, ಖಾಸಗಿ ಆಸ್ಪತ್ರೆಗಳ ವೈದ್ಯರು, ಸಿಬ್ಬಂದಿ, ಆಶಾ ಮತ್ತು ಆರೋಗ್ಯ ಕಾರ್ಯಕರ್ತರನ್ನು ಸೇರಿಸಿ ಅಂದಾಜು 3.4 ಲಕ್ಷಕ್ಕೂ ಅಧಿಕ ಮಂದಿ ಆರೋಗ್ಯ ಕಾರ್ಯಕರ್ತರಿದ್ದಾರೆ.

ಲಸಿಕೆ ಕೇವಲ 1 ವರ್ಷದ ರಕ್ಷಕ »10

### ವಿತರಣೆಗೆ ಸನ್ನದ್ಧರಾಗಿ

'**ಪ್ರ**ತಿಯೊಬ್ಬ ನಾಗರಿಕನಿಗೂ ಲಸಿಕೆ ಸಿಗುವಂತೆ ಮಾಡುವುದು ರಾಷ್ಟ್ರೀಯ ಬದ್ಧತೆಯಾಗಿದೆ. ಕೊರೊನಾಗೆ ಲಸಿಕೆ ಅಭಿವೃದ್ಧಿಪಡಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಎಲ್ಲ ರಾಜ್ಯಗಳೂ ಕೂಡಲೇ ಶೀತಲಗೃಹ ನಿರ್ಮಾಣದಂಥ ಅಗತ್ಯ ವ್ಯವಸ್ಥೆಗಳೊಂದಿಗೆ ಸನ್ನದ್ಧರಾಗಿ.'

**ರಾಜ್ಯಗಳಿಗೆ ಪ್ರಧಾನಿ ಮೋದಿ ಕರೆ**



ಕರ್ನಾಟಕ ಸೇರಿದಂತೆ 8 ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ನೀಡಿದ ಕರೆಯಿದು.

ಕೊರೊನಾಸೋಂಕಿನ ವ್ಯಾಪಿಸುವಿಕೆಗೆ ಅಂತ್ಯ ಹಾಡುವ ನಿಟ್ಟಿನಲ್ಲಿ ಲಸಿಕೆ ಅಭಿವೃದ್ಧಿ ಪ್ರಕ್ರಿಯೆ ವೇಗವಾಗಿ ಸಾಗುತ್ತಿರುವ ನಡುವೆಯೇ ಪ್ರಧಾನಿ ಮೋದಿ ಅವರು ವಿವಿಧ ರಾಜ್ಯಗಳ ಸಿಎಂಗಳೊಂದಿಗೆ ವರ್ಚುವಲ್ ಸಭೆ ನಡೆಸಿ ಮಾತನಾಡಿದ್ದಾರೆ.

'ಲಸಿಕೆಯ ಬಗ್ಗೆ ಪರಿಪೂರ್ಣ ಮಾಹಿತಿ ಇನ್ನೂ ಸಿಕ್ಕಿಲ್ಲ, ಒಂದು ಡೋಸ್ ಕೊಡಬೇಕೋ, ಎರಡೋ, ಮೂರೋ ಎಂಬ ಬಗ್ಗೆಯೂ ಗೊತ್ತಾಗಿಲ್ಲ, ಲಸಿಕೆಯ ಬೆಲೆ ಎಷ್ಟು ಎಂಬುದೂ ನಿರ್ಧಾರವಾಗಿಲ್ಲ, ಆದರೆ, ಲಸಿಕೆ ಪ್ರಕ್ರಿಯೆ ನಡೆಯುತ್ತಿದೆ. ಎಲ್ಲ ರಾಜ್ಯಗಳೂ ಅದಕ್ಕೆ ಅಗತ್ಯವಾದ ಶೀತಲೀಕರಣ, ದಾಸ್ತಾನು ವ್ಯವಸ್ಥೆ ಮಾಡಿಕೊಳ್ಳಬೇಕು' ಎಂದು ಮೋದಿ ಹೇಳಿದ್ದಾರೆ.

**ಸುರಕ್ಷತೆಯೇ ಮುಖ್ಯ:** ನಮಗೆ ವೇಗದಷ್ಟೇ ಸುರಕ್ಷತೆಯೂ ಮುಖ್ಯ. ಲಸಿಕೆಯು ಸಮಯಕ್ಕೆ ಸರಿಯಾಗಿ ಜನರನ್ನು ತಲುಪುವುದರ ಜೊತೆಗೆ ಅದು ಸುರಕ್ಷಿತವೂ ಆಗಿರುವಂತೆ ನೋಡಿಕೊಳ್ಳುತ್ತೇವೆ. ▶ 7ನೇ ಪುಟಕ್ಕೆ

> 4 ವಾರಗಳಲ್ಲಿ ಕೊರೊನಾಗೆ ಲಸಿಕೆ ಬರಬಹುದು. ಜಿಲ್ಲಾಮಟ್ಟದಲ್ಲಿ ಲಸಿಕೆ ಹಂಚಲು ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ. ಅದಕ್ಕೆ ಅಗತ್ಯವಾದ ಎಲ್ಲ ತಯಾರಿಯೂ ನಡೆದಿದೆ.
>
> • ಬಿ.ಎಸ್. ಯಡಿಯೂರಪ್ಪ
> ಮುಖ್ಯಮಂತ್ರಿ

### ರಾಜ್ಯದಲ್ಲಿ ಲಸಿಕೆ ವ್ಯಾಪ್ತಿಗೆ ಬರುವವರು

**50,000**
ವೈದ್ಯರು ಸೇರಿದಂತೆ ಆರೋಗ್ಯ ಇಲಾಖೆ ಸಿಬ್ಬಂದಿ

**27,000**
ಐಎಂಎ ರಾಜ್ಯ ಘಟಕದ ನೋಂದಾಯಿತ ವೈದ್ಯರು

**90,000**
ಖಾಸಗಿ ಆಸ್ಪತ್ರೆಗಳ ಸಹಾಯಕ ವೈದ್ಯಕೀಯ ಸಿಬ್ಬಂದಿ

**20,000**
ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆ ಗುತ್ತಿಗೆ, ಹೊರ ಗುತ್ತಿಗೆ ನೌಕರರು

**42,000**
ಆಶಾ ಕಾರ್ಯಕರ್ತರು

**1.1 ಲಕ್ಷ**
ಅಂಗನವಾಡಿ ಕಾರ್ಯಕರ್ತರು ಮತ್ತು ಸಹಾಯಕರು

### 29,451 ಲಸಿಕೆ ವಿತರಣೆ ಕೇಂದ್ರ: ಸುಧಾಕರ್

ಈಗಾಗಲೇ 29,451 ಲಸಿಕೆ ವಿತರಣೆ ಕೇಂದ್ರಗಳನ್ನು ಗುರುತಿಸಲಾಗಿದೆ. ರಾಜ್ಯ ಕೊರೊನಾ ಕಾರ್ಯಪಡೆ ಸಭೆಯಲ್ಲಿ ಚರ್ಚಿಸಿ ಲಸಿಕೆ ಸಂಗ್ರಹ -ವಿತರಣೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್ ಮಾಹಿತಿ ನೀಡಿದ್ದಾರೆ. ಲಸಿಕೆ ವಿತರಣೆಗೆ 10,008 ವ್ಯಾಕ್ಸಿನೇಟರ್(ಲಸಿಕೆ ನೀಡುವ)ಗಳನ್ನು ಗುರುತಿಸಲಾಗಿದೆ. ಮೊದಲ ಹಂತದಲ್ಲಿ ವಿತರಿಸುವ ನಿಟ್ಟಿನಲ್ಲಿ ಸರ್ಕಾರಿ ಆರೋಗ್ಯ ಕೇಂದ್ರಗಳ ಸಿಬ್ಬಂದಿ, ಆರೋಗ್ಯ ಕಾರ್ಯಕರ್ತರ ಮಾಹಿತಿ ದಾಖಲಿಸಲಾಗಿದೆ. ಶೇ.80 ರಷ್ಟು ಖಾಸಗಿ ಆಸ್ಪತ್ರೆಗಳು ಮಾಹಿತಿ ನೀಡಿದ್ದು ಶೇ.20 ಆಸ್ಪತ್ರೆಗಳು ವಾರದೊಳಗೆ ಮಾಹಿತಿ ನೀಡಲಿವೆ ಎಂದು ತಿಳಿಸಿದ್ದಾರೆ. ಹೊಸದಾಗಿ ಬೆಂಗಳೂರು ನಗರ, ಶಿವಮೊಗ್ಗ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಪ್ರಾದೇಶಿಕ ಲಸಿಕೆ ಸಂಗ್ರಹ ಕೇಂದ್ರಗಳನ್ನು ಆರಂಭಿಸಲು ಪ್ರಸ್ತಾಪಿಸಲಾಗಿದೆ ಎಂದೂ ಮಾಹಿತಿ ನೀಡಿದ್ದಾರೆ.



### ಬೂತ್ ಮಟ್ಟದಲ್ಲಿ ಲಸಿಕೆ ಸಂಗ್ರಹ: ಬೊಮ್ಮಾಯಿ

ರಾಜ್ಯದಲ್ಲಿ ಲಸಿಕೆ ವಿತರಣೆಗೆ ಚುನಾವಣಾ ಮಾದರಿಯಲ್ಲಿ, ಬೂತ್ ಮಟ್ಟದಲ್ಲಿ ಲಸಿಕೆ ಸಂಗ್ರಹಕ್ಕೆ ವ್ಯವಸ್ಥೆ ಮಾಡಿಕೊಳ್ಳಲು ನಿರ್ಧರಿಸಲಾಗಿದ್ದು, ರಾಜ್ಯ ಮಟ್ಟದಲ್ಲಿ ಮುಖ್ಯಮಂತ್ರಿ ನೇತೃತ್ವದಲ್ಲಿ ಚಾಲನಾ ಸಮಿತಿ, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು, ತಾಲೂಕು ಮಟ್ಟದಲ್ಲಿ ಲಸಿಕೆ ಹಂಚಿಕೆ ಸಮಿತಿ ರಚಿಸಲಾಗುವುದು ಎಂದು ಗೃಹ ಸಚಿವ ಬಸವರಾಜ್ ಬೊಮ್ಮಾಯಿ ಹೇಳಿದ್ದಾರೆ. ಲಸಿಕೆ ಹಂಚಿಕೆಗೆ ಸ್ವಯಂ ಸೇವಕರು, ಆರೋಗ್ಯ ಕಾರ್ಯಕರ್ತರಿಗೆ ತರಬೇತಿ ನೀಡಲಾಗುವುದು. ಚುನಾವಣಾ ಸಿಬ್ಬಂದಿಗೆ ನೀಡಿದಂತೆ ಆರೋಗ್ಯ ಕಾರ್ಯಕರ್ತರಿಗೆ ತರಬೇತಿ ನೀಡಲಾಗುವುದು. ಲಸಿಕೆ ಪಡೆಯುವವರ ಬಗ್ಗೆ ಡಿಜಿಟಲ್ ಮಾಹಿತಿ ಸಂಗ್ರಹಿಸಿಟ್ಟುಕೊಳ್ಳಲು ಯೋಜನೆ ರೂಪಿಸಲಾಗುತ್ತಿದ್ದು, ಪ್ರಥಮ ಬಾರಿ ಒಂದು ಡೋಸ್ ಕೊಟ್ಟ ನಂತರ 2ನೇ ಬಾರಿ ಕೊಡಲು ಮಾಹಿತಿ ಸಂಗ್ರಹಿಸಲಾಗುವುದು ಎಂದಿದ್ದಾರೆ.



ಜನದನಿಯ ಸಾರಥಿ
ವಾರ್ತಾ ಭಾರತಿ

| Date | 25-11-2020 |
| --- | --- |
| Page No | 3 |

# ಆಪರೇಷನ್ ಲಸಿಕೆಗೆ ರೆಡಿ

**1ನೇ ಪುಟದಿಂದ ▸** **ಲಸಿಕೆ ಸಂಗ್ರಹಕ್ಕೆ ವ್ಯವಸ್ಥೆ:** ರಾಜ್ಯದಲ್ಲಿ ಲಸಿಕೆ ಸಂಗ್ರಹ ಮತ್ತು ವಿತರಣೆಗೆ 2,855 ಕೋಲ್ಡ್ ಚೇನ್ ಕೇಂದ್ರ ಲಭ್ಯವಿದೆ. ಜತೆಗೆ ಹತ್ತು ವಾಕ್ ಇನ್ ಕೂಲರ್ ಮತ್ತು ನಾಲ್ಕು ವಾಕ್ ಇನ್ ಫ್ರೀಜರ್ ಇವೆ. ಹೆಚ್ಚುವರಿಯಾಗಿ ಕೇಂದ್ರ ಆರೋಗ್ಯ ಸಚಿವಾಲಯವು ಮೂರು ವಾಕ್ ಇನ್ ಕೂಲರ್, ಎರಡು ವಾಕ್ ಇನ್ ಫ್ರೀಜರ್ ನೀಡಲಿದೆ. ಇದರಿಂದ ಶೀಘ್ರ, ಸುಲಭವಾಗಿ ಲಸಿಕೆ ಸಾಗಣೆ ಮತ್ತು ವಿತರಣೆ ಸಾಧ್ಯ. ಜತೆಗೆ ಪಶು ಸಂಗೋಪನೆ ಇಲಾಖೆಯಲ್ಲಿ ಲಭ್ಯವಿರುವ ಕೋಲ್ಡ್ ಸ್ಟೋರೇಜ್ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆಯಲಾಗಿದೆ.

**ಕೇಂದ್ರದ ಮಾಹಿತಿ ನೆರವಿಗೆ ಮನವಿ :** ಕೋಲ್ಡ್ ಸ್ಟೋರೇಜ್ ಮತ್ತು ಸಂಗ್ರಹಕ್ಕೆ ಸಂಬಂಧಿಸಿ, ಡೋಸ್‌ಗಳು ಮತ್ತಿತರ ಮಾಹಿತಿ ಅಗತ್ಯವಿದೆ. ಈ ಮಾಹಿತಿಯನ್ನು ಶೀಘ್ರ ಒದಗಿಸುವಂತೆ ಕೇಂದ್ರ ಆರೋಗ್ಯ ಸಚಿವಾಲಯಕ್ಕೆ ಕೋರಲಾಗಿದೆ. ಕೇಂದ್ರ ಸರ್ಕಾರ ಈಗಾಗಲೇ ಡೀಪ್ ಫ್ರೀಜರ್, ರೆಫ್ರಿಜರೇಟರ್‌ಗಳನ್ನು ಮಂಜೂರು ಮಾಡಿದೆ. ಹೆಚ್ಚುವರಿ ಅಗತ್ಯಗಳ ಕುರಿತು ಕೇಂದ್ರಕ್ಕೆ ಮಾಹಿತಿ ನೀಡಲಾಗಿದೆ. ಲಸಿಕೆ ಕಾರ್ಯಕ್ರಮಕ್ಕೆ ಅಗತ್ಯವಿರುವ ಡ್ರೈ ಸ್ಟೋರೇಜ್ ಬಗ್ಗೆಯೂ ನಿರ್ಧಾರ ಕೈಗೊಳ್ಳಬೇಕಿದೆ.

**24 ಸಾವಿರ ಆರೋಗ್ಯ ಕೇಂದ್ರ:** ರಾಜ್ಯದಲ್ಲಿ ಸರ್ಕಾರಿ ಮತ್ತು ಖಾಸಗಿ ವಲಯದ ಒಟ್ಟು 28,421 ಆರೋಗ್ಯ ಕೇಂದ್ರಗಳಿದ್ದು, ಈಗಾಗಲೇ 24 ಸಾವಿರ ಕೇಂದ್ರಗಳು ನೋಂದಣಿಯಾಗಿವೆ. ಈ ಪೈಕಿ 3,076 ಸರ್ಕಾರಿ ವಲಯದ ಆರೋಗ್ಯ ಕೇಂದ್ರ, 21,000ಕ್ಕೂ ಅಧಿಕ ಖಾಸಗಿ ಆರೋಗ್ಯ ಕೇಂದ್ರಗಳಿವೆ. ಈಗಾಗಲೇ ಸರ್ಕಾರಿ ವಲಯದ ಸಂಪೂರ್ಣ ಮಾಹಿತಿ ಲಭ್ಯವಾಗಿದ್ದು, 4,000ಕ್ಕೂ ಅಧಿಕ (ಶೇ.19 ರಷ್ಟು) ಖಾಸಗಿ ಆರೋಗ್ಯ ಕೇಂದ್ರಗಳು ಇಂದಿಗೂ ಮಾಹಿತಿ ನೀಡಿಲ್ಲ. ಅಕ್ಟೋಬರ್ 20ರಿಂದಲೇ ಜಿಲ್ಲಾಮಟ್ಟದಲ್ಲಿ ನೋಂದಣಿ ಪ್ರಕ್ರಿಯ ಆರಂಭವಾಗಿತ್ತು.

ಆರೋಗ್ಯ ಇಲಾಖೆಯು ಜಿಲ್ಲಾಮಟ್ಟದಲ್ಲಿ ನೋಂದಾಯಿತ ಎಲ್ಲಾ ಆರೋಗ್ಯ ಕೇಂದ್ರಗಳು ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಅಧಿಕಾರಿ (ಆರ್‌ಸಿಎಚ್‌ಒ) ಬಳಿ ಮಾಹಿತಿ ಸಲ್ಲಿಸುವಂತೆ ಸುತ್ತೋಲೆ ಹೊರಡಿಸಿತ್ತು. ಆ ಅಧಿಕಾರಿಯೂ ಸಿಬ್ಬಂದಿಯ ಮಾಹಿತಿಯನ್ನು ಕೇಂದ್ರ ಸರ್ಕಾರದ ಅಧಿಕೃತ ಆನ್‌ಲೈನ್ ಪೋರ್ಟಲ್‌ಗೆ ಸೇರಿಸಿದ್ದಾರೆ ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

## ವಿತರಣೆಗೆ ಸನ್ನದ್ಧರಾಗಿ

**1ನೇ ಪುಟದಿಂದ ▸** ಭಾರತವು ತನ್ನ ನಾಗರಿಕರಿಗಾಗಿ ಪಡೆಯುವ ಕೋವಿಡ್ ಲಸಿಕೆಯು ಎಲ್ಲ ವೈಜ್ಞಾನಿಕ ಮಾನದಂಡಗಳ ಆಧಾರದಲ್ಲೂ ಸುರಕ್ಷಿತವಾಗಿರುತ್ತದೆ. ಲಸಿಕೆ ವಿತರಣೆ ಕಾರ್ಯತಂತ್ರವನ್ನು ರಾಜ್ಯಗಳ ಸಾಮೂಹಿಕ ಸಹಕಾರದೊಂದಿಗೆ ರೂಪಿಸಲಾಗುತ್ತದೆ. ರಾಜ್ಯ ಸರ್ಕಾರಗಳು ಕೂಡ ಕೋಲ್ಡ್ ಸ್ಟೋರೇಜ್ ವ್ಯವಸ್ಥೆಗಳನ್ನು ಸಿದ್ಧಪಡಿಸುವ ಕಾರ್ಯ ಆರಂಭಿಸಬೇಕು ಎಂದಿದ್ದಾರೆ. ಲಸಿಕೆ ಅಭಿವೃದ್ಧಿಗೆ ಸಂಬಂಧಿಸಿದ ಪ್ರತಿಯೊಂದು ಹೆಜ್ಜೆಯನ್ನೂ ಸರ್ಕಾರ ಟ್ರ್ಯಾಕ್ ಮಾಡುತ್ತಿದೆ. ಭಾರತದ ಲಸಿಕೆ ತಯಾರಕರು ಮತ್ತು ಉತ್ಪಾದಕರೊಂದಿಗೆ ನಾವು ಸಂಪರ್ಕದಲ್ಲಿದ್ದೇವೆ. ಜತೆಗೆ, ಜಾಗತಿಕ ರೆಗ್ಯುಲೇಟರ್‌ಗಳು, ಇತರೆ ದೇಶಗಳು, ಬಹುರಾಷ್ಟ್ರೀಯ ಸಂಸ್ಥೆಗಳು, ಅಂತಾರಾಷ್ಟ್ರೀಯ ಕಂಪನಿಗಳೊಂದಿಗೆ ಕೂಡ ನಾವು ನಿರಂತರ ಸಂಪರ್ಕದಲ್ಲಿದ್ದೇವೆ ಎಂದಿದ್ದಾರೆ.

ಸಮಾಜದ ಕಟ್ಟಕಡೆಯ ವ್ಯಕ್ತಿಯವರೆಗೂ ಲಸಿಕೆ ತಲುಪುವಂತೆ ಮಾಡಲು ನೀವೇನು ಯೋಜನೆ ಹಾಕಿಕೊಂಡಿದ್ದೀರಿ ಎಂಬ ಬಗ್ಗೆ ವಿಸ್ತೃತವಾದ ಮಾಹಿತಿಯನ್ನು ನೀಡುವಂತೆಯೂ ರಾಜ್ಯಗಳಿಗೆ ಸೂಚಿಸಿದ್ದಾರೆ. ನಿಮ್ಮ ಅಭಿಪ್ರಾಯಗಳು ಹಾಗೂ ಅನುಭವಗಳು ಕೂಡ ಮೌಲ್ಯಯುತವಾದ ಕಾರಣ, ನೀವು ನೀಡುವ ಈ ಮಾಹಿತಿಯು ಸೂಕ್ತ ನಿರ್ಧಾರ ಕೈಗೊಳ್ಳಲು ನಮಗೆ ನೆರವಾಗಬಹುದು. ಆದರೆ, ಯಾರು ಕೂಡ ತಮ್ಮ ಅಭಿಪ್ರಾಯವನ್ನು ಇನ್ನೊಬ್ಬರ ಮೇಲೆ ಹೇರುವಂತಿಲ್ಲ, ಎಲ್ಲರೂ ಒಗ್ಗಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದೂ ಹೇಳಿದ್ದಾರೆ.

ಜನದನಿಯ ಸಾರಥಿ
ವಾರ್ತಾ ಭಾರತಿ

| Date | 25-11-2020 |
| --- | --- |
| Page No | 4 |

# ಲಸಿಕೆ ಕೇವಲ 1 ವರ್ಷದ ರಕ್ಷಕ!

## 9- 12 ತಿಂಗಳು ಮಾತ್ರ ನಮ್ಮನ್ನು ಕಾಪಾಡುತ್ತೆ: ಏಮ್ಸ್ ಮುಖ್ಯಸ್ಥ

## 2023ರವರೆಗೂ ಕೊರೊನಾ ಸೋಂಕು ತೊಲಗುವುದೇ ಅನುಮಾನ

**ನವದೆಹಲಿ:** ಇನ್ನೇನು ಕೆಲವೇ ತಿಂಗಳು, ಕೊರೊನಾಕ್ಕೆ ಲಸಿಕೆ ಬರುತ್ತೆ. ಒಮ್ಮೆ ಲಸಿಕೆ ತೆಗೆದುಕೊಂಡರೆ ಜೀವನಪರ್ಯಂತ ಅದು ನಮ್ಮನ್ನು ಕೊರೊನಾದಿಂದ ಕಾಪಾಡುತ್ತದೆಯಾ? ಖಂಡಿತಾ ಇಲ್ಲ!

ಲಸಿಕೆ ಕುರಿತಾದ ಈ ಪ್ರಶ್ನೆಗೆ ನವದೆಹಲಿಯ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ (ಏಮ್ಸ್) ನಿರ್ದೇಶಕ ಡಾ. ರಣದೀಪ್ ಗುಲೇರಿಯಾ ಸ್ಪಷ್ಟ ಉತ್ತರ ಮುಂದಿಟ್ಟಿದ್ದಾರೆ. 'ಲಸಿಕೆಗಳು ನಮ್ಮನ್ನು ಕೇವಲ 9 ತಿಂಗಳಿಂದ 1 ವರ್ಷಗಳವರೆಗೆ ಮಾತ್ರವೇ ಕೊರೊನಾದಿಂದ ರಕ್ಷಿಸಲು ಸಮರ್ಥವಾಗಿರುತ್ತವೆ' ಎನ್ನುತ್ತಾರೆ, ಗುಲೇರಿಯಾ.

**ಕೊರೊನಾ ಕಣ್ಮರೆಯಾಗದು:** 'ಕೊರೊನಾ ಜಗತ್ತಿನಿಂದ ಕಣ್ಮರೆ ಆಗುವುದಿಲ್ಲ, ಕೆಲ ವರ್ಷಗಳವರೆಗೂ ಇದನ್ನು ನಾವು ಸಂಪೂರ್ಣ ನಿರ್ಮೂಲನೆ ಮಾಡುವುದು ಅಸಾಧ್ಯ. ಇದೊಂದು ಸೌಮ್ಯ ರೋಗವಾಗಿ ನಮ್ಮೊಂದಿಗೆ ಇರುವ ಸಾಧ್ಯತೆಯೇ ಅಧಿಕ' ಎಂದಿದ್ದಾರೆ. '2023ರ ವೇಳೆಗೆ ಕೊರೊನಾ ಸಾಂಕ್ರಾಮಿಕ ತಗ್ಗಬಹುದು. ಆದರೂ, ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯು ಎಚ್‌ಒ) 2023ಕ್ಕೂ ಮೊದಲೇ ಕೊರೊನಾ ಅಂತ್ಯ ಘೋಷಿಸಲು ಶ್ರಮಪಡುತ್ತಿದೆ' ಎಂದು ಹೇಳಿದ್ದಾರೆ.




## ಭಾರತಕ್ಕೆ ಆಕ್ಸ್‌ಫರ್ಡ್ ಲಸಿಕೆಯೇ ಸೂಕ್ತ?



'ಶೇ.60- 90ರಷ್ಟು ಪರಿಣಾಮಕಾರತ್ವ ಹೊಂದಿರುವ ಆಕ್ಸ್‌ಫರ್ಡ್ ವಿವಿ- ಆಸ್ಟ್ರಾಜೆನೆಕಾ ಲಸಿಕೆ ಭಾರತಕ್ಕೆ ಎಲ್ಲ ರೀತಿಯಿಂದಲೂ ಸೂಕ್ತ. ಆದರೆ, ಇದನ್ನು ಈಗಲೇ ಅಂದಾಜಿಸುವುದು ಕಷ್ಟ ಎಂದು ತಜ್ಞರು 'ಪಿಟಿಐ' ಜತೆಗೆ ಅನಿಸಿಕೆ ಹಂಚಿಕೊಂಡಿದ್ದಾರೆ. 'ಮಾಡೆರ್ನಾ, ಫೈಜರ್ ಅಥವಾ ಸ್ಪುಟ್ನಿಕ್-5ಕ್ಕೆ ಹೋಲಿಸಿದಲ್ಲಿ ಆಕ್ಸ್‌ಫರ್ಡ್ ವಿವಿ ಸಿದ್ಧಪಡಿಸುತ್ತಿರುವ ಲಸಿಕೆ ಭಾರತಕ್ಕೆ ಹೆಚ್ಚು ಕಾರ್ಯಸಾಧ್ಯವಾಗುವ ಆಯ್ಕೆ' ಎಂದಿದ್ದಾರೆ. 'ಬೇರೆಲ್ಲ ಲಸಿಕೆಗಳಿಗೆ ಹೋಲಿಸಿದಲ್ಲಿ ಆಕ್ಸ್‌ಫರ್ಡ್ ಲಸಿಕೆಗೆ ಕಡಿಮೆ ದರವಿದೆ. ಅಲ್ಲದೆ ಫೈಜರ್- ಬಯೋಎನ್‌ಟೆಕ್ ಸಂಗ್ರಹಕ್ಕೆ -70 ಡಿಗ್ರಿ, ಸ್ಪುಟ್ನಿಕ್ 5ಕ್ಕೆ -20 ಡಿಗ್ರಿ, ಮಾಡೆರ್ನಾಗೆ -22 ಡಿಗ್ರಿ ಕನಿಷ್ಠ ಉಷ್ಣಾಂಶ ಕಾಪಾಡಿಕೊಳ್ಳಬೇಕು. ಆದರೆ, ಆಕ್ಸ್‌ಫರ್ಡ್ ಲಸಿಕೆಯನ್ನು ಸಾಮಾನ್ಯ ಫ್ರಿಡ್ಜ್‌ನಲ್ಲೂ ಸಂರಕ್ಷಿಸಿಟ್ಟುಕೊಳ್ಳಬಹುದು. ಅತ್ಯಂತ ಸುಲಭವಾಗಿ ಸರಬರಾಜು ಮಾಡಬಹುದು' ಎಂದು ಆಕ್ಸ್‌ಫರ್ಡ್ ವ್ಯಾಕ್ಸಿನ್ ಗ್ರೂಪ್‌ನ ನಿರ್ದೇಶಕ ಆ್ಯಂಡ್ರ್ಯೂ ಪೊಲಾರ್ಡ್ ತಿಳಿಸಿದ್ದಾರೆ.



ಗಾಜಿಯಾಬಾದ್‌ನಲ್ಲಿ ಲಸಿಕೆ ಪ್ರಯೋಗಕ್ಕೆ ಒಳಗಾದ ಸ್ವಯಂ ಸೇವಕ.

## ಸ್ಪುಟ್ನಿಕ್- 5 ಶೇ.95 ಪರಿಣಾಮಕಾರಿ!

'ರಷ್ಯಾ ಸಿದ್ಧಪಡಿಸಿರುವ ಸ್ಪುಟ್ನಿಕ್-5 ಲಸಿಕೆ ಶೇ.95 ಪರಿಣಾಮಕಾರಿ' ಎಂದು ರಷ್ಯನ್ ಡೈರೆಕ್ಟ್ ಇನ್ವೆಸ್ಟ್‌ಮೆಂಟ್ ಫಂಡ್ (ಆರ್‌ಡಿಐಎಫ್) ಸಿಇಒ ಕಿರಿಲ್ ಡಿಮಿಟ್ರೀವ್ ತಿಳಿಸಿದ್ದಾರೆ. 'ಇದು ಕೇವಲ ರಷ್ಯಾಕ್ಕೆ ಮಾತ್ರ ಸಿಹಿಸುದ್ದಿ ಅಲ್ಲ, ವಿಶ್ವಕ್ಕೇ ಮಹಾನ್ ಸುದ್ದಿ, ಏಕೆಂದರೆ, ಹೆಚ್ಚು ಪರಿಣಾಮಕಾರಿಯಾಗಿರುವ ಲಸಿಕೆಗಳಲ್ಲಿ ಒಂದಾಗಿರುವ ಸ್ಪುಟ್ನಿಕ್-5 ಕೈಗೆಟುಕುವ ದರದಲ್ಲಿ ಲಭ್ಯವಾಗಲಿದೆ' ಎಂಬ ಭರವಸೆ ನೀಡಿದ್ದಾರೆ. ರಷ್ಯಾದ ಗ್ಯಾಮೆಲಿಯಾ ಸಂಶೋಧನಾ ಕೇಂದ್ರ, ಹೈದರಾಬಾದ್‌ನ ಡಾ. ರೆಡ್ಡೀಸ್ ಲ್ಯಾಬ್‌ನ ಸಹಭಾಗಿತ್ವದೊಂದಿಗೆ ಭಾರತದಲ್ಲಿ ಲಸಿಕೆ ಪ್ರಯೋಗ ನಡೆಸುತ್ತಿದೆ.

## ಕೈದಿಗಳಿಗೆ ಕೊರೊನಾ ತಂದ ಪರೋಲ್ ಗಿಫ್ಟ್

ಕೊರೊನಾದಿಂದ ಯಾರಿಗೆ ನಷ್ಟವಾಗಿದೆಯೋ ಗೊತ್ತಿಲ್ಲ, ಆದರೆ ಕೈದಿಗಳಿಗೆ ಮಾತ್ರ ಈ ಬಿಕ್ಕಟ್ಟು ಭರ್ಜರಿ ಗಿಫ್ಟ್ ನೀಡಿದೆ. ಅದರಲ್ಲೂ ಮಧ್ಯಪ್ರದೇಶದಲ್ಲಿ 4 ಸಾವಿರ ಕೈದಿಗಳಿಗೆ ಪರೋಲ್ ಅವಧಿಯನ್ನು ಮತ್ತೆ 60 ದಿನಗಳವರೆಗೆ ವಿಸ್ತರಿಸಲಾಗಿದೆ! 2ನೇ ಅಲೆ ಭೀತಿಯಲ್ಲಿರುವ ಮಧ್ಯಪ್ರದೇಶದಲ್ಲಿ ಈಗಾಗಲೇ 4 ಸಾವಿರ ಕೈದಿಗಳನ್ನು ಪರೋಲ್ ರಜೆ ಮೇಲೆ ಮನೆಗಳಿಗೆ ಕಳುಹಿಸಲಾಗಿತ್ತು. ಕಳೆದೊಂದು ವಾರದಿಂದ ಸೋಂಕು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮತ್ತೆ 2 ತಿಂಗಳು ಪರೋಲ್ ನೀಡಲಾಗಿದೆ.

## ಸೈಡ್ ಎಫೆಕ್ಟ್ ತಡೆಗೆ ಎಇಎಫ್‌ಐ ತಂಡ ರಚಿಸಿ

ಲಸಿಕೆ ಬಂದಾದ ಮೇಲೆ 'ಸೈಡ್ ಎಫೆಕ್ಟ್' ಹಾವಳಿ ಇನ್ನೊಂದು ತಲೆನೋವು. ಇದನ್ನು ನಿಯಂತ್ರಿಸಲು ಎಲ್ಲ ರಾಜ್ಯ ಸರ್ಕಾರಗಳು, ಜಿಲ್ಲಾಡಳಿತಗಳು 'ರೋಗ ನಿರೋಧಕ ನಂತರದ ಪ್ರತಿಕೂಲ ಘಟನೆಗಳ ಕಣ್ಗಾವಲು ವ್ಯವಸ್ಥೆ' (ಎಇಎಫ್‌ಐ) ಜಾರಿಗೆ ತರುವಂತೆ ಆರೋಗ್ಯ ಸಚಿವಾಲಯ ಕಾರ್ಯದರ್ಶಿ ಡಾ. ಮನೋಹರ ಅಗ್ನಾನಿ, ಸರ್ಕಾರಗಳಿಗೆ ಪತ್ರ ಬರೆದಿದ್ದಾರೆ. 'ಲಸಿಕೆ ತಲುಪುವ ಮೊದಲೇ ಎಇಎಫ್‌ಐ ತಂಡ ರಚಿಸುವ ಅವಶ್ಯಕತೆ ಬಹಳ ಇದೆ. ನರರೋಗತಜ್ಞರು, ಹೃದ್ರೋಗ ತಜ್ಞರು, ಶ್ವಾಸಕೋಶ ತಜ್ಞರನ್ನೊಳಗೊಂಡ ತಂಡವಿದ್ದರೆ ಲಸಿಕೆ ಅಡ್ಡಪರಿಣಾಮಗಳನ್ನು ನಿಯಂತ್ರಿಸಬಹುದು' ಎಂದು ತಿಳಿಸಿದ್ದಾರೆ.

## ದೇಶದ ಹಲವೆಡೆ ಹೊಸ ನಿರ್ಬಂಧ

ಭಾರತದಾದ್ಯಂತ ಕೊರೊನಾ ಅಲೆಗಳು ಅಪ್ಪಳಿಸುತ್ತಲೇ ಇವೆ. ಈ ನಡುವೆ ಕೆಲವು ರಾಜ್ಯಗಳು ಹೊಸ ನಿರ್ಬಂಧಗಳನ್ನು ಜಾರಿಮಾಡಿವೆ. ಎಲ್ಲೆಲ್ಲಿ, ಏನೇನು ಕಟ್ಟಾಜ್ಞೆಗಳಿವೆ?




**ರಾಜಸ್ಥಾನ**
- ಸೋಂಕು ಅಧಿಕವಿರುವ 8 ಜಿಲ್ಲೆಗಳಲ್ಲಿ ರಾತ್ರಿ ಕರ್ಫ್ಯೂ
- ಜೈಪುರದಲ್ಲಿ ಸೆಕ್ಷನ್ 144 ಜಾರಿ
- ಮಾಸ್ಕ್ ಧರಿಸದವರಿಗೆ 500 ರೂ. ದಂಡ
- ಕೂಟಗಳಲ್ಲಿ 100 ಜನರಿಗೆ ಮಾತ್ರವೇ ಅವಕಾಶ

**ಹಿಮಾಚಲ ಪ್ರದೇಶ**
- ಸರ್ಕಾರಿ ಕಚೇರಿಗಳಲ್ಲಿ ಡಿ.15ರವರೆಗೆ ಅರ್ಧದಷ್ಟು ಸಿಬ್ಬಂದಿಯಿಂದ ಕೆಲಸ
- ಶಿಮ್ಲಾ, ಮಾಂಡಿ, ಕುಲ್ಲು ಮತ್ತು ಕಾಂಗ್ರಾ ಜಿಲ್ಲೆಗಳಲ್ಲಿ ರಾತ್ರಿ ಕರ್ಫ್ಯೂ

- ಡಿ.15ರವರೆಗೆ ರಾಜಕೀಯ ರ‍್ಯಾಲಿಗಳ ಮುಂದೂಡಿಕೆ
- ಮಾಸ್ಕ್ ದಂಡ- 1000 ರೂ.
- ಡಿ.15ರವರೆಗೆ ಶಾಲೆಗಳು ಬಂದ್
- ಒಳಾಂಗಣ ಸಮಾರಂಭಗಳಿಗೆ 100 ಅತಿಥಿಗಳ ಮಿತಿ.

**ಉತ್ತರಖಂಡ**
- ದೆಹಲಿ ಸೇರಿದಂತೆ ಅಕ್ಕಪಕ್ಕದ ರಾಜ್ಯಗಳಿಂದ ಬರುವವರಿಗೆ ಕಡ್ಡಾಯ ಪರೀಕ್ಷೆ

**ಉತ್ತರ ಪ್ರದೇಶ**
- ಸಮಾರಂಭಗಳಲ್ಲಿ ಕೇವಲ 100 ಅಥವಾ ಹಾಲ್‌ನ ಅರ್ಧದಷ್ಟು ಜನರಿಗೆ ಮಾತ್ರ ಅವಕಾಶ.

**ಗುಜರಾತ್**
- ಅಹ್ಮದಾಬಾದ್, ರಾಜ್‌ಕೋಟ್, ಸೂರತ್, ವಡೋದರಾಗಳಲ್ಲಿ ರಾತ್ರಿ ಕರ್ಫ್ಯೂ.
- ನ.23ರಿಂದ ಶಾಲೆ, ಕಾಲೇಜು ತೆರೆದಿದ್ದರೆ ಅದನ್ನು ತಾತ್ಕಾಲಿಕವಾಗಿ ಮುಂದೂಡುವುದು.

**ಹರ್ಯಾಣ**
- ನವೆಂಬರ್ ಅಂತ್ಯದವರೆಗೆ ಶಾಲೆಗಳು ಬಂದ್

- ಮದುವೆಗೆ- 100, ಅಂತ್ಯ ಸಂಸ್ಕಾರಕ್ಕೆ- 50 ಜನರ ಮಿತಿ.
- ಯಾವುದೇ ಪೂಜಾ ಕೇಂದ್ರಗಳ ಬಾಗಿಲು ತೆರೆಯುವಂತಿಲ್ಲ.

**ಒಡಿಶಾ**
- ಶಾಲೆ- ಕಾಲೇಜುಗಳು ಡಿಸೆಂಬರ್ ಅಂತ್ಯದವರೆಗೆ ಬಂದ್.

**ಮಹಾರಾಷ್ಟ್ರ**
- ದೆಹಲಿ, ರಾಜಸ್ಥಾನ, ಗೋವಾ, ಗುಜರಾತ್‌ಗಳಿಂದ ಬರುವವರು ಆರ್‌ಟಿ- ಪಿಸಿಆರ್ ನೆಗೆಟಿವ್ ವರದಿ ತರುವುದು ಕಡ್ಡಾಯ.
- ಮುಂಬೈನ ಎಲ್ಲ ಶಾಲೆಗಳೂ ಡಿ.31ರವರೆಗೆ ಬಂದ್
- ಸರ್ಕಾರಿ ಕಚೇರಿಗಳಲ್ಲಿ ಶೇ.50 ಸಿಬ್ಬಂದಿ, ಖಾಸಗಿ ಕಂಪನಿಗಳಲ್ಲಿ ಶೇ.30 ಸಿಬ್ಬಂದಿಗೆ ಅವಕಾಶ.
- ಮಾಸ್ಕ್ ದಂಡ- 200 ರೂ.

**ಮಧ್ಯಪ್ರದೇಶ**
- ಧಾರ್, ಶಿವಪುರಿ, ಜಬಲ್ಪುರ, ಭೋಪಾಲ್, ಗ್ವಾಲಿಯರ್, ಇಂಡೋರ್, ರಟ್ಲಾಂ, ವಿದಿಶಾಗಳಲ್ಲಿ ರಾತ್ರಿ ಕರ್ಫ್ಯೂ.
- ಇಂದೋರ್‌ನಲ್ಲಿ ಸಾರ್ವಜನಿಕ ಕೂಟಗಳಿಗೆ 250, ಗ್ವಾಲಿಯರ್- ಭೋಪಾಲ್‌ನಲ್ಲಿ 200 ಮಿತಿ.
- ಶಾಲೆಗಳು ಬಂದ್. 9- 12ನೇ ತರಗತಿಯ ವಿದ್ಯಾರ್ಥಿಗಳು ಮಾರ್ಗದರ್ಶನಕ್ಕೆ ಶಾಲೆಗೆ ಭೇಟಿ.

**ಗೋವಾ**
- ಮಾಸ್ಕ್ ದಂಡ 200 ರೂ.ಗೆ ಏರಿಕೆ
- ಮಹಾರಾಷ್ಟ್ರ, ದೆಹಲಿ, ರಾಜಸ್ಥಾನ, ಗೋವಾ, ಗುಜರಾತ್‌ಗಳಿಂದ ಬರುವವರಿಗೆ ಆರ್‌ಟಿ- ಪಿಸಿಆರ್ ನೆಗೆಟಿವ್ ವರದಿ ಕಡ್ಡಾಯ.

**ತೆಲಂಗಾಣ**
- ಶೇ.50ರ ಪ್ರೇಕ್ಷಕ ಉಪಸ್ಥಿತಿಯಲ್ಲಿ ಕಂಟೈನ್‌ಮೆಂಟ್ ಪ್ರದೇಶ ಹೊರಗಿನ ಚಿತ್ರಮಂದಿರ, ಮಲ್ಟಿಪ್ಲೆಕ್ಸ್ ತೆರೆಯಬಹುದು.

ಸಂಜೆವಾಣಿ
1982

| Date | 24-11-2020 |
| --- | --- |
| Page No | 2 |

# ರಾಜಕೀಯ ನಾಯಕರ ಫೋಟೋ ಬಳಕೆ ಬಿಬಿಎಂಪಿ ಎಚ್ಚರಿಕೆ

ಬೆಂಗಳೂರು, ನ. 24– ಮಹಾನಗರ ಪಾಲಿಕೆ ವತಿಯಿಂದ ಕೈಗೆತ್ತಿಕೊಳ್ಳುವ ಯೋಜನೆಗಳಿಗೆ ರಾಜಕಾರಣಿಗಳ ಫೋಟೋ ಬಳಸಿದರೆ, ಕ್ರಿಮಿನಲ್ ಕೇಸ್ ದಾಖಲು ಮಾಡಲಾಗುವುದು ಎಂದು ದಾಖಲು ಮಾಡಲಾಗುವುದು ಎಂದು ಬಿಬಿಎಂಪಿ ಆಯುಕ್ತ ಎನ್. ಮಂಜುನಾಥ್ ಪ್ರಸಾದ್ ಸುತ್ತೋಲೆ ಹೊರಡಿಸಿದ್ದಾರೆ.

ಬಸ್ ನಿಲ್ದಾಣಗಳು, ನೀರಿನ ಘಟಕಗಳು ಸೇರಿದಂತೆ, ಸಾರ್ವಜನಿಯ ಸ್ಥಳಗಳಲ್ಲಿ ಬಿಬಿಎಂಪಿ ಕೈಗೆತ್ತಿಕೊಳ್ಳುವ ಯೋಜನೆಗಳು ಮತ್ತು ಕಾಮಗಾರಿಗಳಲ್ಲಿ ರಾಜಕೀಯ ನಾಯಕರ ಫೋಟೋಗಳನ್ನು ಹಾಕುವಂತಿಲ್ಲ. ಹಾಗೊಂದು ವೇಳೆ ಹಾಕಿದರೆ, ಅಂತಹವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲು ಮಾಡುವಂತೆ ಎಲ್ಲಾ 8 ವಲಯಗಳ ಜಂಟಿ ಆಯುಕ್ತರು ಮತ್ತು ಇಂಜಿನಿಯರ್ ಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಸಾಮಾಜಿಕ ಕಾರ್ಯಕರ್ತ ಸಾಯಿದತ್ತ ಅವರ ದೂರಿನ ಆಧಾರದ ಮೇಲೆ ಮಂಜುನಾಥ್ ಪ್ರಸಾದ್ ಈ ಕ್ರಮ ಕೈಗೊಂಡಿದ್ದಾರೆ. ಬೆಂಗಳೂರಿನ ಸಾರ್ವಜನಿಯ ಸ್ಥಳಗಳಾದ ನೀರಿನ ಘಟಕ ಸೇರಿದಂತೆ, ಬಿಬಿಎಂಪಿ ಕಾಮಗಾರಿಗಳಲ್ಲಿ ರಾಜಕೀಯ ನಾಯಕರ ಫೋಟೋಗಳು ಇದ್ದರೆ, ಈ ಕೂಡಲೇ ತೆಗೆದುಹಾಕುವಂತೆ ಅವರು ಸೂಚನೆ ನೀಡಿದ್ದಾರೆ.

ಸಂಜೆವಾಣಿ
1982

| Date | 24-11-2020 |
|---|---|
| Page No | 8 |

# ವಾಯುಭಾರ ಕುಸಿತ ರಾಜ್ಯದ ಹಲವೆಡೆ ಮಳೆ

ಬೆಂಗಳೂರು, ನ 24– ಬಂಗಾಳ ಉಪಸಾಗರದ ನೈಋತ್ಯ ಭಾಗದಲ್ಲಿ ವಾಯುಭಾರ ಕುಸಿತವಾಗಿರುವುದರಿಂದ ಮುಂದಿನ 24 ಗಂಟೆಯಲ್ಲಿ ಮತ್ತಷ್ಟು ತೀವ್ರವಾಗಿ 'ನಿವಾರ್' ಚಂಡಮಾರುತ ಅಪ್ಪಳಿಸುವ ಸಾಧ್ಯತೆ ಇದ್ದು, ಬೆಂಗಳೂರು ಸೇರಿದಂತೆ ಹಲವೆಡೆ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದಿ ಹವಾಮಾನ ಇಲಾಖೆಯ ಪ್ರಾದೇಶಿಕ ನಿರ್ದೇಶಕರು ತಿಳಿಸಿದ್ದಾರೆ.

ಇದರ ಪ್ರಭಾವದಿಂದ ಕೋಲಾರ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ರಾಮನಗರ, ತುಮಕೂರು, ಮಂಡ್ಯ, ಚಾಮರಾಜನಗರ ಭಾರಿ ಮಳೆಯಾಗಲಿದೆ. ಈ ಹಿನ್ನೆಲೆ ನವೆಂಬರ್ 25 ಹಾಗೂ 26 ರಂದು ಈ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ ಎಂದು ಹವಾಮಾನ ಇಲಾಖೆಯ ಪ್ರಾದೇಶಿಕ ನಿರ್ದೇಶಕರಾದ ಸಿ. ಎಸ್. ಪಾಟೀಲ್ ತಿಳಿಸಿದ್ದಾರೆ. ನಿವಾರ್ ಸೈಕ್ಲೋನ್ ನಾಳೆ ಪಾಂಡಿಚೇರಿ ಹಾಗೂ ತಮಿಳುನಾಡು ಕರಾವಳಿಯನ್ನು ದಾಟಿ, ಕರೈಕಲ್ ಮತ್ತು ಮಹಾಬಲಿಪುರಂಗೆ ಬರುವ ಸಾಧ್ಯತೆ ಹೆಚ್ಚಿದೆ.

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ

| Date | 24-11-2020 |
|---|---|
| Page No | 1 |

## • ಬಿಬಿಎಂಪಿಯಿಂದ

# ಕಸ ನಿರ್ವಹಣಾ ಪ್ರಾಧಿಕಾರ

**ಬೆಂಗಳೂರು, ನ.24-** ಬೆಂಗಳೂರು ಮಹಾನಗರದ ಕಸದ ಸಮಸ್ಯೆಯ ಶಾಶ್ವತ ನಿವಾರಣೆಗಾಗಿ ಬಿಬಿಎಂಪಿ ಕಸ ನಿಯಂತ್ರಣ ಪ್ರಾಧಿಕಾರ ರಚಿಸಲು ತೀರ್ಮಾನಿಸಿದೆ.

ಬೆಂಗಳೂರು ಮಹಾನಗರದಲ್ಲಿ ಕಸದ ಸಮಸ್ಯೆ ದಿನದಿಂದ ದಿನಕ್ಕೆ ಉಲ್ಬಣಗೊಳ್ಳುತ್ತಲೇ ಇದೆ. ಮಾಫಿಯಾಗಳ ಕೈಯಲ್ಲಿ ಕಸ ವಿಲೇವಾರಿ ಇರುವುದರಿಂದ ಟೆಂಡರ್ ಗುತ್ತಿಗೆಗೆ ಪದೇ ಪದೇ ಅಡ್ಡಿಯಾಗುತ್ತಿರುವುದರಿಂದ ...ಪುಟ 2

## ಪ್ರಾಧಿಕಾರ

ಕಸದ ಸಮಸ್ಯೆ ನಿವಾರಣೆಯಾಗುತ್ತಲೇ ಇಲ್ಲ.

ಪ್ರತಿದಿನ ನಗರದ ಒಂದಲ್ಲ ಒಂದು ಕಡೆ ಕಸದ ಸಮಸ್ಯೆ ಇದ್ದೇ ಇರುತ್ತದೆ. ಜಾಗತಿಕ ಮಟ್ಟದಲ್ಲಿಯೂ ಕೂಡ ಬೆಂಗಳೂರಿನ ಕಸದ ಸಮಸ್ಯೆ ಮಾರ್ದನಿಸಿದ ಉದಾಹರಣೆ ನಮ್ಮ ಕಣ್ಣ ಮುಂದಿದೆ. ಕಸದ ಸಮಸ್ಯೆಗೆ ಮುಕ್ತಿ ಹಾಡಲು ಜಾಗತಿಕ ಮಟ್ಟದ ಟೆಂಡರ್ ಕರೆದರೂ ಕಾನೂನಿನ ಅಡ್ಡಿಯಾಗಿ ಒಬ್ಬರ ಕಾಲು ಒಬ್ಬರೆಳೆದು ಕಸದ ಸಮಸ್ಯೆ ಬಗೆಹರಿಯದೆ ಸಾರ್ವಜನಿಕರಿಗೆ ಸಾಕಷ್ಟು ತೊಂದರೆಯಾಗುತ್ತಲೇ ಇತ್ತು.

ಜನಪ್ರತಿನಿಧಿಗಳು ಕೂಡ ಸಮಸ್ಯೆ ನಿವಾರಣೆ ಮಾಡುವುದಕ್ಕಿಂತ ಕಸದ ಗುತ್ತಿಗೆ ನೀಡುವಲ್ಲಿ ತಮ್ಮವರಿಗೆ ಟೆಂಡರ್ ಕೊಡಿಸುವಲ್ಲೇ ಹೆಚ್ಚಿನ ಪ್ರಭಾವ ಬೀರುತ್ತಿದ್ದ ಪರಿಣಾಮ ಕಸದ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗುತ್ತಿರಲಿಲ್ಲ.

ಪ್ರಸ್ತುತ ಕಸದ ಸಮಸ್ಯೆಗೆ ಶಾಶ್ವತ ಪರಿಹಾರ ಹುಡುಕುವ ನಿಟ್ಟಿನಲ್ಲಿ ಕಸದ ಪ್ರಾಧಿಕಾರ ರಚನೆ ಮಾಡುವ ತೀರ್ಮಾನಕ್ಕೆ ಬಂದಿರುವ ಬಿಬಿಎಂಪಿ ಈ ಸಂಬಂಧ ರೂಪುರೇಷೆ ಸಿದ್ಧಪಡಿಸಿದೆ.

ಸರ್ಕಾರವು ಕೂಡ ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದೆ. ವಾರ್ಡ್ ಮಟ್ಟದಲ್ಲಿ ಹಸಿ ಕಸ, ಒಣ ಕಸ, ವೈದ್ಯಕೀಯ ಕಸ, ಇ-ತ್ಯಾಜ್ಯಗಳನ್ನು ಪ್ರತ್ಯೇಕವಾಗಿ ಪಡೆಯುವುದು ಮತ್ತು ವಿಲೇವಾರಿ ಮಾಡುವುದು, ಕಸ ನಿಯಂತ್ರಣ ಪ್ರಾಧಿಕಾರಕ್ಕೆ ಐಎಎಸ್ ಅಧಿಕಾರಿಯೊಬ್ಬರನ್ನು ನೇಮಿಸಿ ಯಾವ ಜನಪ್ರತಿನಿಧಿಗಳೂ ಹಸ್ತಕ್ಷೇಪವಾಗದಂತೆ ನಿಯಮಗಳನ್ನು ರೂಪಿಸಲಾಗುತ್ತಿದೆ.

ಯಾವುದೇ ರೀತಿ ತೊಂದರೆಯಾಗದಂತೆ, ಪದೇ ಪದೇ ಅಡಚಣೆಯಾಗದಂತೆ ಕಸ ವಿಲೇವಾರಿಗೆ ಗುತ್ತಿಗೆ ನೀಡಿ ಸೂಕ್ತ ರೀತಿಯಲ್ಲಿ ಕಸ ವಿಲೇವಾರಿ ಮಾಡುವ ನಿಯಮಾವಳಿಗಳನ್ನು ರೂಪಿಸಲಾಗುತ್ತಿದೆ.

ಒಟ್ಟಾರೆ ಭವಿಷ್ಯದಲ್ಲಿ ಬೆಂಗಳೂರಿನಲ್ಲಿ ಕಸದ ಸಮಸ್ಯೆ ಬರದ ರೀತಿಯಲ್ಲಿ ಕಸ ನಿಯಂತ್ರಣ ಪ್ರಾಧಿಕಾರ ಕೆಲಸ ನಿರ್ವಹಿಸಲಿದೆ. ಈ ನಿಟ್ಟಿನಲ್ಲಿ ಪ್ರಾಧಿಕಾರವನ್ನು ರಚನೆ ಮಾಡಲಾಗುತ್ತಿದೆ.

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ

| | |
|---|---|
| Date | 24-11-2020 |
| Page No | 8 |

# ಚೆನ್ನಾಗಿದ್ದ ರಸ್ತೆ ಹಾಳು..

ರಾಜಾಜಿನಗರದ ಐದನೆ ಬ್ಲಾಕ್ 61ನೆ ಕ್ರಾಸ್‌ನಲ್ಲಿ ಚೆನ್ನಾಗಿದ್ದ ರಸ್ತೆಯ ಮಧ್ಯೆಯೇ ಗುಂಡಿ ತೆಗೆದು 10 ದಿನ ಕಳೆದರೂ ಅದನ್ನು ಮುಚ್ಚದೆ ನಿರ್ಲಕ್ಷಿಸಲಾಗಿದೆ. ಬಿಬಿಎಂಪಿಗೆ ತಿಳಿಸಿ 10 ದಿನವಾದರೂ ಯಾರೂ ಕೂಡ ಕ್ರಮ ಕೈಗೊಳ್ಳುತ್ತಿಲ್ಲ. ರಾತ್ರಿ ವೇಳೆ ವಾಹನ ಚಾಲಕರು ಬಿದ್ದು ಅನಾಹುತ ಸಂಭವಿಸಿದರೆ ಯಾರು ಹೊಣೆ ಎಂದು ಸ್ಥಳೀಯರು ಬಿಬಿಎಂಪಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

